ದಶಮಾನ ಕಂಡ ಜಿಲ್ಲೆಯ ಮೊದಲ ಪ್ರಾದೇಶಿಕ ದಿನ ಪತ್ರಿಕೆ

ದಾವಣಗೆರೆ, ಉಡುಪಿ, ಶಿವಮೊಗ್ಗ, ಹಾಸನ, ಚಿಕ್ಕಮಗಳೂರು, ಗದಗ, ಬೆಂಗಳೂರು , ಬೆಂಗಳೂರು ಗ್ರಾಮಾಂತರ

KB 12 YEARS 2013

# ಕನ್ನಡ ಭಾರತಿ

ನೊಂದವರ ನೈಜ ಕನ್ನಡಿ

ಸಂಪಾದಕರು :
ಮಲ್ಲಿಕಾರ್ಜುನ್ ಕಬ್ಬೂರು

ಸಂಪುಟ : 13 ಸಂಚಿಕೆ : 159
6–12–2025 ಶನಿವಾರ

₹1 KA/SK/DVG-006/2023-2025 KARKAN/2013/50807 KANNADA BHARATHI REGIONAL DALIY DAVANAGERE dvgkanndabharathi@gmail.com Page : 6 VOLUME : 13 ISSUE : 159

## ಇಂದು ವಕೀಲರ ದಿನಾಚರಣೆ

**ದಾವಣಗೆರೆ:** ಜಿಲ್ಲಾ ವಕೀಲರ ಸಂಘದಿಂದ ವಕೀಲರ ದಿನಾಚರಣೆ ಕಾರ್ಯಕ್ರಮವನ್ನು ಡಿ.6 ರ ಇಂದು ಬೆಳಿಗ್ಗೆ 11–45 ಕ್ಕೆ ನಗರದ ದೇವರಾಜ ಅರಸು ಬಡಾವಣೆಯಲ್ಲಿರುವ ಜಿಲ್ಲಾ ವಕೀಲರ ಸಾಂಸ್ಕೃತಿಕ ಸಭಾ ಭವನದಲ್ಲಿ ಹಮ್ಮಿಕೊಳ್ಳಲಾಗಿದೆ.

ಸಂಘದ ಅಧ್ಯಕ್ಷ ಟಿ.ಆರ್. ಗುರುಬಸವರಾಜ್ ಅಧ್ಯಕ್ಷತೆಯಲ್ಲಿ ನಡೆಯುವ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ರಾಜ್ಯ ಉಚ್ಚ ನ್ಯಾಯಾಲಯದ ನ್ಯಾಯಾಧೀಶರಾದ ರವಿ ವಿ. ಹೊಸಮನಿ ಪಾಲ್ಗೊಳ್ಳಲಿದ್ದಾರೆ. ಸಂಪನ್ಮೂಲ ವ್ಯಕ್ತಿಯಾಗಿ ಆಗನಿಸುವ ಕಾನೂನು ಮತ್ತು ಸಂಸದೀಯ ಸುಧಾರಣಾ ಸಂಸ್ಥೆಯ ನಿರ್ದೇಶಕ ಡಾ. ಸಿ.ಎಸ್. ಪಾಟೀಲ್ ಅವರು 'ವಕೀಲಿಕೆ ಒಂದು ಸ್ವಾಯತ್ತ ಮತ್ತು ಸ್ವತಂತ್ರ ವೃತ್ತಿ' ವಿಷಯ ಕುರಿತು ಉಪನ್ಯಾಸ ನೀಡಲಿದ್ದಾರೆ.ಪ್ರಧಾನ ಜಿಲ್ಲಾ ಮತ್ತು ಸತ್ರ ನ್ಯಾಯಾಧೀಶರಾದ ಡಿ.ಕೆ.ವೇಲಾ ಉಪಸ್ಥಿತರಿರುವರು.

## ಧರಾಮ ಕಾಲೇಜಿನ ಹಳೆಯ ವಿದ್ಯಾರ್ಥಿಗಳ ಸಂಘಕ್ಕೆ ನೋಂದಣಿಗೆ ವಿನಂತಿ

**ದಾವಣಗೆರೆ:** ಬಾಪೂಜಿ ವಿದ್ಯಾಸಂಸ್ಥೆಯ ಧ.ರಾ.ಮ. ವಿಜ್ಞಾನಲನ ಕಾಲೇಜಿನ ಹಳೆಯ ವಿದ್ಯಾರ್ಥಿಗಳ ಸಂಘದಿಂದ ಹಿರಿಯ ವಿದ್ಯಾರ್ಥಿಗಳ ಸಮ್ಮಿಲನ–2025 ಕಾರ್ಯಕ್ರಮವನ್ನು ಕಾಲೇಜಿನ ಆವರಣದಲ್ಲಿ ಹಮ್ಮಿಕೊಳ್ಳಲಾಗಿದೆ.

ಇದೇ ಕಾಲೇಜಿನಲ್ಲಿ ಅಭ್ಯಾಸಿಸಿದ ಎಲ್ಲಾ ವಿದ್ಯಾರ್ಥಿಗಳು ಸಂಘದ ಸದಸ್ಯರಾಗಿ, ಸಮ್ಮಿಲನ ಕಾರ್ಯಕ್ರಮದಲ್ಲಿ ಭಾಗವಹಿಸಿ, ಸಂಘದ ಚಟುವಟಿಕೆಗಳಲ್ಲಿ ಸಕ್ರಿಯವಾಗಿ ಪಾಲ್ಗೊಳ್ಳಬೇಕೆಂದು ಕಾಲೇಜಿನ ಪ್ರಾಂಶುಪಾಲೆ ಎಂ.ಪಿ. ರೂಪಶ್ರೀ ವಿನಂತಿಸಿದ್ದು, ಸಂಘದ ಸದಸ್ಯರಾಗಲು ಇಚ್ಛಿಸುವವರು ತಮ್ಮ ಮೊಬೈಲ್ ಸಂಖ್ಯೆ – 9449773064 ಅಥವಾ ವಿದ್ಯಾರ್ಥಿ ಸಂಘದ ಸಹ ಕಾರ್ಯದರ್ಶಿ ಡಾ.ಎಂ.ಆರ್.ಜಗದೀಶ್ ಮೊ: 9740776111 ಇವರನ್ನು ಸಂಪರ್ಕಿಸಬಹುದು ಮತ್ತು ಕಾಲೇಜಿನ WEB-SITE:-drmsciencecollege.inನಲ್ಲೂ ಕೂಡ ನೋಂದಣೆ ಮಾಡಿಸಬಹುದು ಎಂದು ತಿಳಿಸಿದ್ದಾರೆ.

## ಶ್ರೀ ವಿನಾಯಕ, ಶ್ರೀ ಆಂಜನೇಯನ ಕಡೇಕೋತ್ಸವ ಇಂದು

**ದಾವಣಗೆರೆ:** ಇಲ್ಲಿನ ಕೆ.ಆರ್ ರಸ್ತೆಯಲ್ಲಿರುವ ಶ್ರೀ ವಿನಾಯಕ ಸ್ವಾಮಿ ಮತ್ತು ಶ್ರೀ ಆಂಜನೇಯಸ್ವಾಮಿ ಹಾಗೂ ನವಗ್ರಹಗಳ ದೇವಾಲಯದಲ್ಲಿ ಡಿ.6 ಇಂದು ಸಂಜೆ 7 ಗಂಟೆಗೆ ಕಡೇ ಕಾರ್ತಿಕೋತ್ಸವವು ಜರುಗಲಿದ್ದು,ಭಕ್ತರು ಆಗಮಿಸಿ ದೇವರ ಕೃಪೆಗೆ ಪಾತ್ರವಾಗುವಂತೆ ಕರ್ನಾಟಕ ಯೂತ್ಸ್ ಅಸೋಸಿಯೇಷನ್

## ದಾಸೋಹ ಚಕ್ರವರ್ತಿ ದಾನೇಶ್ವರ ಸ್ವಾಮೀಜಿ ಲಿಂಗೈಕ್ಯ, ಶೋಕ ಸಾಗರದಲ್ಲಿ ಭಕ್ತರು

**ಬಾಗಲಕೋಟೆ:** ಬಾಗಲಕೋಟೆ ಜಿಲ್ಲೆ ರಬಕವಿಬನಹಟ್ಟಿ ನಗರದ



ಬಂಡಿಗಣಿ ಮಠದ ದಾಸೋಹ ಚಕ್ರವರ್ತಿ ದಾನೇಶ್ವರ ಸ್ವಾಮೀಜಿ ಲಿಂಗೈಕ್ಯರಾಗಿದ್ದಾರೆ. 75 ವರ್ಷದ ದಾನೇಶ್ವರ ಸ್ವಾಮೀಜಿ ಸಕ್ಕರೆ ಕಾಯಿಲೆಯಿಂದ ಬಳಲು ತ್ತಿದ್ದು ಅವರನ್ನು ನಾಲ್ಕು ದಿನಗಳ ಹಿಂದೆ ಬೆಳಗಾವಿಯ ಖಾಸಗಿ ಆಸ್ಪತ್ರೆಗೆ ದಾಖಲಿಸಲಾಗಿತ್ತು. ಆದರೆ ಚಿಕಿತ್ಸೆ ಫಲಕಾರಿಯಾಗದೇ ಶುಕ್ರವಾರ ನಿಧನರಾಗಿದ್ದಾರೆ. ಶ್ರೀಗಳಿಗೆ ವೆಂಟಿಲೇಟರ್ ನಲ್ಲಿ ಚಿಕಿತ್ಸೆ ನೀಡಲಾಗುತ್ತಿತ್ತು. ಸ್ವಾಮೀಜಿಯ ನಿಧನದ ಸುದ್ದಿ ಲಕ್ಷಾಂತರ ಭಕ್ತರು ಶೋಕ ಸಾಗರದಲ್ಲಿ ಮುಳುಗಿದ್ದಾರೆ. ದಾಸೋಹದ ಮೂಲಕವೇ ಹೆಸರುವಾಸಿಯಾಗಿದ್ದ ಶ್ರೀಗಳು ಇತ್ತೀಚೆಗೆ ಬಂಡಿಗಣಿಯಲ್ಲಿ ಸರ್ವಧರ್ಮ ಸಮಾವೇಶವನ್ನು ಆಯೋಜಿಸಿದ್ದರು. ನಾಳೆ ಸಂಜೆ 4 ಗಂಟೆಗೆ ಶ್ರೀಗಳ ಅಂತ್ಯಸಂಸ್ಕಾರ ನೆರವೇರಿಸಲಾಗುತ್ತದೆ ಎಂದು ಮೂಲಗಳು ತಿಳಿಸಿದೆ.

### ರಾಜ್ಯ ಸರ್ಕಾರದ ವಿರುದ್ಧ ಮತ್ತೊಂದು ಹಗರಣ

# ಕೆಎಸ್‌ಡಿಎಲ್‌ನಲ್ಲಿ 1000 ಕೋಟಿ ರೂಪಾಯಿ ಭ್ರಷ್ಟಾಚಾರ ಆರೋಪ

**ಬೆಂಗಳೂರು :** ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಯಮಿತದಲ್ಲಿ ಗಂಧದ ಎಣ್ಣೆ ಖರೀದಿಯಲ್ಲಿ 1000 ಕೋಟಿ ರೂ ಭ್ರಷ್ಟಾಚಾರವಾಗಿದೆ ಎಂದು ಜೆಡಿಎಸ್ ಶಾಸಕ ಹೆಚ್.ಟಿ ಮಂಜು ಸರ್ಕಾರದ ವಿರುದ್ಧ ಗಂಭೀರ ಆರೋಪ ಮಾಡಿದ್ದಾರೆ. ಕೆಎಸ್‌ಡಿಎಲ್‌ನಲ್ಲಿ ಸಾಬೂನು ತೈಲ ಕಚ್ಚಾ ಸಾಮಾಗ್ರಿಗಳ ಖರೀದಿಯಲ್ಲಿ ಭ್ರಷ್ಟಾಚಾರ ನಡೆದಿದೆ. ಕಂಪನಿಗೆ ಮಾಹಿತಿ ಕೇಳಿ ಪತ್ರ ಬರೆದಿದ್ದು, ಯಾವುದೇ ಮಾಹಿತಿ ನೀಡಿಲ್ಲ ಎಂದು ಹೇಳಿದ್ದಾರೆ.

**ಗಂಧದ ಎಣ್ಣೆ ಖರೀದಿಯಲ್ಲಿ ಭ್ರಷ್ಟಾಚಾರ ಆಗಿದೆ :** ವಿಧಾನಸೌಧದಲ್ಲಿ ಆಯೋಜಿಸಿದ್ದ ಸುದ್ದಿಗೋಷ್ಠಿಯಲ್ಲಿ ಮಾತನಾಡಿದ ಜೆಡಿಎಸ್ ಶಾಸಕ ಹೆಚ್.ಟಿ ಮಂಜು, ಗಂಧದ ಎಣ್ಣೆ ಖರೀದಿಯಲ್ಲಿ 1000 ಕೋಟಿ ರೂ ಭ್ರಷ್ಟಾಚಾರ ಆಗಿದೆ. 800 ಪುಟಗಳ ವರದಿಯನ್ನ ಪಡೆದಿದ್ದೇವೆ. 9 ಟೆಂಡರ್‌ದಾಖಲೆಗಳು ಮಾತ್ರ ಸಿಕ್ಕಿವೆ. ಸರ್ಕಾರದ ಮುಖ್ಯಕಾರ್ಯದರ್ಶಿ, ಇಲಾಖೆಯ ಸಚಿವರು, ಸಿಎಂಗೆ ಪತ್ರ ಬರೆದಿದ್ದು, ಯಾರೊಬ್ಬರೂ ಈವರೆಗೆ ಉತ್ತರ ನೀಡಿಲ್ಲ ಎಂದಿದ್ದಾರೆ.

### ಸುಳ್ಳು ಹೇಳಿದರೆ ಒದ್ದು ಒಳಗೆ ಹಾಕುತ್ತೇನೆ: ಸಚಿವ ಎಂ.ಬಿ. ಪಾಟೀಲ್



ಈ ಕುರಿತಾಗಿ ಸಚಿವ ಎಂಬಿ ಪಾಟೀಲ್ ಪ್ರತಿಕ್ರಿಯಿಸಿದ್ದು, ನಾನು ನೋಡಿಲ್ಲ, ತಿಳಿದುಕೊಳ್ಳುತ್ತೇನೆ. ಅದಕ್ಕೆ ಸ್ಪಷ್ಟೀಕರಣ ಕೊಡುತ್ತೇವೆ. ಅವ್ಯವಹಾರ ಆಗಿದ್ದರೆ ನಿರ್ದಾಕ್ಷಿಣ್ಯವಾಗಿ ಕ್ರಮಕೈಗೊಳ್ಳು ತ್ತೇವೆ. ತಿಮಿಂಗಲು ಇದ್ದಾವೆ, ಅವೆಲ್ಲಾ ಈ ರೀತಿ ಆರೋಪ ಮಾಡುತ್ತಿದ್ದಾರೆ. ಯಾರು ಆರೋಪ ಮಾಡಿದ್ದಾರೆ ಅನ್ನೋದನ್ನ ಹೇಳಿದರೆ ಒದ್ದು ಒಳಗೆ ಹಾಕುತ್ತೇನೆ ಎಂದಿದ್ದಾರೆ.

ಕರ್ನಾಟಕ ಸಾಬೂನು ಮತ್ತು ಮಾರ್ಜಕ ನಿಯಮಿತ 1918ರಲ್ಲಿ ಆರಂಭವಾದ ಸಂಸ್ಥೆ. 1500 ಕೋಟಿ ರೂ ಠೇವಣಿಯ ಹಣ ಕೊಟ್ಟಿದ್ದಾರೆ. ನಕಲಿ ದಾಖಲೆ ಮಾಡಿ ಕೊಟ್ಟಿದ್ದಾರೆ. ಮಾರಾಟವಾಗಿಲ್ಲ ಅಂತ 40% ರಿಯಾಯಿತಿಗೆ ಮಾರಾಟ ಮಾಡಿದ್ದಾರೆ ಎಂದು ಹೇಳಿದ್ದಾರೆ.

**ಬ್ಲಾಕ್ ಲಿಸ್ಟ್‌ಗೆ ಸೇರಿದ ಕಂಪನಿಗೆ ಟೆಂಡರ್ :** ಬ್ಲಾಕ್ ಲಿಸ್ಟ್‌ಗೆ ಸೇರಿಸಿರುವ ಕರ್ನಾಟಕ ಅರೋಮಾಸ್ ಎಂಬ ಕಂಪನಿಗೆ ಟೆಂಡರ್ ಕೊಡುತ್ತಾರೆ. ಟೆಂಡರ್‌ನಲ್ಲಿ ಪಾಲಿಸಬೇಕಾದ ನಿಯಮ ಪಾಲಿಸಿಲ್ಲ. ಹೊರಗಡೆಯಿಂದ ಆಮದು ಮಾಡಿಕೊಳ್ಳುತ್ತಿದ್ದೇವೆ ಅಂತಾರೆ ಆದರೆ ದಾಖಲೆ ನೀಡುತ್ತಿಲ್ಲ. ಇಲ್ಲಿನ ಎಣ್ಣೆಯನ್ನೇ ಖರೀದಿ ಮಾಡಿದ್ದಾರೆ. ಯಾವುದೇ ಉಖಖಿ ಕಟ್ಟಿಲ್ಲ. 2025ರ ಮೇ ತಿಂಗಳಿನಲ್ಲಿ ನಾನು ಪತ್ರ ಬರೆದಿದ್ದೆ. ಆಗ 1ಕೆ.ಜಿ ಗಂಧದ ಎಣ್ಣೆಗೆ 2 ಲಕ್ಷ 24 ಸಾವಿರ ರೂ. ಇತ್ತು. 7500 ಮೆಟ್ರಿಕ್ ಟನ್‌ಗೆ 93,116 ರೂ. ಟೆಂಡರ್ ಕೊಡುತ್ತಾರೆ. 17 ಸಾವಿರ ಕೋಟಿ ರೂ. ವ್ಯತ್ಯಾಸ ಬರುತ್ತಿದೆ.



ದಾವಣಗೆರೆ ತಾಲೂಕಿನ ರಾಮಗೊಂಡನಹಳ್ಳಿ ಗ್ರಾಮದಲ್ಲಿ ರಿಯಲ್ ಎಸ್ಟೇಟ್ ದಂಧೆಗೆ ಅಡಿಕೆ ತೋಟವೊಂದು ಬಲಿಯಾಗಿದೆ. ರಿಯಲ್ ಎಸ್ಟೇಟ್‌ಗೆ ಕೃಷಿ ಭೂಮಿ ಕರಗಲಾರಂಭಿಸಿದೆ.

## ರಾಟ್‌ವೀಲರ್ ನಾಯಿಗಳ ದಾಳಿಗೆ ಮಹಿಳೆ ಸಾವು





**ದಾವಣಗೆರೆ.ಡಿ.5:** ತಡರಾತ್ರಿ ಮಹಿಳೆಯೊಬ್ಬರು ತಮ್ಮ ಗ್ರಾಮದ ರಸ್ತೆಯಲ್ಲಿ ನಡೆದುಕೊಂಡು ಹೋಗುತ್ತಿದ್ದ ವೇಳೆ ಎರಡು ರಾಟ್‌ವೀಲರ್ ನಾಯಿಗಳು ದಾಳಿ ನಡೆಸಿದ ಪರಿಣಾಮ ಮಹಿಳೆ ಮೃತಪಟ್ಟಿರುವ ಘಟನೆ ಗುರುವಾರ ದಾವಣಗೆರೆ ತಾಲ್ಲೂಕಿನ ರಾಷ್ಟ್ರೀಯ ಹೆದ್ದಾರಿ 48ರಲ್ಲಿ ಬರುವ ಹೊನ್ನೂರು ಗೊಲ್ಲರಹಟ್ಟಿ ಗ್ರಾಮದಲ್ಲಿ ನಡೆದಿದೆ.

ಅನಿತಾ(38) ಸಾವನ್ನಪ್ಪಿದ ಮಹಿಳೆ. ತಡರಾತ್ರಿ ಹೊನ್ನೂರು ಗ್ರಾಮದಿಂದ ಮಲ್ಲಶೆಟ್ಟಿಹಳ್ಳಿ ಗ್ರಾಮಕ್ಕೆ ನಡೆದುಕೊಂಡು ಹೋಗುವಾಗ ಅಲ್ಲಿನ ಜಮೀನಿನಲ್ಲಿ ಅಡ್ಡಾಡುತ್ತಿದ್ದ ಎರಡು ರಾಟ್‌ವೀಲರ್ ನಾಯಿಗಳು ಅನಿತಾ ಮೇಲೆ ಏಕಾಏಕಿ ದಾಳಿ ಮಾಡಿವೆ ಎನ್ನಲಾಗಿದೆ.

ರಾತ್ರಿ 12ಗಂಟೆ ಸುಮಾರು ಎರಡು ನಾಯಿಗಳು ಬೊಗಳಿವೆ. ಆದರೆ ಸ್ಥಳೀಯರು ಯಾರೋ ಕಳ್ಳಕಾಕರು ಬಂದಿರಬಹುದೆಂದು ತಿಳಿದು ಸುಮ್ಮನಾಗಿದ್ದಾರೆ. ಆದರೆ, ಅದೇ ರಸ್ತೆಯಲ್ಲಿ ಸುಮಾರು 2 ಗಂಟೆ ವೇಳೆಗೆ ಹೊಲಕ್ಕೆ ನೀರು ಕಟ್ಟಲೆಂದು ಯುವಕನೊಬ್ಬ ಹೋಗುತ್ತಿದ್ದ ಸಂದರ್ಭದಲ್ಲಿ ಮೊಬೈಲ್ ಬೆಳಕು ಕಂಡಿದೆ. ಹತ್ತಿರ ಹೋಗಿ ನೋಡಿದಾಗ ನಾಯಿಗಳು ಅನಿತಾ ಮೇಲೆ ದಾಳಿಮಾಡಿ ಅಲ್ಲೇ ಇರುವುದನ್ನು ಗಮನಿಸಿ, ತಕ್ಷಣವೇ ಸ್ಥಳೀಯರಿಗೆ, 112ಗೆ ಕರೆಮಾಡಿ, ಪೊಲೀಸರನ್ನು ಕರೆಯಿಸಲಾಗಿದೆ.

ನಂತರ ಆಸ್ಪತ್ರೆಗೆ ಸಾಗಿಸುತ್ತಿದ್ದ ವೇಳೆ ಅನಿತಾ ಮೃತಪಟ್ಟಿದ್ದಾರೆ. ಬೆಳಿಗ್ಗೆ ಗ್ರಾಮದ ಪಿಡಿಓ ಸೇರಿದಂತೆ ಸಿಬ್ಬಂದಿ ಹಾಗೂ ಗ್ರಾಮಸ್ಥರು ಸೇರಿ ನಾಯಿಗಳನ್ನು ಸೆರೆ ಹಿಡಿದಿದ್ದಾರೆ. ನಾಯಿಗಳನ್ನು ಸಂಬಂಧಿಸಿದ ಇಲಾಖೆಗೆ ಹಸ್ತಾಂತರ ಮಾಡಿದ್ದಾರೆ.

ಗುರುವಾರ ರಾತ್ರಿ ಸುಮಾರು 10 ಗಂಟೆ ಸುಮಾರಿಗೆ ಯಾರೋ ಆಟೋದಲ್ಲಿ ಬಂದು ರಾಟ್‌ವೀಲರ್ ನಾಯಿಗಳನ್ನು ನಮ್ಮ ಗ್ರಾಮದಲ್ಲಿ ಬಿಟ್ಟು ಹೋದರು ಎಂದು ಗ್ರಾಮದ ನಿವಾಸಿಯೊಬ್ಬರು ಮಾಹಿತಿ ನೀಡಿದ್ದಾರೆ. ಈ ಬಗ್ಗೆ ದಾವಣಗೆರೆ ಗ್ರಾಮಾಂತರ ಠಾಣೆಯಲ್ಲಿ ದೂರು ದಾಖಲಾಗಿದ್ದು ನಾಯಿಗಳ ಮಾಲೀಕರ ಬಗ್ಗೆ ತನಿಖೆ ನಡೆಯುತ್ತಿದೆ.

## ಖ್ಯಾತ ಸ್ತ್ರೀರೋಗ ತಜ್ಞೆ ಡಾ. ಜಯಶ್ರೀ, ಪುತ್ರ ಆಕಾಶ್ ಆತ್ಮಹತ್ಯೆಗೆ ಶರಣು; ಡೆತ್ ನೋಟ್ ಪತ್ತೆ

**ಶಿವಮೊಗ್ಗ:** ಶಿವಮೊಗ್ಗದ ಖ್ಯಾತ ಸ್ತ್ರೀರೋಗ ತಜ್ಞೆ ಡಾ. ಜಯಶ್ರೀ ಹೊಮ್ಮರಡಿ ಹಾಗೂ ಅವರ ಪುತ್ರ ಆಕಾಶ್ ಹೊಮ್ಮರಡಿ ಅವರು ಶುಕ್ರವಾರ ತಮ್ಮ ಮನೆಯಲ್ಲಿಯೇ ಆತ್ಮಹತ್ಯೆಗೆ ಶರಣಾಗಿದ್ದಾರೆ.

ಡಾ. ಜಯಶ್ರೀ ಮತ್ತು ಅವರ ಮಗ ಇಬ್ಬರೂ ಪ್ರತ್ಯೇಕವಾಗಿ ತಮ್ಮ ತಮ್ಮ ಬೆಡ್‌ರೂಮ್‌ಗಳಲ್ಲಿ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿರುವ ಘಟನೆ ನಗರದ ಅಶ್ವತ್ಥ ಬಡಾವಣೆಯಲ್ಲಿ ನಡೆದಿದೆ.

ಡಾ. ಜಯಶ್ರೀ(57) ಮತ್ತು ಮಗ ಆಕಾಶ್(32) ಇಬ್ಬರ ಆತ್ಮಹತ್ಯೆಗೆ ನಿಖರ ಕಾರಣ ತಿಳಿದುಬಂದಿಲ್ಲ. ಸ್ಥಳಕ್ಕೆ ಭೇಟಿ ನೀಡಿದ ವಿನೋಬನಗರ ಠಾಣಾ ಪೊಲೀಸರು ಮನೆ ಪರಿಶೀಲನೆ ಮಾಡಿದ್ದು,



ಈ ವೇಳೆ ಡೆತ್ ನೋಟ್ ಪತ್ತೆಯಾಗಿದೆ.

ಮೂಲತಃ ದಾವಣಗೆರೆ ಜಿಲ್ಲೆಯ ನ್ಯಾಮತಿಯ ಡಾ. ನಾಗರಾಜ ಹೊಮ್ಮರಡಿ ಕುಟುಂಬ ಶಿವಮೊಗ್ಗದ ಗಾಂಧಿನಗರದಲ್ಲಿ ಹೊಮ್ಮರಡಿ ಆಸ್ಪತ್ರೆಯ ಮೂಲಕ ಹಲವು ವರ್ಷಗಳಿಂದ ವೈದ್ಯಕೀಯ ಸೇವೆಯಲ್ಲಿ ತೊಡಗಿತ್ತು.

ಮಕ್ಕಳ ತಜ್ಞರಾಗಿದ್ದ ಡಾ.ನಾಗರಾಜ ಹೊಮ್ಮರಡಿ ಸಹ 10 ವರ್ಷಗಳ ಹಿಂದೆ ಆತ್ಮಹತ್ಯೆ ಮಾಡಿಕೊಂಡಿದ್ದರು. ಅವರ ಪುತ್ರ ಆಕಾಶ್ ಅವರ ಪತ್ನಿ ನವ್ಯಶ್ರೀ ಕೂಡ ಒಂದೂವರೆ ವರ್ಷದ ಹಿಂದೆ ಅದೇ ಮನೆಯಲ್ಲಿ ನೇಣಿಗೆ ಶರಣಾಗಿದ್ದರು. ಇದರಿಂದ ಆಘಾತಕ್ಕೆ ಒಳಗಾಗಿದ್ದ ಡಾ. ನಾಗರಾಜ ಅವರ ಪತ್ನಿ ಜಯಶ್ರೀ ಅವರು ಡೆತ್‌ನೋಟ್ ಬರೆದಿಟ್ಟು ಆತ್ಮಹತ್ಯೆ ಮಾಡಿಕೊಂಡಿದ್ದಾರೆ. ಬಳಿಕ ಮಗ ಕೂಡ ಆತ್ಮಹತ್ಯೆಗೆ ಶರಣಾಗಿದ್ದಾರೆ. ಆಘಾತದಿಂದ ಹೊರಬರಲು ಕಳೆದ ಮೇ ತಿಂಗಳಲ್ಲಿ ಆಕಾಶ್ ಮತ್ತೊಂದು ಮದುವೆಯಾಗಿ ಆರು ತಿಂಗಳಾಗಿತ್ತು. ಹೀಗಿರುವಾಗ ತಾಯಿ ಮಗ ಆತ್ಮಹತ್ಯೆಗೆ ಶರಣಾಗಿದ್ದಾರೆ. ಎರಡನೇ ಪತ್ನಿ ಮನೆಯಲ್ಲಿರು ವಾಗಲೇ ಆಕಾಶ್ ಆತ್ಮಹತ್ಯೆಗೆ ಶರಣಾಗಿದ್ದಾರೆ.

### 12ನೇ ದಿನಕ್ಕೆ ಕಾಲಿಟ್ಟ ಪ್ರತಿಭಟನೆ

## ಸರಕಾರದ ದ್ವಂದ ನೀತಿಗೆ 6000 ಸಾವಿರ ಅತಿಥಿ ಉಪನ್ಯಾಸಕರ ಕುಟುಂಬ ಬೀದಿಗೆ

**ಗದಗ:** ಸುಮಾರು ವರ್ಷಗಳಿಂದ ಸರ್ಕಾರಿ ಪ್ರಥಮದರ್ಜೆ ಕಾಲೇಜುಗಳಲ್ಲಿ ಪಾಠ ಮಾಡುತ್ತಾ ಬಂದಿರುವ 6000 ಸಾವಿರ ಅತಿಥಿ ಉಪನ್ಯಾಸಕರ ಕುಟುಂಬ ಬೀದಿಗೆ ಬೀಳುವಂತಾಗಿದೆ ಸರಕಾರ ಸೇವೆಯಿಂದ ಮುಂದುವರೆಸಬೇಕು ಮತ್ತು ಸೇವೆ ಸಲ್ಲಿಸಿ ಹೊರಗುಳಿದವರಿಗೂ ಅವಕಾಶ ನೀಡಬೇಕು ಎಂದು ರಾಜ್ಯಾಧ್ಯಕ್ಷ ಡಾ. ಹನುಮಂತಗೌಡ ಆರ್ ಕಲ್ಮನಿ ಆಗ್ರಹಿಸಿದರು.

ಸೇವೆಯಲ್ಲಿ ಇರುವವರನ್ನು ಮುಂದುವರೆಸಬೇಕು ಮತ್ತು ವಿವಿಧ ಬೇಡಿಕೆ ಇಡೇರಿಸುವಂತೆ ಆಗ್ರಹಿಸಿ ರಾಜ್ಯ ಸರ್ಕಾರಿ ಪ್ರಥಮದರ್ಜೆ ಕಾಲೇಜುಗಳ ಅತಿಥಿ ಉಪನ್ಯಾಸಕರ ಸಂಘದಿಂದ ನಗರದಲ್ಲಿ ನಡೆಯುತ್ತಿರುವ ಅತಿಥಿ ಉಪನ್ಯಾಸಕರ ಧರಣಿ ಸತ್ಯಾಗ್ರಹ ಬುಧವಾರ 12ನೇ ದಿನಕ್ಕೆ ಕಾಲಿಟ್ಟಿದ್ದು. 2009ರಲ್ಲಿ ಎಂಪಿಲ್ ಪದವಿ ಪಡೆದವರಿಗೂ ಅವಕಾಶ ನೀಡಬೇಕು. ಸರಕಾರ ಅತಿಥಿ ಉಪನ್ಯಾಸಕರ ಬದುಕಿನೊಂದಿಗೆ ಚೆಲ್ಲಾಟವಾಡಬೇಡಿ ಇದನ್ನೆಲ್ಲ ನೋಡುತ್ತಿರುವ ಬುದ್ಧಿಜೀವಿಗಳು, ಇವರಿಂದ ಜ್ಞಾನ ಪಡೆದ ಲಕ್ಷಾಂತರ ವಿದ್ಯಾರ್ಥಿಗಳು ಇತ್ತ ಗಮನವಿಟ್ಟು ನೋಡುತ್ತಿದ್ದಾರೆ ಇದರ




ಪರಿಣಾಮ ನಿಮ್ಮ ಮೇಲೆ ಬೀಳಲಿದೆ. ಸಿಗ್ರದಲ್ಲಿಯೆ ನ್ಯಾಯ ನೀಡದಿದ್ದರೆ ಬೆಳಗಾವಿ ಅಧಿವೇಶನದಲ್ಲಿ ಬೃಹತ್ ಪ್ರತಿಭಟನೆ ಹಮ್ಮಿಕೊಳ್ಳಲಾಗುವುದು ಎಂದು ಹೇಳಿದರು.

ಅತಿಥಿ ಉಪನ್ಯಾಸಕಿ ಗೀತಾ ಎಮ್.ಕೆ ಮಾತನಾಡಿ 11ದಿನಗಳ ಕಾಲ ಹೋರಾಟದಲ್ಲಿ ನಿರತರಾಗಿರುವ ಅತಿಥಿ ಉಪನ್ಯಾಸಕರ ಬಗ್ಗೆ ರಾಜ್ಯ ಸರಕಾರ ಕಾಳಜಿ ತೋರಿಸದಿರುವುದು ಶೋಚನೀಯ ಸಂಗತಿಯಾಗಿದ್ದು, ಇದರಿಂದ ರಾಜ್ಯ ಸರಕಾರದಡಿ ಇರುವ 430 ಸರಕಾರಿ ಪ್ರಥಮ ದರ್ಜೆ ಕಾಲೇಜುಗಳಲ್ಲಿ ಹಲವು ವರ್ಷಗಳಿಂದ ಸೇವೆ ಕೆಲಸ ಮಾಡುತ್ತಿರುವ ಅತಿಥಿ ಉಪನ್ಯಾಸಕರನ್ನು ಸೇವೆಯಿಂದ ಹೊರಗಿಡದೆ ಇದ್ದವರನ್ನು ಮುಂದುವರೆಸಲು ಮುಂದಾಗಬೇಕು ಎಂದು ಹೇಳಿದರು.

### 'ನ್ಯಾಷನಲ್ ಹೆರಾಲ್ಡ್' ಕೇಸ್ ತನಿಖೆ:

## ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್‌ಗೆ ದೆಹಲಿ ಪೊಲೀಸರ ನೋಟಿಸ್

**ಬೆಂಗಳೂರು:** ನ್ಯಾಷನಲ್ ಹೆರಾಲ್ಡ್ ಪ್ರಕರಣಕ್ಕೆ ಸಂಬಂಧಿಸಿದಂತೆ ಉಪ ಮುಖ್ಯಮಂತ್ರಿ ಡಿಕೆ ಶಿವಕುಮಾರ್ ದೆಹಲಿ ಪೊಲೀಸರು ನೋಟಿಸ್ ನೀಡಿದ್ದಾರೆ.

ಈ ಪ್ರಕರಣದ ತನಿಖೆ ನಡೆಸುತ್ತಿರುವ ದೆಹಲಿ ಪೊಲೀಸರ ಆರ್ಥಿಕ ಅಪರಾಧಗಳ ವಿಭಾಗ (ಇಔಫ)ವಿವರವಾದ ಹಣಕಾಸು ಮತ್ತು ವಹಿವಾಟಿನ ಮಾಹಿತಿ ಕೋರಿ ಡಿ.ಕೆ. ಶಿವಕುಮಾರ್ ಅವರಿಗೆ ನೋಟಿಸ್ ಜಾರಿ ಮಾಡಿದೆ ಎಂದು ಅಧಿಕಾರಿಗಳು ಶುಕ್ರವಾರ ತಿಳಿಸಿದ್ದಾರೆ.

ನವೆಂಬರ್ 29 ರಂದು ನೀಡಲಾದ ನೋಟಿಸ್ ಪ್ರಕಾರ, ಕಾಂಗ್ರೆಸ್ ನಾಯಕರಾದ ಸೋನಿಯಾ ಗಾಂಧಿ ಮತ್ತು ರಾಹುಲ್ ಗಾಂಧಿ ವಿರುದ್ಧ ಅಕ್ಟೋಬರ್ 3 ರಂದು ದಾಖಲಾಗಿರುವ ಪ್ರಕರಣಕ್ಕೆ ಸಂಬಂಧಿಸಿದಂತೆ ಶಿವಕುಮಾರ್ ಪ್ರಮುಖ ಮಾಹಿತಿ ಹೊಂದಿದ್ದಾರೆ ಎನ್ನಲಾಗಿದೆ.

ಡಿಸೆಂಬರ್ 19 ರೊಳಗೆ ತನಿಖಾಧಿಕಾರಿಗಳ ಮುಂದೆ ಹಾಜರಾಗಲು ಅಥವಾ ಕೋರಲಾದ ದಾಖಲೆಗಳನ್ನು ಸಲ್ಲಿಸಲು ಅವರಿಗೆ ಸೂಚಿಸಲಾಗಿದೆ ಎಂದು ತಿಳಿದುಬಂದಿದೆ.

ಶಿವಕುಮಾರ್ ಅವರ ವೈಯಕ್ತಿಕ ಮತ್ತು ರಾಜಕೀಯ ಹಿನ್ನೆಲೆ, ಕಾಂಗ್ರೆಸ್ ಜೊತೆಗಿನ ಅವರ ಸಂಬಂಧ, ಅವರು ವರ್ಗಾಯಿಸಿದ್ದಾರೆ ಎನ್ನಲಾದ ಹಣದ ಸಂಪೂರ್ಣ ವಿವರ ಅಥವಾ ಯುಂಗ್ ಇಂಡಿಯಾ ಜೊತೆಗಿನ ನಂಟಿನ ಬಗ್ಗೆ ಸಂಪೂರ್ಣ ವಿವರಗಳನ್ನು ದೆಹಲಿ ಪೊಲೀಸರ ಆರ್ಥಿಕ ಅಪರಾಧಗಳ ವಿಭಾಗ ಕೋರಿದೆ.

ಈ ಹಣ ವರ್ಗಾವಣೆಯ ಉದ್ದೇಶ ಮತ್ತು ಮೂಲ, ಯಂಗ್ ಇಂಡಿಯಾ ಅಥವಾ ಎಐಸಿಸಿ ಅಧಿಕಾರಿಗಳೊಂದಿಗೆ ಯಾವುದೇ ಮಾತುಕತೆ ನಡೆದಿದ್ದೆಯೇ? ಇಲ್ಲವೇ ಇತರರ ಸೂಚನೆ ಮೇರೆಗೆ ಹಣ ಕಳುಹಿಸಲಾಗಿದೆಯೇ ಎಂಬ ಬಗ್ಗೆಯೂ ತನಿಖಾಧಿಕಾರಿಗಳು ಮಾಹಿತಿ ಬಯಸಿದ್ದಾರೆ.

ಕರ್ನಾಟಕ ಸರ್ಕಾರ ಜಿಲ್ಲಾ ಪಂಚಾಯತ್, ದಾವಣಗೆರೆ.
**ಜಿಲ್ಲಾ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸಂಘ, ದಾವಣಗೆರೆ**
ಎಸ್.ಎಸ್. ಆಸ್ಪತ್ರೆ, ಹಿಂಭಾಗ, ಎನ್.ಸಿ.ಸಿ.ಕ್ಯಾಂಪ್ ಹತ್ತಿರ, ದಾವಣಗೆರೆ.
ಈ ಮೇಲ್:rchodavangere@gmail.comm
ಸಂ:ಜಿನಿಫ/ದಾಗೆರೆ/ಎನ್‌ಹೆಚ್‌ಎಂ/110/2025–26 ದಿನಾಂಕ: 04/12/2025

**ಟೆಂಡರ್ ಪ್ರಕಟಣೆ**

ರಾಷ್ಟ್ರೀಯ ಆರೋಗ್ಯ ಅಭಿಯಾನದಡಿ ಜಿಲ್ಲಾ ಆರೋಗ್ಯ ಮತ್ತು ಸಂಘದಿಂದ 2025–26 ನೇ ಅರ್ಥಿಕ ಸಾಲಿನಲ್ಲಿ ಎನ್‌ಹೆಚ್‌ಎಂ ಯೋಜನೆಯಡಿ ಹೊರಗುತ್ತಿಗೆ ಅಧಾರಡಿ ಮಾನವ ಸಂಪನ್ಮೂಲ ಸಿಬ್ಬಂದಿ ಸೇವೆ ಇ–ಟೆಂಡರ್ ಮೂಲಕ ಆಸಕ್ತ ಅರ್ಹ ಸಂಸ್ಥೆಗಳಿಂದ ಇ–ಟೆಂಡರ್ ಆರ್ಜಿ ಅಹ್ವಾನಿಸಲಾಗಿದೆ.
ಟೆಂಡರ್ ವಿವರ:– Providing services of Accounts Assistant District Hospital, Panchakarma Multi purpose worker, Consultants/ Programme Officers, Lab Attender, Cleaning Personnel, Multi Task Worker, LDC, Data Entry Operator, Group-D, MIS Staff Record Keeper, Cook, Driver, IDSP STATEBUDGET (DEO+PROGRAMME ASSISTANY) Namma Clinic GroupD, Lab technician) and Claim Executivesfor District Health and F.W. Society, Davanagere
Tender No:DHFWS/2025-26/SE1829DATED 04/12/2025
ಇ,ಎಂ,ಡಿ Rs2,30,000 (As per tender documents)
ಟೆಂಡರ್‌ನ ಅವಧಿ:– ಬಿಡ್‌ನ್ನು ದಿನಾಂಕ: 04–12–2025 ರ ಸಂಜೆ 5–30 ರಿಂದ http://kppp.karnataka.gov.inರಲ್ಲಿ ಡೌನ್‌ಲೋಡ್ ಮಾಡಿಕೊಳ್ಳಬಹುದು.
ಅಂತಿಮಾ ದಿನಾಂಕ; 19–12–2025 ರ ಸಂಜೆ 5–30 ಗಂಟೆಯವರೆಗೆ ಸಲ್ಲಿಸಬಹುದು.
ಟೆಂಡರ್‌ಗಳನ್ನು ದಿನಾಂಕ: 22/12/2025 ರ ಬೆಳಗ್ಗೆ 10–30 ಗಂಟೆಗೆ ತೆರೆಯಲಾಗುವುದು. ಹೆಚ್ಚಿನ ಸಂಪೂರ್ಣ ವಿವರಗಳಿಗೆ ಮೊಬೈಲ್ ಸಂಖ್ಯೆ 9449843110, 9449843467 ಅಥವಾ ಕಛೇರಿ ವಿಳಾಸ ರಾಷ್ಟ್ರೀಯ ಆರೋಗ್ಯ ಅಭಿಯಾನ ಘಟಕ, ರೂಮ್ ನಂ 1 ಎಸ್.ಎಸ್. ಆಸ್ಪತ್ರೆ ಹತ್ತಿರ, ಶ್ರೀರಾಮ ನಗರ ರಸ್ತೆ, ಎನ್.ಸಿ.ಸಿ. ಕ್ಯಾಂಪ್ ಪಕ್ಕ ದಾವಣಗೆರೆ ಇಲ್ಲಿ ಪಡೆಯಬಹುದಾಗಿದೆ.

ಸಹಿ/– ಜಿಲ್ಲಾ ಆರ್.ಸಿ.ಹೆಚ್ ಅಧಿಕಾರಿಗಳು, ದಾವಣಗೆರೆ ಜಿಲ್ಲೆ
ಸಹಿ/– ಜಿಲ್ಲಾ ಆರೋಗ್ಯ ಮತ್ತು ಕು.ಕ. ಅಧಿಕಾರಿಗಳು, ದಾವಣಗೆರೆ ಜಿಲ್ಲೆ
ವಾಸಾಇ/ಡಿವಿಜಿ/538/ಕೆಎಸ್‌ಎಂಸಿಎ/2025–26

### ಹೊನ್ನಾಳಿ ಪುರಸಭೆ ಹಾಗೂ ನ್ಯಾಮತಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಮೂಲ ಸೌಕರ್ಯಗಳ ಕಾಮಗಾರಿಗೆ 7.50 ಕೋಟಿ ಹಣ ಬಿಡುಗಡೆ

## ಕಾಮಗಾರಿ ಪ್ರಾರಂಭಿಸಲು ಶಾಸರಿಂದ ಸ್ಥಳ ವೀಕ್ಷಣೆ

**ಹೊನ್ನಾಳಿ :** ಹೊನ್ನಾಳಿ ಪುರಸಭೆ ಹಾಗೂ ನ್ಯಾಮತಿ ಪಟ್ಟಣ ಪಂಚಾಯಿತಿ ವ್ಯಾಪ್ತಿಯಲ್ಲಿ ಮೂಲ ಸೌಕರ್ಯಗಳ ಕಾಮಗಾರಿಗೆ 7.50 ಕೋಟಿ ಹಣ ಬಿಡುಗಡೆ ಆಗಿದೆ ಎಂದು ಶಾಸಕ ಡಿ.ಜಿ.ಶಾಂತನಗೌಡ ತಿಳಿಸಿದರು.

ಪಟ್ಟಣದ ವಿವಿದೆಡೆ ರಸ್ತೆ,ಚರಂಡಿ ಸೇರಿದಂತೆ ವಿವಿಧ ಕಾಮಗಾರಿಗಳನ್ನು ಎಲ್ಲೆಲ್ಲಿ ಮಾಡಿಸಬೇಕೆಂದು ಸ್ಥಳ ವೀಕ್ಷಣೆ ಮಾಡಿ ಮಾತನಾಡಿದರು.

ವಿವರ ; ಹೊನ್ನಾಳಿ ಪಟ್ಟಣದ ಖಾಸಗಿ ಬಸ್ ನಿಲ್ದಾಣದ ಹಿಂಭಾಗ ಸಂಪಿಗೆ ರಸ್ತೆ,ಅಭಿವೃದ್ಧಿಗೆ 30 ಲಕ್ಷ,ದುರ್ಗಿಗುಡಿ ದಕ್ಷಿಣ ಭಾಗದ ಹೊಸ ಅಂಬೇಡ್ಕರ್ ಭವನದ ಮುಂಭಾಗದ 10,11 ಹಾಗೂ 12 ನೇ ಕ್ರಾಸ್ ನ ಆಯ್ದ ಚರಂಡಿ,ಸಿಡಿ ನಿರ್ಮಾಣ ಹಾಗೂ ಅಂಬೇಡ್ಕರ್ ಭವನದ ಹತ್ತಿರ ಅಭಿವೃದ್ಧಿಗೆ 1ಕೋಟಿ,ಟಿ.ಬಿ.ವೃತ್ತದಿಂದ ಐಬಿ ವರೆವಿಗೆ ಸಿಸಿ ರಸ್ತೆ,ಇಂಟರ್‌ಲಾಕ್ ನಿರ್ಮಾಣ,ಕುಡಿಯುವ ನೀರು ಶುದ್ಧಿಕರಣ ಘಟಕ ಹಾಗೂ ಮುಸ್ಲಿಂ ಸ್ಮಶಾನದವರೆಗೆ



ಸಿಸಿ ರಸ್ತೆ ನಿರ್ಮಾಣಕ್ಕೆ 50 ಲಕ್ಷ, ವಾಡ್ ನಂ 20 ರ ಕೆಎಸ್‌ಆರ್‌ಟಿಸಿ ಡಿಪೋ ರಸ್ತೆ ಮತ್ತು ದೇವನಾಯಕನಹಳ್ಳಿ ಹರಿಹರ ರಸ್ತೆ ಹಿಂಭಾಘದ ವಸತಿ ಹೃಹಗಳ ಹತ್ತಿರ ರಸ್ತೆ ಮತ್ತು ಚರಂಡಿ ಸಿಡಿ ನಿರ್ಮಾಣಕ್ಕೆ 1ಕೋಟಿ,ಪಟ್ಟಣದ ಕೆಇಬಿ ರಸ್ತೆಯ ಹಿರೋಶೋರೂಂ ಹಿಂಭಾಘ ಹಾಗೂ ಮುಂಭಾಗ ರಸ್ತೆ ಅಭಿವೃದ್ಧಿಗೆ 20 ಲಕ್ಷ,ಹಿರೇಕಲ್ಮಠದ ಸುಂಕದಕಟ್ಟೆ ರಸ್ತೆಯಿಂದ ಸಮುದಾಯಭವನ ಹಾಗೂ ಗಣಪತಿ ದೇವಸ್ಥಾನದವರೆಗೆ ರಸ್ತೆ ಅಭಿವೃದ್ಧಿಗೆ 30 ಲಕ್ಷ, ಸಂತೆ ಮೈದಾನದಲ್ಲಿ ಸಿಸಿ ರಸ್ತೆ,ಚರಂಡಿ ಹಾಗೂ ಸಂತೆ ಮೈದಾನದ ಸುತ್ತ ಕಾಂಪೌಂಡ್ ನಿರ್ಮಾಣಕ್ಕೆ 1.40 ಕೋಟಿ ಹಾಗೂ ಟಿ.ಬಿ.ವೃತ್ತದಲ್ಲಿ ಸಾರ್ವಜನಿಕ ಶೌಚಾಲಯ ನಿರ್ಮಾಣಕ್ಕೆ 30 ಲಕ್ಷ ಸೇರಿದಂತೆ ಹೊನ್ನಾಳಿ ಪುರಸಭೆ ವ್ಯಾಪ್ತಿಯ ಅಭಿವೃದ್ಧಿಗೆ 5 ಕೋಟಿ ಬಿಡುಗಡೆಯಾಗಿದೆ

ನ್ಯಾಮತಿ ಪಟ್ಟಣದ ನೇಹರು ರಸ್ತೆಯಿಂದ ಶಿವಾನಂದಪ್ಪ ಬಡಾವಣೆಯ ಪ್ರಥಮದರ್ಜೆ ಕಾಲೇಜು ಮುಂಭಾಗ ಇರುವ ರಸ್ತೆ ಅಭಿವೃದ್ಧಿ,ಕೆಪಿಎಸ್ ಶಾಲೆ ಮುಂಭಾಗ ಚರಂಡಿ ನಿರ್ಮಾಣಕ್ಕೆ 1.50 ಕೋಟಿ,ನ್ಯಾಮತಿ ಪಟ್ಟಣದ ಕೋಡಿಕೊಪ್ಪ ರಸ್ತೆಯಿಂದ ತುಂಬು ಹಳ್ಳಕ್ಕೆ ಹೋಗುವ ರಸ್ತೆ ರಸ್ತೆವರೆಗೆ ಸಿ ಸಿ ರಸ್ತೆ.ಮತ್ತು ಎರಡು ಬದಿಯಲ್ಲಿ ಚರಂಡಿ ಸಿಡಿ ನಿರ್ಮಾಣಕ್ಕೆ 1 ಕೋಟಿ ಸೇರಿದಂತೆ ನ್ಯಾಮತಿ ಪಟ್ಟಣದ ಅಭಿವೃದ್ಧಿಗೆ 2.50 ಕೋಟಿ ಹಣ ಬಿಡುಗಡೆಗೊಂಡು ಕ್ರಿಯಾಯೋಜನೆ ತಯಾರಿಸಿ ಕೊಡಲಾಗಿದೆ, ಶೀಘ್ರವೇ ಟೆಂಡರ್ ಕರೆಯುವದಕ್ಕೆ ಅಧಿಕಾರಿಗಳು ಸಿದ್ಧತೆ ನಡೆಸುತ್ತಿದ್ದಾರೆ ಎಂದರು.

ಹೊನ್ನಾಳಿ ಹಾಗೂ ನ್ಯಾಮತಿ ಪಟ್ಟಣದ ಅಭಿವೃದ್ಧಿಗೆ ಹಣ ಬಿಡುಗಡೆ ಮಾಡುವಂತೆ ಮುಖ್ಯಮಂತ್ರಿಗಳಿಗೆ ಮನವಿ ಮಾಡಿ ಪ್ರಸ್ತಾವನೆ ಕಳುಹಿಸಲಾಗಿತ್ತು,ಅದರಂತೆ ಈಗ ಅನುದಾನ ಬಿಡುಗಡೆಯಾಗಿದೆ ಎಂದು ಶಾಸಕರು ತಿಳಿಸಿದರು.

**ಹೈಕಮಾಂಡ್ ಹೇಳಿದಂತೆ ನನ್ನಾಧಿಯಾಗಿ ಎಲ್ಲರು ಕೇಳುತ್ತಾರೆ ;** ಸಿಎಂ ಸಿದ್ದರಾಮಯ್ಯ ಹಾಗೂ ಡಿಸಿಎಂ ಡಿ.ಕೆ.ಶಿವಕುಮಾರ್ ನಡುವೆ ಅಧಿಕಾರ ಹಂಚಿಕೆ ಬಗೆ ಶಾಸಕರನ್ನು ಪ್ರಶ್ನಿಸಿದಾಗ ನಮ್ಮ ಕಾಂಗ್ರೆಸ್ ವರಿಷ್ಠ ಮಂಡಳಿ ಯಾರನ್ನು ಸಿಎಂ ಎನ್ನುತ್ತಾರೋ ಅವರನ್ನು ನಾನೇ ಅಲ್ಲ ಎಲ್ಲಾ ಶಾಸಕರು ಒಪ್ಪಿಕೊಳ್ಳುತ್ತಾರೆ, ಹೈಕಮಾಂಡ್ ಹೇಳಿದಂತೆ ನಾವು ಕೇಳುತ್ತೇವೆ ಎಂದು ಸ್ಪಷ್ಟಪಡಿಸಿದರು.

**ನಾನೇನು ಸನ್ಯಾಸಿ ಅಲ್ಲ;** ನಾನೂ ಮೂರು ಭಾರಿ ಶಾಸಕನಾಗಿ ಕೆಲಸ ಮಾಡಿದ್ದೇನೆ,ಹೈಕಮಾಂಡ್ ನನ್ನನ್ನು ಗುರ್ತಿಸಿ ಸಚಿವ ಸ್ಥಾನ ನೀಡಿದರೆ ರಾಜ್ಯದ ಅಭಿವೃದ್ಧಿಗೆ ನನ್ನದೂ ಅಳಿಲಿನ ಸೇವೆ ಎಂದು ಕೆಲಸ ಮಾಡುತ್ತೇನೆ,ಒಂದು ವೇಳೆ ಸಚಿವ ಸ್ಥಾನ ಕೊಡದಿದ್ದರೆ ನನಗೇನು ಬೇಜಾರಿಲ್ಲ, ಶಾಸಕನಾಗಿ ಅವಳಿ ತಾಲೂಕಿನ ಸೇವೆ ಮಾಡುತ್ತೇನೆ.ಆದರೆ ನಾನಾಗಿಯೇ ನನಗೆ ಮಂತ್ರಿ ಸ್ಥಾನ ನೀಡಿ ಎಂದು ಕೇಳುವುದಿಲ್ಲ ಎಂದು ಪುನರುಚ್ಚಿಸಿದರು.

ಪುರಸಭೆ ಇಂಜಿನಿಯರ್ ದೇವರಾಜ್,ಆರೋಗ್ಯ ನಿರೀಕ್ಷಕ ಪರಮೇಶ್ವರ್‌ನಾಯ್ಕ್,ಶಿವಣ್ಣ,ಕಾಂಗ್ರೆಸ್ ಯುವ ವಕ್ತಾರ ದರ್ಶನ್ ಬಳ್ಳೇಶ್ವರ್ ಹಾಗೂ ಇತರರು ಇದ್ದರು.

# ರಾಶಿ ಭವಿಷ್ಯ

### ಮೇಷ ರಾಶಿ

ನಗು ನಿಮ್ಮ ಎಲ್ಲ ಸಮಸ್ಯೆಗಳಿಗೆ ಪರಿಹಾರವಾದ್ದರಿಂದ ನಕ್ಕುಬಿಡಿ. ಹಣದ ಕೊರತೆ ಇಂದು ನಿಮ್ಮ ಮನೆಯಲ್ಲಿ ಅಪಶ್ರುತಿಗೆ ಕಾರಣವಾಗಬಹುದು. ಅಂತಹ ಪರಿಸ್ಥಿತಿಯಲ್ಲಿ ನೀವು ನಿಮ್ಮ ಮನೆಯವರೊಂದಿಗೆ ಯೋಚಿಸಿ ಅರ್ಥಮಾಡಿಕೊಂಡು ಮಾತನಾಡಿ ಮತ್ತು ಅವರಿಂದ ಸಲಹೆಯನ್ನು ತೆಗೆದುಕೊಳ್ಳಿ. ನಿಮ್ಮ ಕುಟುಂಬದ ಸದಸ್ಯರ ಅಗತ್ಯಗಳ ಮೇಲೆ ಗಮನ ಹರಿಸುವುದು ಇಂದು ನಿಮ್ಮ ಆದ್ಯತೆಯಾಗಿರಬೇಕು. ಇಡೀ ಬ್ರಹ್ಮಾಂಡದ ಭಾವಪರವಶತೆ ಪ್ರೀತಿಯಲ್ಲಿರುವವರ ನಡುವೆ ನಡೆಯುತ್ತದೆ.

### ವೃಷಭ ರಾಶಿ

ನೀವು ಇತರರೊಡನೆ ನಿಮ್ಮ ಖುಷಿಯ ಕ್ಷಣಗಳನ್ನು ಹಂಚಿಕೊಳ್ಳುತ್ತಿದ್ದಂತೆ ನಿಮ್ಮ ಆರೋಗ್ಯ ಅರಳುತ್ತದೆ. ಆದರೆ ಇದನ್ನು ನಿರ್ಲಕ್ಷಿಸುವುದು ನಿಮಗೆ ತೊಂದರೆ ತರುತ್ತದೆ. ಇಂದು ವ್ಯಾಪಾರದಲ್ಲಿ ಉತ್ತಮ ಲಾಭವನ್ನು ಗಳಿಸುವ ಸಾಧ್ಯತೆ ಇದೆ. ಇಂದಿನ ದಿನ ನೀವು ನಿಮ್ಮ ವ್ಯಾಪಾರಕ್ಕೆ ಹೊಸ ಎತ್ತರವನ್ನು ನೀಡಬಹುದು. ಭೇಟಿ ನೀಡುವ ಸಂಬಂಧಿಗಳು ನೀವು ಅಂದುಕೊಂಡಿದ್ದಕ್ಕಿಂತ ಚೆನ್ನಾಗಿರಬಹುದು.

### ಮಿಥುನ ರಾಶಿ

ನೀವು ಇಂದು ನಿಮಗಾಗಿ ಸಾಕಷ್ಟು ಸಮಯ ಹೊಂದಿರುವುದರಿಂದ ನಿಮ್ಮ ಒಳ್ಳೆಯ ಆರೋಗ್ಯದ ಸಲುವಾಗಿ ಒಂದು ಧೀರ್ಘ ನಡಿಗೆಗೆ ಹೋಗಿ. ಆಲೋಚಿಸದೆ ನೀವು ಯಾರಿಗೂ ತಮ್ಮ ಹಣವನ್ನು ಕೊಡಬಾರದು, ಇಲ್ಲದಿದ್ದರೆ ನೀವು ಮುಂಬರುವ ಸಮಯದಲ್ಲಿ ದೊಡ್ಡ ತೊದರೆಗೊಳಗಾಗಬಹುದು. ದಿನದ ಉತ್ತರಾರ್ಧದಲ್ಲಿ ನೀವು ವಿಶ್ರಾಂತಿ ತೆಗೆದುಕೊಳ್ಳಬಯಸುತ್ತೀರಿ ಮತ್ತು ನಿಮ್ಮ ಕುಟುಂಬದ ಸದಸ್ಯರೊಡನೆ ಸಮಯ ಕಳೆಯಬಯಸುತ್ತೀರಿ.

### ಕರ್ಕ ರಾಶಿ

ವಿಶ್ರಾಂತಿ ಪ್ರಮುಖವಾದ ಒಂದು ದಿನ ಇತ್ತೀಚೆಗೆ ನೀವು ಬಹಳಷ್ಟು ಮಾನಸಿಕ ಒತ್ತಡ ಎದುರಿಸುತ್ತಿದ್ದೀರಿ – ಮನೋಲ್ಲಾಸ ಮತ್ತು ಮನೋರಂಜನೆ ನಿಮಗೆ ವಿಶ್ರಾಂತಿ ಪಡೆಯಲು ಸಹಾಯ ಮಾಡುತ್ತದೆ. ಇಲ್ಲಿಯವರೆಗೆ ಅನಗತ್ಯವಾಗಿ ಹಣವನ್ನು ಖರ್ಚು ಮಾಡುತ್ತಿದ್ದವರು ಜೀವನದಲ್ಲಿ ಹಣದ ಪ್ರಾಮುಖ್ಯತೆ ಏನು ಎಂಬುದನ್ನು ಅರ್ಥಮಾಡಿಕೊಳ್ಳಬಹುದು ಏಕೆಂದರೆ ಇಂದು ಇದ್ದಕ್ಕಿದ್ದಂತೆ ನಿಮಗೆ ಹಣದ ಅಗತ್ಯವಿರುತ್ತದೆ ಮತ್ತು ನಿಮಗೆ ಸಾಕಷ್ಟು ಹಣವಿರುವುದಿಲ್ಲ.

### ಸಿಂಹ ರಾಶಿ

ನೀವು ಜೀವನವನ್ನು ಸಂತೋಷದಿಂದ ಅನುಭವಿಸಲು ಸಿದ್ಧವಾಗುತ್ತಿದ್ದ ಹಾಗೆ ನಿಮಗೆ ಸಂತೋಷ ಹಾಗೂ ಆನಂದ. ಮನೆಯ ಸಣ್ಣ ವಸ್ತುಗಳ ಮೇಲೆ ನಿಮ್ಮ ಸಾಕಷ್ಟು ಹಣ ಹಾಳಾಗಬಹುದು, ಇದರ ಕಾರಣದಿಂದ ನೀವು ಮಾನಸಿಕ ಒತ್ತಡಗೊಳಗಾಗಬಹುದು. ನಿಮ್ಮ ಸಂಗಾತಿಯ ಜೊತೆಗಿನ ಸಂಬಂಧ ನಿಮ್ಮ ಕಚೇರಿ ಕೆಲಸದ ಕಾರಣ ಹಾಳಾಗಬಹುದು.

### ಕನ್ಯಾ ರಾಶಿ

ಕೆಲವರು ನಿಮಗೆ ಏನನ್ನಾದರೂ ಕಲಿಯಲು ಬಹಳ ವಯಸ್ಸಾಗಿದೆಯೆಂದು ಭಾವಿಸಬಹುದು ಆದರೆ ಅದು ನಿಜವಲ್ಲ – ನಿಮ್ಮ ಪ್ರಖರ ಮತ್ತು ಸಕ್ರಿಯ ಮನಸ್ಸಿನಿಂದ ನೀವು ಹೆಣಟಿಜಜಜಿಟಿಜಜಸ ವಿಷಯಗಳನ್ನು ಸುಲಭವಾಗಿ ಕಲಿಯುವಿರಿ. ವ್ಯಾಪಾರವನ್ನು ಬಲಪಡಿಸಲು ಇಂದು ನೀವು ಯಾವುದೇ ಪ್ರಮುಖ ಕ್ರಮಗಳನ್ನು ತೆಗೆದುಕೊಳ್ಳಬಹುದು. ಇದಕ್ಕಾಗಿ ನಿಮ್ಮ ಆಪ್ತ ನಿಮಗೆ ಆರ್ಥಿಕವಾಗಿ ಸಹಾಯ ಮಾಡಬಹುದು. ಯುವಕರನ್ನು ಹೊಂದಿರುವ ಚಟುವಟಿಕೆಗಳಲ್ಲಿ ತೊಡಗಿಸಿಕೊಳ್ಳಲು ಒಳ್ಳೆಯ ಸಮಯ.

### ತುಲಾ ರಾಶಿ

ನೀವು ಪ್ರಯಾಣಿಸಲು ತುಂಬಾ ದುರ್ಬಲರಾಗಿದ್ದರಿಂದ ದೀರ್ಘ ಪ್ರಯಾಣವನ್ನು ತಪ್ಪಿಸಲು ಪ್ರಯತ್ನಿಸಿ. ಇಂದು ನೀವು ಒಳ್ಳೆಯ ಹಣ ಮಾಡುತ್ತೀರಿ – ಆದರೆ ವೆಚ್ಚಗಳಲ್ಲಿ ನಿಮಗೆ ಉಳಿಸಲು ಕಷ್ಟವಾಗಿಸುತ್ತದೆ. ನಿಮ್ಮ ಸಂಗಾತಿ ಬೆಂಬಲ ನೀಡುತ್ತಾರೆ ಹಾಗೂ ಸಹಾಯ ಮಾಡುತ್ತಾರೆ. ಇಂದು ಪ್ರೇಮನಿವೇದನೆ ತಿರುಗೇಟು ನೀಡಬಹುದಾದ್ದರಿಂದ ನಿಮ್ಮ ಸೋಲುಗಳಿಂದ ನೀವು ಪಾಠ ಕಲಿಯಬೇಕು ವ್ಯಾಪಾರ ಸಹವರ್ತಿಗಳು ಬೆಂಬಲ ನೀಡುತ್ತಾರೆ ಮತ್ತು ನೀವು ಬಾಕಿಯಿರುವ ಕೆಲಸಗಳನ್ನು ಪೂರ್ಣಗೊಳಿಸಲು ಒಟ್ಟಿಗೆ ಕೆಲಸ ಮಾಡುತ್ತೀರಿ.

### ವೃಶ್ಚಿಕ ರಾಶಿ

ಸ್ನೇಹಿತರು ನಿಮ್ಮ ಆಲೋಚನೆಗಳ ಮೇಲೆ ಗಮನಾರ್ಹ ಪ್ರಭಾವ ಬೀರಬಹುದಾದ ಯಾರಾದರೂಬ್ಬರನ್ನು ನಿಮಗೆ ಪರಿಚಯಿಸುತ್ತಾರೆ. ವಿದೇಶದಲ್ಲಿ ಮಲಗಿರುವ ನಿಮ್ಮ ಭೂಮಿಯನ್ನು ಇಂದು ಉತ್ತಮ ಬೆಲೆಗೆ ಮಾರಾಟ ಮಾಡಬಹುದು, ಅದು ನಿಮಗೆ ಲಾಭದಾಯಕವಾಗಲಿದೆ. ನಿಮ್ಮ ಕುಟುಂಬಕ್ಕೆ ಸೂಕ್ತ ಸಮಯ ನೀಡಿ. ನೀವು ಅವರ ಸಲುವಾಗಿ ಕಾಳಜಿ ವಹಿಸುತ್ತೀರೆಂದು ಅವರಿಗೆ ಅರ್ಥವಾಗಲಿ.

### ಧನು ರಾಶಿ

ಒಬ್ಬ ಸ್ನೇಹಿತ ನಿಮ್ಮ ಮುಕ್ತ ಮನಸ್ಸು ಮತ್ತು ಸಹಿಷ್ಣುತೆಯ ಪರಮಾವಧಿಯನ್ನು ಪರೀಕ್ಷಿಸಬಹುದು. ನೀವು ನಿಮ್ಮ ಮೌಲ್ಯಗಳೊಂದಿಗೆ ರಾಜಿಯಾಗದಿರುವಂತೆ ಮತ್ತು ಸಕಾರಣವಾದ ನಿರ್ಧಾರಗಳನ್ನು ಕೈಗೊಳ್ಳುವಂತೆ ಎಚ್ಚರಿಕೆ ವಹಿಸಬೇಕು. ಇಂದು ನೀವು ನಿಮ್ಮ ಹಣವನ್ನು ಧಾರ್ಮಿಕ ಚಟುವಟಿಕೆಗಳಲ್ಲಿ ಹೂಡಿಕೆ ಮಾಡಬಹುದು, ಇದರಿಂದ ನೀವು ಮಾನಸಿಕ ಶಾಂತಿಯನ್ನು ಪಡೆಯುವ ಸಂಪೂರ್ಣ ಸಾಧ್ಯತೆ ಇದೆ.

### ಮಕರ ರಾಶಿ

ನೀವು ಇಂದು ನಿಮಗಾಗಿ ಸಾಕಷ್ಟು ಸಮಯ ಹೊಂದಿರುವುದರಿಂದ ನಿಮ್ಮ ಒಳ್ಳೆಯ ಆರೋಗ್ಯದ ಸಲುವಾಗಿ ಒಂದು ಧೀರ್ಘ ನಡಿಗೆಗೆ ಹೋಗಿ. ನಿಮಗಾಗಿ ಹಣವನ್ನು ಉಳಿಸುವ ನಿಮ್ಮ ಬಯಕೆ ಇಂದು ಪೂರ್ಣಗೊಳ್ಳಬಹುದು. ಇಂದು ನೀವು ಸೂಕ್ತವಾಗಿ ಉಳಿಸಲು ಸಾಧ್ಯವಾಗುತ್ತದೆ. ಸ್ನೇಹಿತರು ಮತ್ತು ಸಂಬಂಧಿಗಳೊಡನೆ ಆನಂದಿಸಿ.

### ಕುಂಭ ರಾಶಿ

ನಿಮ್ಮ ಶಕ್ತಿಯ ಮಟ್ಟ ಹೆಚ್ಚಿರುತ್ತದೆ. ಇಂವು ನಿಮಗೆ ನಿಮ್ಮ ಸಹೋದರ ಅಥವಾ ಸಹೋದರಿಯ ಸಹಾಯದಿಂದ ಹಣದ ಲಾಭವಾಗುವ ಸಾಧ್ಯತೆ ಇದೆ ಕುಟುಂಬ ಮತ್ತು ಸ್ನೇಹಿತರೊಂದಿಗೆ ಆಹ್ಲಾದಕರ ಸಮಯ ನಿಮ್ಮ ಸಂಗಾತಿಯ ಕೆಟ್ಟ ಆರೋಗ್ಯದಿಂದಾಗಿ ಇಂದು ಪ್ರಣಯಕ್ಕೆ ಧಕ್ಕೆಯಾಗುತ್ತದೆ. ಉದ್ಯಮಿಗಳು ಕೆಲವು ಹಠಾತ್ ಅನಿರೀಕ್ಷಿತ ಲಾಭ ಅಥವಾ ಆದಾಯದ ಒಳ್ಳೆಯ ದಿನವನ್ನು ಹೊಂದಬಹುದಾದ್ದರಿಂದ ಅವರಿಗೆ ಒಳ್ಳೆಯ ದಿನ.

### ಮೀನ ರಾಶಿ

ನಿಮ್ಮ ಆರೋಗ್ಯ ಮತ್ತು ನೋಟವನ್ನು ಸುಧಾರಿಸಲು ಕೆಲಸಗಳನ್ನು ಮಾಡಲು ಸಾಕಷ್ಟು ಸಮಯ ಹೊಂದಿರುತ್ತೀರಿ. ಇಂದು ನೀವು ನಿಮ್ಮ ಹಣವನ್ನು ಧಾರ್ಮಿಕ ಚಟುವಟಿಕೆಗಳಲ್ಲಿ ಹೂಡಿಕೆ ಮಾಡಬಹುದು, ಇದರಿಂದ ನೀವು ಮಾನಸಿಕ ಶಾಂತಿಯನ್ನು ಪಡೆಯುವ ಸಂಪೂರ್ಣ ಸಾಧ್ಯತೆ ಇದೆ. ಸ್ನೇಹಿತರು ಸಂತೋಷದ ಸಂಜೆಗಾಗಿ ನಿಮ್ಮನ್ನು ಅವರ ಸ್ಥಳಕ್ಕೆ ಆಮಂತ್ರಿಸುತ್ತಾರೆ. ಪ್ರೀತಿ ದೇವರ ಪೂಜೆಗೆ ಪರ್ಯಾಯವಾಗಿದೆ;

# ಪಂಚಾಂಗಗಳು ನಮ್ಮ ದಿನನಿತ್ಯದ ಬದುಕಿಗೆ ಬೆಳಕನ್ನು ತೋರಿಸುವ ಕನ್ನಡಿಗಳಾಗಿವೆ



**ಚನ್ನಗಿರಿ :** ದಿನದರ್ಶಿಕೆ ಕ್ಯಾಲೆಂಡರ್‌ಗಳು ಮತ್ತು ಪಂಚಾಂಗಗಳು ನೂರಾರು ವರ್ಷಗಳಿಂದ ನಮ್ಮ ದಿನನಿತ್ಯದ ಬದುಕಿಗೆ ಬೆಳಕನ್ನು ತೋರಿಸುವ ಕನ್ನಡಿಗಳಾಗಿವೆ ಎಂದು ಚನ್ನಗಿರಿ ಹಿರೇಮಠದ ಕೇದಾರಲಿಂಗ ಶಿವಶಾಂತವೀರ ಸ್ವಾಮಿಗಳು ಹೇಳಿದರು.

ಗುರುವಾರ ಪಟ್ಟಣದ ರಾಮಮನೋಹರ ಲೋಹಿಯಾ ಭವನದಲ್ಲಿ ಶ್ರೀ ದೈವ ಸಂಸ್ಕೃತಿ ಪ್ರತಿಷ್ಠಾನದ ವತಿಯಿಂದ ಹಮ್ಮಿಕೊಳ್ಳಲಾಗಿದ್ದ 2026 ನೇ ಸಾಲಿನ ಕ್ಯಾಲೆಂಡರ್ ಬಿಡುಗಡೆಗೊಳಿಸಿ ಮಾತನಾಡಿ ಕ್ಯಾಲೆಂಡರ್‌ಗಳಲ್ಲಿ ದಿನಾಂಕ ಮಾತ್ರವಲ್ಲದೇ ರಾಹುಕಾಲ, ಗುಳಿಕಕಾಲ ಮತ್ತು ಅಮವಾಸ್ಯೆ ಹುಣ್ಣಿಮೆಗಳ ಕುರಿತ ಸಮಗ್ರ ಮಾಹಿತಿಯನ್ನು ನೀಡಲಾಗುತ್ತಿದೆ. ಬೂದಿಸ್ವಾಮಿಗಳು ತಾಲೂಕಿನ ವಿವಿಧ ಕಡೆಗಳಲ್ಲಿ ಪೂಜಾ ಕಾರ್ಯಕ್ರಮಗಳನ್ನು ಮಾಡುವದರ ಜೊತೆಗೆ ಸಾಮಾಜಿಕ ಕಾರ್ಯಗಳಲ್ಲಿ ಸಹ ತೊಡಗಿದ್ದಾರೆ. ಮತ್ತು ಸಂಸ್ಕಾರಗಳ ಬಗ್ಗೆ ಪೂಜ ವಿಧಾನಗಳ ಬಗ್ಗೆ ತಿಳಿಸಿಕೊಡುವ ಪ್ರಯತ್ನ ಮಾಡುತ್ತಿದ್ದಾರೆ ಎಂದರು. ಶ್ರೀ ದೈವ ಸಂಸ್ಕೃತಿ ಪ್ರತಿಷ್ಠಾನ ಅಧ್ಯಕ್ಷರಾದ ಬೂದಿಸ್ವಾಮಿ ಹಿರೇಮಠ್ ಮಾತನಾಡಿ ಧರ್ಮರಕ್ಷಣೆ ದೇಶರಕ್ಷಣೆ ಮತ್ತು ನಮ್ಮ ಬಾಗದಲ್ಲಿ ಸಂಪ್ರದಾಯಗಳನ್ನು ಅಚರಣೆಗಳನ್ನು ಧರ್ಮದ ಮತ್ತು ಹಬ್ಬದ ಆಚರಣೆಗಳು ವಿಧಿವಿಧಾನಗಳನ್ನು ಯಾವ ರೀತಿ ಮಾಡಬೇಕು ಎನ್ನುವುದು ದಿನದರ್ಶಿಕೆಯಲ್ಲಿ ಇದೆ ಎಂದರು.

ಚನ್ನಗಿರಿ ತಾಲೂಕಿನಲ್ಲಿ ಸುಮಾರು 15 ವರ್ಷಗಳಿಂದ ಸಾಕಷ್ಟು ದಾರ್ಮಿಕ ಕಾರ್ಯಕ್ರಮಗಳನ್ನು ನಿರಂತರವಾಗಿ ಮಾಡುತ್ತಾ ಬಂದಿದ್ದು ಅದರ ಜೊತೆಯಲ್ಲಿ ಪತಾಂಜಲಿ ಪರಿವಾರದೊಂದಿಗೆ ಈ ದಿನದರ್ಶಿಕೆ ಬಿಡುಗಡೆ ಮಾಡಲಾಗುತ್ತಿದೆ ಎಂದರು. ಪತಾಂಜಲಿ ಯೋಗ ಶಿಕ್ಷಕ ವಸಂತ್ ಗುರೂಜಿ ಮಾತನಾಡಿ ಹಿಂದೂಗಳ ಸಂಪ್ರದಾಯದಂತೆ ನಮಗೆ ಯುಗಾದಿ ಹಬ್ಬದಿಂದ ವರ್ಷದ ಅರಂಭವಾಗುತ್ತದೆ. ಆದರೆ ದಿನದರ್ಶಿಗಳು ಕ್ರಿಸ್ತಶಕ ಪ್ರಾರಂಭವಾಗುವುದರಿಂದ ಈ ಕ್ಯಾಲೆಂಡರ್‌ಗಳನ್ನು ಬಳಕೆ ಮಾಡುತ್ತಿದ್ದೇವೆ. ಸ್ವಾಮಿಗಳ ನೇತ್ರತ್ವದಲ್ಲಿ ಅನ್‌ಲೈನ್‌ನಲ್ಲಿ ಮಹಿಳೆಯರಿಗೆ ಲಲಿತಾ ಸಹಸ್ರನಾಮ ಕಲಿಸಿಕೊಡುವ ಸೇವೆಯನ್ನು ಸಹ ಮಾಡುತ್ತಿದ್ದಾರೆ ಎಂದರು. ಈ ಸಂದರ್ಭದಲ್ಲಿ ವೀರಶೈವ ಮುಖಂಡರಾದ ನಾಗೇಂದ್ರಯ್ಯ, ಪತಾಂಜಲಿ ಯೋಗ ಶಿಕ್ಷಕರಾದ ಈಶ್ವರನಾಯ್ಕ, ಸುಜಾತ, ಸುನೀಲ್, ರಾಜಪ್ಪ, ವಿಶ್ವನಾಥ್ ಸೇರಿದಂತೆ ಇತರರು ಹಾಜರಿದ್ದರು.

# ಇಂದು ಗಿರಿಯಾಪುರ ಗುರುಕೃಪಾ ಪ್ರೌಢಶಾಲೆಯಲ್ಲಿ ಪ್ರತಿಭಾ ಕಾರಂಜಿ–ಕಲೋತ್ಸವ

**ಚಿಕ್ಕಮಗಳೂರು:** ಜಿಲ್ಲಾಡಳಿತ, ಜಿಲ್ಲಾ ಪಂಚಾಯಿತಿ, ಶಾಲಾ ಶಿಕ್ಷಣ ಇಲಾಖೆ, ಕಡೂರು ತಾಲ್ಲೂಕು ಆಡಳಿತ, ಕಡೂರು ತಾಲ್ಲೂಕು ಪಂಚಾಯಿತಿ. ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಚೇರಿ, ಕ್ಷೇತ್ರ ಸಮನ್ವಯಾಧಿಕಾರಿಗಳ ಕಚೇರಿ, ಗಿರಿಯಾಪುರ ಎಜುಕೇಶನ್ ಸೊಸೈಟಿ ಇವುಗಳ ಸಂಯುಕ್ತ ಆಶ್ರಯದಲ್ಲಿ ಜಿಲ್ಲಾ ಮಟ್ಟದ ಪ್ರಾಥಮಿಕ ಮತ್ತು ಪ್ರೌಢಶಾಲೆಗಳ ಪ್ರತಿಭಾ ಕಾರಂಜಿ ಮತ್ತು ಕಲೋತ್ಸವ ಕಾರ್ಯಕ್ರಮ ಡಿಸೆಂಬರ್ 6 ರಂದು ಬೆಳಿಗ್ಗೆ 9.30ಕ್ಕೆ ಗಿರಿಯಾಪುರ ಗುರುಕೃಪಾ ಪ್ರೌಢಶಾಲೆಯಲ್ಲಿ ನಡೆಯಲಿದೆ.

ಮಾನ್ಯ ಇಂಧನ ಹಾಗೂ ಜಿಲ್ಲಾ ಉಸ್ತುವಾರಿ ಸಚಿವರಾದ ಶ್ರೀ ಕೆ.ಜೆ.ಜಾರ್ಜ್ ಅವರು ಕಾರ್ಯಕ್ರಮವನ್ನು ಉದ್ಘಾಟಿಸುವರು. ಮಾನ್ಯ ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರಾದ ಶ್ರೀ ಮಧು ಬಂಗಾರಪ್ಪ, ವಿಧಾನ ಪರಿಷತ್ ಮಾನ್ಯ ಉಪ ಸಭಾಪತಿಗಳಾದ ಶ್ರೀ ಎಂ.ಕೆ.ಪ್ರಾಣೇಶ್, ಕರ್ನಾಟಕ ನವೀಕರಿಸಬಹುದಾದ ಇಂಧನ ಅಭಿವೃದ್ಧಿ ನಿಗಮದ ಅಧ್ಯಕ್ಷರು ಹಾಗೂ ಶಾಸಕರಾದ ಟಿ.ಡಿ.ರಾಜೇಗೌಡ, ರಾಜ್ಯ ಪ್ರವಾಸೋದ್ಯಮ ಅಭಿವೃದ್ಧಿ ನಿಗಮದ ಅಧ್ಯಕ್ಷರಾದ ಎಂ.ಶ್ರೀನಿವಾಸ್ ಉಪಸ್ಥಿತರಿರುವರು.

ಶಾಸಕರಾದ ಕೆ.ಎಸ್.ಆನಂದ್ ಅಧ್ಯಕ್ಷತೆ ವಹಿಸಲಿದ್ದು, ರಾಜ್ಯಸಭೆ ಸದಸ್ಯರಾದ ಜೈರಾಮ್ ರಮೇಶ್, ಉಡುಪಿ–ಚಿಕ್ಕಮಗಳೂರು ಲೋಕಸಭಾ ಕ್ಷೇತ್ರದ ಸಂಸದರಾದ ಕೋಟ ಶ್ರೀನಿವಾಸ ಪೂಜಾರಿ, ಹಾಸನ ಲೋಕಸಭಾ ಕ್ಷೇತ್ರದ ಸಂಸದರಾದ ಶ್ರೇಯಸ್ ಎಂ.ಪಟೇಲ್, ವಿಧಾನ ಪರಿಷತ್ ಸದಸ್ಯರಾದ ಎಸ್.ಎಲ್.ಭೋಜೇಗೌಡ, ಶಾಸಕರುಗಳಾದ ಜಿ.ಹೆಚ್.ಶ್ರೀನಿವಾಸ್, ಹೆಚ್.ಡಿತಮ್ಮಯ್ಯ, ನಯನ ಮೋಟಮ್ಮ,

ವಿಧಾನ ಪರಿಷತ್ ಸದಸ್ಯರುಗಳಾದ ಸಿ.ಟಿ.ರವಿ, ಡಾ.ಧನಂಜಯ ಸರ್ಜಿ, ಡಾ.ಆರತಿ ಕೃಷ್ಣ, ಭದ್ರಾ ಕಾಡಾ ಅಧ್ಯಕ್ಷರಾದ ಡಾ.ಕೆ.ಪಿ.ಅಂಶುಮಂತ್, ಕ.ರಾ. ಕೃಷಿ ಉತ್ಪನ್ನ ಸಂಸ್ಕರಣೆ ಮತ್ತು ರಫ್ತು ನಿಗಮದ ಅಧ್ಯಕ್ಷರಾದ ಬಿ.ಹೆಚ್.ಹರೀಶ್, ಗಿರಿಯಾಪುರ ಗ್ರಾ.ಪಂ. ಅಧ್ಯಕ್ಷೆ ಸಿ.ಎಂ.ಸುಧಾ, ಉಪಾಧ್ಯಕ್ಷೆ ಗೌರಮ್ಮ, ಸದಸ್ಯರುಗಳಾದ ಡಿ.ಬಿ.ಚೂಡಾಮಣಿ, ಜಿ.ಎಂ. ಉಮಾಮಹೇಶ್ವರಪ್ಪ, ಶಾರದಮ್ಮ, ಗಿರಿಯಾಪುರ ಶ್ರೀ ಗುರುಕೃಪಾ ಎಜುಕೇಶನ್ ಸೊಸೈಟಿಯ ಅಧ್ಯಕ್ಷ ಜಿ.ಎಸ್.ಸತೀಶ್, ಗಿರಿಯಾಪುರದ ಶ್ರೀ ಚಿದ್ಗುರು ಸದಾಶಿವ ಕುಮಾರ ಶಿವಯೋಗಿ ಪ್ರಸಾದ ನಿಲಯದ ಅಧ್ಯಕ್ಷ ಜಯಸೋಮನಾಥ ಪಾಲ್ಗೊಳ್ಳುವರು.

# ಇಂದು ಡಾ.ಅಂಬೇಡ್ಕರ್ ಪರಿನಿರ್ವಾಣ ದಿನಾಚರಣೆ

**ಚಿಕ್ಕಮಗಳೂರು:** ಸಂವಿಧಾನ ಶಿಲ್ಪಿ ಡಾ.ಬಿ.ಆರ್.ಅಂಬೇಡ್ಕರ್ ಅವರ 69ನೇ ಪರಿನಿರ್ವಾಣ ದಿನಾಚರಣೆಯನ್ನು ಡಿಸೆಂಬರ್ 6 ರಂದು ಬೆಳಿಗ್ಗೆ 9.30 ಗಂಟೆಗೆ ಜಿಲ್ಲಾ ಪಂಚಾಯಿತಿ ಆವರಣದಲ್ಲಿರುವ ಡಾ.ಬಿ.ಆರ್.ಅಂಬೇಡ್ಕರ್ ಅವರ ಪುತ್ಥಳಿಗೆ ಪುಷ್ಪಾರ್ಚನೆ ಸಲ್ಲಿಸಲು ಮೂಲಕ ಆಚರಿಸಲು ತೀರ್ಮಾನಿಸಲಾಗಿದ್ದು,

ಈ ಕಾರ್ಯಕ್ರಮಕ್ಕೆ ವಿವಿಧ ಸಂಘಟನೆಗಳ ಎಲ್ಲ ಮುಖಂಡರು ಹಾಗೂ ಸಾರ್ವಜನಿಕರು ಹೆಚ್ಚಿನ ಸಂಖ್ಯೆಯಲ್ಲಿ ಭಾಗವಹಿಸಿ ಕಾರ್ಯಕ್ರಮವನ್ನು ಯಶಸ್ವಿಗೊಳಿಸುವಂತೆ ಜಿಲ್ಲಾ ಸಮಾಜ ಕಲ್ಯಾಣ ಇಲಾಖೆಯ ಉಪನಿರ್ದೇಶಕರು ಕೋರಿದ್ದಾರೆ.

# ಯಶಸ್ವಿಯಾದ ಶ್ರೀ ಗಾಯತ್ರಿ ಪೂಜೆ, ಉಪಾಸನೆ

**ದಾವಣಗೆರೆ:** ಆಧ್ಯಾತ್ಮ ಪರಂಪರೆಯ ಕ್ರಿಯಾತ್ಮಕ ಸಂಸ್ಥೆ ಶ್ರೀ ಗಾಯತ್ರಿ ಪರಿವಾರದ ಆಶ್ರಯದಲ್ಲಿ ಪ್ರತೀ ತಿಂಗಳು ಹುಣ್ಣಿಮೆಯಂದು ನಿರಂತರ 25 ವರ್ಷಗಳಿಂದ ನಡೆದು ಬಂದ ಶ್ರೀ ಗಾಯತ್ರಿ ಪೂಜೆ ಉಪಾಸನೆ ಈ ತಿಂಗಳ ಹೊಸ್ತಿಲ ಹುಣ್ಣಿಮೆ ಪ್ರಯುಕ್ತ ನಗರದ ಜಯದೇವ ವೃತ್ತದಲ್ಲಿರುವ ಶ್ರೀ ಶಂಕರಮಠದ ಸಭಾಂಗಣದಲ್ಲಿ ನಡೆದ ಈ ಧಾರ್ಮಿಕ ಸೇವೆ ಪೂಜೆ ಯಶಸ್ವಿಯಾಗಿ ನಡೆಯಿತು ಎಂದು ಪರಿವಾರದ ಪ್ರಧಾನ ಕಾರ್ಯದರ್ಶಿ ಸಾಲಿಗ್ರಾಮ ಗಣೇಶ್‌ಶೆಣೈ ತಿಳಿಸಿದ್ದಾರೆ.

ಈ ತಿಂಗಳ ಪೂಜಾ ಸೇವೆಯನ್ನು ಶ್ರೀ ಗಾಯತ್ರಿ ಪರಿವಾರದ ಸಂಚಾಲಕರಾದ ಭಾವನ್ನಾರಾಯಣ ಮತ್ತು ಕುಟುಂಬ ಸೇರಿದಂತೆ ಪರಿವಾರದ ಸಂಚಾಲಕರಾದ



ಆರ್.ಎಂ. ಸತೀಶ್, ಶ್ರೀಮತಿ ಕಲ್ಪನಾ ರೇವಣಸಿದ್ದಪ್ಪ, ಶ್ರೀಮತಿ ಲತಾ ಮಂಜುನಾಥ್, ಸತ್ಯನಾರಾಯಣ ಮೂರ್ತಿ, ವಿ. ಕೃಷ್ಣಮೂರ್ತಿ, ಮಾಲತೇಶ್ ಕುಲಕರ್ಣಿ, ಪಿ.ಶಾಂತಕುಮಾರ್, ಸುರೇಶ್ ಮುಂತಾದವರು ಉಪಸ್ಥಿತರಿದ್ದರು.

# ಡಿ.11 ಜಿಲ್ಲಾ ಮಟ್ಟದ ಅಂಚೆ ಅದಾಲತ್

**ಚಿಕ್ಕಮಗಳೂರು:** ಅಂಚೆ ಇಲಾಖೆಯು ಒದಗಿಸುತ್ತಿರುವ ಸೇವೆಗಳ ಬಗ್ಗೆ ಗ್ರಾಹಕರುಗಳ ವ್ಯತ್ಯಯ ಹಾಗೂ ಕುಂದು ಕೊರತೆಗಳನ್ನು ಬಗೆಹರಿಸಿಕೊಳ್ಳಲು ಜಿಲ್ಲೆಯ ಅಂಚೆ ಗ್ರಾಹಕರುಗಳನ್ನು ಒಳಗೊಂಡ ಅಂಚೆ ಅದಾಲತ್ ಅನ್ನು ಡಿಸೆಂಬರ್ 11 ರಂದು ಸಂಜೆ 4 ಗಂಟೆಗೆ ನಗರದ ಕೆ.ಎಂ.ರಸ್ತೆಯಲ್ಲಿರುವ ಎಪಿಎಂಸಿ ಯಾರ್ಡ್ ಸಮೀಪವಿರುವ ಚಿಕ್ಕಮಗಳೂರು ವಿಭಾಗದ ಅಂಚೆ ಅಧೀಕ್ಷಕರ ಕಚೇರಿಯಲ್ಲಿ ಹಮ್ಮಿಕೊಳ್ಳಲಾಗಿದೆ.

ಜಿಲ್ಲೆಯ ಅಂಚೆ ಗ್ರಾಹಕರುಗಳು ತಮ್ಮ ದೂರುಗಳನ್ನು ಅಂಚೆ ಅದಾಲತ್‌ನಲ್ಲಿ ಬಗೆಹರಿಸಿಕೊಳ್ಳಬಹುದು. ದೂರುಗಳನ್ನು ಖುದ್ದಾಗಿ ಅಥವಾ ಅಂಚೆಯ ಮೂಲಕ ಅಂಚೆ ಅಧೀಕ್ಷಕರು, ಚಿಕ್ಕಮಗಳೂರು ವಿಭಾಗ, ಚಿಕ್ಕಮಗಳೂರು–577 102, (ಫೋನ್: 08262–235950, 9448291068, ಇಮೇಲ್: dochikmagalur.ka@indiapost.gov.in <mailto:dochikmagalur.ka@indiapost.gov.in>.) ಡಿಸೆಂಬರ್ 9 ರೊಳಗೆ ಕಳುಹಿಸಿಕೊಡುವಂತೆ ಅಂಚೆ ಅಧೀಕ್ಷಕರು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

# ಗುಡ್ಡೇಕಲ್ ದೇವಸ್ಥಾನ ಕಾರ್ತಿಕ ದೀಪೋತ್ಸವ ಕಾರ್ಯಕ್ರಮ



**ಶಿವಮೊಗ್ಗ:** ಬಾಲಸುಬ್ರಹ್ಮಣ್ಯ ಸ್ವಾಮಿ ದೇವಸ್ಥಾನ ಟ್ರಸ್ಟ್ ಮತ್ತು ಶ್ರೀ ಕಾರ್ತಿಕ ದಿಪೋತ್ಸವ ಸೇವಾ ಸಮಿತಿ ವತಿಯಿಂದ ಗುಡ್ಡೇಕಲ್ ದೇವಸ್ಥಾನ ಆವರಣದಲ್ಲಿ ಹಮ್ಮಿಕೊಳ್ಳಲಾಗಿದ್ದ ಕಾರ್ತಿಕ ದೀಪೋತ್ಸವ ಕಾರ್ಯಕ್ರಮ ದ ಅದ್ದೂರಿ ಮೆರವಣಿಗೆಯ ಈ ಸಂಧರ್ಬದಲ್ಲಿ ಶಿವಮೊಗ್ಗದ ಮಲೆನಾಡು ತಮಿಳ್ ಯುವ ಸಂಗಮ್ ಇವರಿಂದ ದೀಪವನ್ನು ತೆಗೆದುಕೊಂಡು ಬಂದ ಭಕ್ತಾಯಗಳಿಗೆ ಪುಷ್ಪವನ್ನು ಹಾಕಿ ಸ್ವಾಗತಿಸಿ ಹಾಗೂ ಶ್ರೀ ಬಾಲಸುಬ್ರಮಣ್ಯಯ ಸ್ವಾಮಿಯ ಮೂರ್ತಿಗೆ ಹೂವಿನ ಬೃಹತ್ ಮಾಲಾರ್ಪಣೆ ಹಾಗೂ ಪುಷ್ಪಾರ್ಚನೆ ಮಾಡಲಾಯಿತು. ಈ ಸಂದರ್ಭದಲ್ಲಿ ಅಧ್ಯಕ್ಷರಾದ ಸಂದೀಪ್ ಸುಂದರ್ ರಾಜ್, ಉಪಾಧ್ಯಕ್ಷರಾದ ಶಶಿಕುಮಾರ್ ಆರ್., ಪ್ರಧಾನ ಕಾರ್ಯದರ್ಶಿ, ರಮೇಶ್ ಸಿ., ಖಜಾಂಚಿ ಶಬರೀಶ್ ಎಸ್. ಸಂಘಟನಾ ಕಾರ್ಯದರ್ಶಿ ಕುಮಾರೇಶ್, ಸಹ ಕಾರ್ಯದರ್ಶಿಗಳು, ಸಂಘದ ಪದಾಧಿಕಾರಿಗಳಾದ ಸಂತೋಷ್, ಶಿವರಾಜ್, ರಮೇಶ್,

ರಾಜೇಶ್(ಕುಟ್ಟಿ) ಕಾರ್ತಿಕ್ ಎಂ., ಶ್ರೀಧರ್, ಭರತ್, ಕಾರ್ತಿಕ್ ವಿ. ವಿನಯ ಎಸ್., ಪ್ರಶಾಂತ್ ಆರ್, ಯುವರಾಜ್, ಫೆಕ್ಸ್ ರಘು, ಶಿವುಕುಮಾರ್, ನಟರಾಜ್, ಗೋಪಿ, ಶಬರಿ, ಮತ್ತಿತರರು ಉಪಸ್ಥಿತರಿದ್ದರು.

# ಎಸ್.ಎಸ್.ಎಲ್.ಸಿ. ಮಕ್ಕಳಿಗೆ ಪರೀಕ್ಷಾ ಪೂರ್ವಭಾವಿ ತಯಾರಿ ಉಚಿತ ಕಾರ್ಯಾಗಾರ ಉದ್ಘಾಟನೆ

**ದಾವಣಗೆರೆ:** ದಾವಣಗೆರೆ ಜಿಲ್ಲಾ ಪೊಲೀಸ್ ಇಲಾಖೆ ಮತ್ತು ದಾವಣಗೆರೆಯ ಕಲಾಕುಂಚ ಸಾಂಸ್ಕೃತಿಕ ಸಂಸ್ಥೆಯ ಸಂಯುಕ್ತಾಶ್ರಯದಲ್ಲಿ ಡಿಸೆಂಬರ್ 7 ರಂದು ಭಾನುವಾರ ಬೆಳಿಗ್ಗೆ 10 ಗಂಟೆಗೆ ನಗರದ ಪಿ.ಜೆ. ಬಡಾವಣೆಯ ಪೊಲೀಸ್ ಸಮುದಾಯ ಭವನ ಪೊಲೀಸ್ ಕವಾಯತು ಆವರಣದಲ್ಲಿ 2025–26ನೇ ಸಾಲಿನ ಎಸ್.ಎಸ್.ಎಲ್.ಸಿ. ಪರೀಕ್ಷೆಯಲ್ಲಿ ಭಾಗಿಯಾಗುವ ಮಕ್ಕಳಿಗೆ ಪರೀಕ್ಷೆ ಭಯ ದೂರಮಾಡುವ ಧೈರ್ಯ ತುಂಬುವ ಉತ್ತಮ ಫಲಿತಾಂಶದೊಂದಿಗೆ

ದಾವಣಗೆರೆಯಲ್ಲಿ ವ್ಯಾಸಂಗ ಮಾಡುವ ಶಿಕ್ಷಣ ಸಂಸ್ಥೆಗೆ ಹೆತ್ತ ತಂದೆ–ತಾಯಿಗಳಿಗೆ ಒಳ್ಳೆಯ ಹೆಸರು ತರುವ ಸದುದ್ದೇಶದಿಂದ ಈ ಉಚಿತ ಕಾರ್ಯಾಗಾರ ಹಮ್ಮಿಕೊಂಡಿದ್ದು ದಾವಣಗೆರೆ ಜಿಲ್ಲೆಯ ಪೊಲೀಸ್ ವರಿಷ್ಠಾಧಿಕಾರಿಗಳಾದ ಶ್ರೀಮತಿ ಉಮಾ ಪ್ರಶಾಂತ್ ಅಧ್ಯಕ್ಷತೆ ವಹಿಸಿ ಉದ್ಘಾಟಿಸಲಿದ್ದಾರೆ.

ಮುಖ್ಯ ಅತಿಥಿಗಳಾಗಿ ದಾವಣಗೆರೆ ಪೊಲೀಸ್ ಉಪಾಧೀಕ್ಷಕರಾದ ಪ್ರಕಾಶ್ ಪಿ.ಬಿ. ನಗರದ ಉಪ ವಿಭಾಗದ ಪೊಲೀಸ್ ಉಪಾಧೀಕ್ಷಕರಾದ

ಶರಣ ಬಸವೇಶ್ವರ ಬಿ.ಆರ್. ಪೊಲೀಸ್ ನಿರೀಕ್ಷಕರಾದ ಪ್ರಶಾಂತ್ ಕೆ.ಎಸ್. ಆಗಮಿಸಲಿದ್ದಾರೆ. ಮಕ್ಕಳಿಗೆ ಪರೀಕ್ಷಾ ಪೂರ್ವಭಾವಿ ತಯಾರಿ ಉಚಿತ ಕಾರ್ಯಾಗಾರವನ್ನು ಕಲಾಕುಂಚದ ಸಂಸ್ಥಾಪಕರಾದ ಸಾಲಿಗ್ರಾಮ ಗಣೇಶ್ ಶೆಣೈಯವರು ನಡೆಸಿಕೊಡಲಿದ್ದಾರೆ.

ಕಲಾಕುಂಚ ಮಹಿಳಾ ವಿಭಾಗದ ಸಂಸ್ಥಾಪಕರಾದ ಶ್ರೀಮತಿ ಜ್ಯೋತಿ ಗಣೇಶ್ ಶೆಣೈ, ಕಲಾಕುಂಚ ಮಹಿಳಾ ವಿಭಾಗದ ಅಧ್ಯಕ್ಷರಾದ ಶ್ರೀಮತಿ ಹೇಮಾ ಶಾಂತಪ್ಪ ಪೂಜಾರಿಯವರು ವೇದಿಕೆಯಲ್ಲಿ ಗೌರವ ಉಪಸ್ಥಿತರಿರುತ್ತಾರೆ.

2025–26ನೇ ಸಾಲಿನ ಎಸ್.ಎಸ್.ಎಲ್.ಸಿ. ವಿದ್ಯಾರ್ಥಿ–ವಿದ್ಯಾರ್ಥಿನಿಯರು, ಪೋಷಕರು ಹೆಚ್ಚಿನ ಸಂಖ್ಯೆಯಲ್ಲಿ ಆಗಮಿಸಿ ಈ ಕಾರ್ಯಾಗಾರ ಯಶಸ್ವಿಗೊಳಿಸಿ ದಾವಣಗೆರೆ ಜಿಲ್ಲೆಗೆ ಉತ್ತಮ ಫಲಿತಾಂಶ ಬಂದು ಹೆಸರು ತರಲಿ ಎಂದು ಕಲಾಕುಂಚದ ಪ್ರಧಾನ ಕಾರ್ಯದರ್ಶಿ ಕೆ.ಸಿ.ಉಮೇಶ್ ವಿನಂತಿಸಿದ್ದಾರೆ.

# ಕೋಲಾಚಲಂ ವೆಂಕಟರಾವ್ ಪ್ರತಿಮೆ ಅಳವಡಿಸಲು ಮನವಿ

**ಬಳ್ಳಾರಿ:** ದಿವಂಗತ ಕೋಲಾಚಲಂ ವೆಂಕಟರಾವ್ ರವರ ಪ್ರತಿಮೆ ಹಾಗೂ ನಾಮ ಫಲಕಗಳನ್ನು ಅಳವಡಿಸುವಂತೆ ಕೋಲಾಚಲಂ ವಿಶ್ವ ಪ್ರಕಾಶ್ ರವರ ಮೂಲಕ ನಗರ ಶಾಸಕ ನಾರಾ ಭರತ್ ರೆಡ್ಡಿ ಅವರಿಗೆ ಸಲ್ಲಿಸಲಾಯಿತು. ಶಾಸಕರ ಕಚೇರಿಗೆ ತೆರಳಿದ ಬ್ರಾಹ್ಮಣ ಸಮುದಾಯದ ಮುಖಂಡರು ಕೋಲಾಚಲಂ ಅವರು ಬಳ್ಳಾರಿಗೆ ನೀಡಿದ ವಿವಿಧ ರೀತಿಯ ಸಾಹಿತ್ಯಕ, ಸಾಂಸ್ಕೃತಿಕ ಕೊಡುಗೆಗಳ ಕುರಿತು ಮನವರಿಕೆ ಮಾಡಿಕೊಟ್ಟರು.

ಅಖಿಲ ಕರ್ನಾಟಕ ಬ್ರಾಹ್ಮಣ ಮಹಾಸಭಾದ ಜಿಲ್ಲಾಧ್ಯಕ್ಷರಾದ ಡಾ. ಶ್ರೀನಾಥ್, ಅಖಿಲ ಕರ್ನಾಟಕದ ಬ್ರಾಹ್ಮಣ ಮಹಾಸಭಾದ ರಾಜ್ಯ ಕಾರ್ಯಕಾರಣಿ ಸದಸ್ಯರಾದ ಸತೀಶ್



ದೇಸಾಯಿ, ಸಿಮೆಂಟ್ ಗಿರಿ ಪ್ರಸಾದ್, ನೇಮಕಲ್ ರಾವ್, ಮಂಜುನಾಥ್ ಭಟ್, ಕೆ.ಪ್ರಕಾಶ್, ಜೋಯಿಸ್ ಶ್ರೀನಾಥ್, ಬಾದನಹಟ್ಟಿ ರಘುನಂದನ, ಸಮರ್ಥ, ರಾಘು, ಡೋಕ್ಕಿ ಗಿರಿ, ಬಜಾರದ ಹರಿ ಪ್ರಸಾದ್ ಇನ್ನಿತರರು ಈ ಸಂದರ್ಭದಲ್ಲಿ ಇದ್ದರು.

# ಜಿಲ್ಲೆಯ ವಿವಿಧೆಡೆ ಜಿಲ್ಲಾಧಿಕಾರಿಗಳ ಅನಿರೀಕ್ಷಿತ ಭೇಟಿ ಪರಿಶೀಲನೆ

**ದಾವಣಗೆರೆ:** ಜಿಲ್ಲೆಯ ಚನ್ನಗಿರಿ ತಾಲ್ಲೂಕಿನ ಚನ್ನಗಿರಿ ತಾಲ್ಲೂಕು ಆಸ್ಪತ್ರೆ ಹಾಗೂ ಕುಂದುವಾಡ ರಸ್ತೆಯಲ್ಲಿನ ಸಮಾಜ ಕಲ್ಯಾಣ ಇಲಾಖೆಯ ಸರ್ಕಾರಿ ಮೆಟ್ರಿಕ್ ನಂತರ ಬಾಲಕಿಯರ ವಿದ್ಯಾರ್ಥಿನಿಲಯಗಳಿಗೆ ಗುರುವಾರ ಜಿಲ್ಲಾಧಿಕಾರಿ ಜಿ.ಎಂ.ಗಂಗಾಧರಸ್ವಾಮಿ ಅವರು ಅನಿರೀಕ್ಷಿತವಾಗಿ ಭೇಟಿ ನೀಡಿ ಪರಿಶೀಲನೆ ನಡೆಸಿದರು.

ಆರಂಭದಲ್ಲಿ ಚನ್ನಗಿರಿ ತಾಲ್ಲೂಕು ಆಸ್ಪತ್ರೆಗೆ ಭೇಟಿ ನೀಡಿ ವಿವಿಧ ವಾರ್ಡ್, ಔಷಧಿ ವಿತರಣೆ ಸ್ಥಳ, ವಿವಿಧ ಕೊಠಡಿಗಳಿಗೆ ಭೇಟಿ ನೀಡಿ ರೋಗಿಗಳ ಕ್ಷೇಮ ವಿಚಾರಿಸಿ ವೈದ್ಯಕೀಯ ಸೌಲಭ್ಯಗಳ ಬಗೆ ಮಾಹಿತಿ ಪಡೆದರು. ಆಸ್ಪತ್ರೆಗೆ ಬಂದಂತಹ ರೋಗಿಗಳಿಗೆ ಹೆಚ್ಚು ಕಾಯಿಸದೆ ತ್ವರಿತವಾಗಿ ಸ್ಪಂದಿಸುವಂತೆ ಸಂಬಂಧಪಟ್ಟ ಅಧಿಕಾರಿಗಳಿಗೆ ಸೂಚಿಸಿದರು.



ಆಸ್ಪತ್ರೆಯಲ್ಲಿ ಯಾವುದೇ ಕಾರಣಕ್ಕೂ ಔಷಧಿ ದಾಸ್ತಾನು ಇಲ್ಲವೆಂದು ಔಷಧಿ ತರಲು ಆಸ್ಪತ್ರೆಯಿಂದ ಹೊರಗಡೆ ಚೀಟಿ ಬರೆದು ಕೊಡುವಂತಿಲ್ಲ. ದಾಸ್ತಾನಿಲ್ಲದ ಔಷಧಿಗಳ ಬಗ್ಗೆ ಜಿಲ್ಲಾಧಿಕಾರಿಗಳ ಬಳಿ ಪ್ರಸ್ತಾವನೆ ಸಲ್ಲಿಸಿ ಅನುಮೋದನೆ ಪಡೆದುಕೊಂಡು ಪ್ರತಿಯೊಬ್ಬರಿಗೂ ಸಕಾಲದಲ್ಲಿ ಗುಣಮಟ್ಟದ ಚಿಕಿತ್ಸೆ ನೀಡಬೇಕೆಂದು ಎಚ್ಚರಿಕೆ ನೀಡಿದರು.

ಕುಂದುವಾಡ ರಸ್ತೆಯಲ್ಲಿನ ಡಾ.ಬಿ.ಆರ್.ಅಂಬೇಡ್ಕರ್ ಮೆಟ್ರಿಕ್ ನಂತರದ ಬಾಲಕಿಯರ ವಿದ್ಯಾರ್ಥಿ ನಿಲಯಕ್ಕೆ ಭೇಟಿ ನೀಡಿದ ಅಡುಗೆ ಕೋಣೆ, ಭೋಜನಾಲಯ, ವಿದ್ಯಾರ್ಥಿನಿಲಯ ವಿವಿಧ ಕೊಠಡಿಗಳಿಗೆ ಭೇಟಿ ನೀಡಿ ಪರಿಶೀಲಿಸಿದರು.

ವಿದ್ಯಾರ್ಥಿಗಳೊಂದಿಗೆ ಸಂವಾದ ನಡೆಸಿ ಸಮಯಕ್ಕೆ ಸರಿಯಾದ ಊಟೋಪಚಾರ, ಕುಡಿಯುವ ನೀರು, ಇನ್ನಿತರೆ ಸೌಲಭ್ಯಗಳ ಕುರಿತು ಮಾಹಿತಿ ಪಡೆದರು. ಶುಚಿ ಮತ್ತು ರುಚಿಯಾದ ಆಹಾರ ನೀಡುವುದರ ಜತೆಗೆ ಸ್ವಚ್ಛತೆ ಕಾಪಾಡಬೇಕು. ವಿದ್ಯಾರ್ಥಿಗಳಿಗೆ ತಾಜಾ ತರಕಾರಿ, ಕಾಳು ಮುಂತಾದ ಪೌಷ್ಠಿಕಾಂಶಯುಕ್ತ ಉತ್ಪನ್ನಗಳೊಂದಿಗೆ ಗುಣಮಟ್ಟದ ಆಹಾರ ನೀಡಬೇಕು ಎಂದು ತಿಳಿಸಿದರು.

# ಪೋಲಿಸ್ ಠಾಣೆಗೆ ಜಿಲ್ಲಾ ಪೋಲಿಸ್ ವರಿಷ್ಟಾದಿಕಾರಿ ಉಮಾಪ್ರಶಾಂತ್ ಬೇಟಿ



**ಚನ್ನಗಿರಿ** : ದಾವಣಗೆರೆ ಜಿಲ್ಲಾ ಪೋಲಿಸ್ ಠಾಣಾ ವ್ಯಾಪ್ತಿಯಲ್ಲಿ ಅಪರಾಧಗಳನ್ನು ತಡೆಗಟ್ಟುವ ಉದ್ದೇಶದಿಂದ ಮತ್ತು ಸಾರ್ವಜನಿಕರೊಂದಿಗೆ ಉತ್ತಮ ಬಾಂದವ್ಯವನ್ನು ಬೆಳೆಸಿಕೊಳ್ಳುವ ಉದ್ದೇಶದಿಂದ ಅಪರಾಧ ತಡೆ ಮಾಸಾಚರಣೆಯನ್ನು ಹಮ್ಮಿಕೊಳ್ಳಲಾಗಿದ್ದು ಇದರಲ್ಲಿ ಸಾರ್ವಜನಕರು ಸಹಕಾರ ಆತ್ಯಗತ್ಯವಾಗಿದೆ ಎಂದು ಜಿಲ್ಲಾ ಪೋಲಿಸ್ ವರಿಷ್ಟಾದಿಕಾರಿ ಉಮಾಪ್ರಶಾಂತ್ ಹೇಳಿದರು.

ಗುರುವಾರ ಚನ್ನಗಿರಿ ಪೋಲಿಸ್ ಠಾಣೆಗೆ ಅಧಿಕೃತ ಪರೀವೀಕ್ಷಣೆ ಬೇಟಿ ನೀಡಿ ಮಾತನಾಡಿ ಈ ತಿಂಗಳು ಎಲ್ಲಾ ಠಾಣೆಗಳ ವ್ಯಾಪ್ತಿಯಲ್ಲಿ ಜನರಲ್ಲಿ ಜಾಗೃತಿ ಮೂಡಿಸುವಂತಹ ಕೆಲಸಗಳನ್ನು ಮಾಡಲಾಗುತ್ತಿದೆ. ರಸ್ತೆ ಅಪಘಾತಗಳು ಮಹಿಳೆಯರ ರಕ್ಷಣೆ ಮತ್ತು ಜಾಗೃತಿ ಮೂಡಿಸುವ ಉದ್ದೇಶದಿಂದ ಮತ್ತು ಸಮಸ್ಯೆಗಳಿಗೆ ತಕ್ಷಣವೇ ಸ್ಪಂದಿಸುವ ಉದ್ದೇಶದಿಂದ ದುರ್ಗಾ ಪಡೆಯನ್ನು ನಿಯೋಜನೆ ಮಾಡಲಾಗಿದ್ದು ತಾಲೂಕು ಕೇಂದ್ರಗಳ ಶಾಲಾ ಕಾಲೇಜುಗಳಲ್ಲಿ ಪೋಕ್ಸೋ ಕಾಯ್ದೆಗಳ ಬಗ್ಗೆ ಮಾಹಿತಿಯನ್ನು ನೀಡಲಾಗುತ್ತಿದೆ ಎಂದರು.

ಚನ್ನಗಿರಿ ತಾಲೂಕಿನ ನಲ್ಲೂರು ಗ್ರಾಮದ ಪೋಲಿಸ್ ಉಪಠಾಣೆಗೆ ಮೇಲ್ದರ್ಜೆಗೇರಿಸಲು ಮೇಲಾಧಿಕಾರಿಗಳಿಗೆ ಮನವಿ ಸಲ್ಲಿಸಲಾಗಿದೆ. ಜಿಲ್ಲೆಯಲ್ಲಿ ಸುಮಾರು 850 ನಾಪತ್ತೆ ಪ್ರಕರಣಗಳು ದಾಖಲಾಗಿದ್ದು ಸಾಕಷ್ಟು ಪ್ರಕರಣಗಳನ್ನು ಪತ್ತೆ ಮಾಡಲಾಗಿದೆ ಎಂದರು. ಈ ಸಂದರ್ಭದಲ್ಲಿ ಎ.ಎಸ್.ಪಿ.ಸ್ಯಾಮ್ ವರ್ಗಿಸ್, ಪಿ.ಐ. ರವೀಶ್ ಸೇರಿದಂತೆ ಪೋಲಿಸ್ ಅಧಿಕಾರಿಗಳು ಹಾಜರಿದ್ದರು.

## ಸರ್ಕಾರಿ ವಿಜ್ಞಾನ ಕಾಲೇಜಿನ ಆವರಣದಲ್ಲಿ ಮಹಿಳಾ ಕಾಲೇಜು ಸೂಕ್ತವಾದ ಆಯ್ಕೆ ಅಲ್ಲ.

# ಮಹಿಳಾ ಕಾಲೇಜಿಗೆ ಸೂಕ್ತವಾದ ಜಾಗ ಆಯ್ಕೆ ಮಾಡಿಕೊಳ್ಳಿ

**ಚಿತ್ರದುರ್ಗ:** ಸರ್ಕಾರಿ ವಿಜ್ಞಾನ ಕಾಲೇಜಿನ ಆವರಣದಲ್ಲಿ ಮಹಿಳಾ ಕಾಲೇಜು ನಿರ್ಮಾಣ ಮಾಡುವುದು ಸೂಕ್ತವಾದ ಸ್ಥಳವಲ್ಲ, ಮಹಿಳಾ ಕಾಲೇಜಿಗೆ ಸೂಕ್ತವಾದಂತಹ ಜಾಗವನ್ನ ಆಯ್ಕೆ ಮಾಡಿಕೊಂಡು, ಸರ್ಕಾರಿ ವಿಜ್ಞಾನ ಕಾಲೇಜಿನ ಆವರಣದಲ್ಲಿರುವ ಗಿಡಮರಗಳನ್ನು, ಪರಿಸರವನ್ನ ಉಳಿಸಿಕೊಳ್ಳಬೇಕಾಗಿದೆ, ಮುಂದೊಂದು ದಿನ ಸರ್ಕಾರಿ ವಿಜ್ಞಾನ ಕಾಲೇಜಿನ ಅಭಿವೃದ್ಧಿಗೋಸ್ಕರ ಅಥವಾ ಸ್ನಾತಕೋತ್ತರ ವಿಭಾಗಗಳನ್ನ ತೆರೆಯಲು, ವಿಜ್ಞಾನದ ಸಂಶೋಧನಾ ಘಟಕಗಳನ್ನು ತೆಗೆಯಲು, ಸೂಕ್ತವಾದ ಸ್ಥಳವನ್ನು ಉಳಿಸಿಕೊಂಡು, ಸಾವಿರಾರು ವಿದ್ಯಾರ್ಥಿಗಳಿಗೆ ಕುಳಿತುಕೊಳ್ಳುವ, ಓದುವ ಜಾಗವನ್ನ ಕಬಳಿಸಿಕೊಳ್ಳುವುದು ಅನ್ಯಾಯಕರ ಎಂದು ಕರ್ನಾಟಕ ಜ್ಞಾನ ವಿಜ್ಞಾನ ಸಮಿತಿ ರಾಜ್ಯ ಉಪಾಧ್ಯಕ್ಷ ಮತ್ತು ಕರ್ನಾಟಕ ಸರ್ವೋದಯ ಮಂಡಳಿಯ ಜಿಲ್ಲಾಧ್ಯಕ್ಷ ಡಾ ಎಚ್ ಕೆ ಎಸ್ ಸ್ವಾಮಿ ಅವರು ಜಿಲ್ಲಾಡಳಿತವನ್ನು, ಕಾಲೇಜು ಇಲಾಖೆ ಮಂಡಳಿಗಳನ್ನು, ಜನಪ್ರತಿನಿಧಿಗಳನ್ನು ವಿನಂತಿಸಿಕೊಂಡಿದ್ದಾರೆ.



ಅವರು ಚಿತ್ರದುರ್ಗ ನಗರದ ಕೇಂದ್ರ ಭಾಗದಲ್ಲಿರುವ ಸರ್ಕಾರಿ ವಿಜ್ಞಾನ ಕಾಲೇಜಿನ ಆವರಣದೊಳಗೆ ಮಹಿಳಾ ಕಾಲೇಜು ನಿರ್ಮಾಣಕ್ಕಾಗಿ ಮರ–ಗಿಡಗಳನ್ನ ತೆರವುಗೊಳಿಸಿ, ಕಾಲೇಜು ನಿರ್ಮಾಣ ಮಾಡಲು ಮುಂದಾಗುತ್ತಿರುವ ಸರ್ಕಾರದ ನಿರ್ಧಾರವನ್ನ ಬದಲಾಯಿಸಿಕೊಳ್ಳಲು ಮನವಿ ಮಾಡಿಕೊಳ್ಳುತ್ತಾ ಮಾತನಾಡುತ್ತಿದ್ದರು.

ಸರ್ಕಾರಿ ಕಾಲೇಜಿನ ವಿಜ್ಞಾನ ಆವರಣದಲ್ಲಿ ವೈದ್ಯಕೀಯ ಕಾಲೇಜು, ಕೇಂದ್ರೀಯ ಶಾಲೆ, ಮಹಿಳಾ ಕಾಲೇಜು, ಹೀಗೆ ಹಲವಾರು ರೀತಿಯ ಯೋಜನೆಗಳಿಗೆ ಸರ್ಕಾರಿ ವಿಜ್ಞಾನ

ಕಾಲೇಜ ಆವರಣವನ್ನು ಆಯ್ಕೆ ಮಾಡಿಕೊಳ್ಳುವುದು ಸೂಕ್ತವಾದದ್ದಲ್ಲ, ಸರ್ಕಾರಿ ವಿಜ್ಞಾನ ಕಾಲೇಜು ಐತಿಹಾಸಿಕ ಕಟ್ಟಡವಾಗಿದ್ದು, 3000 ಕ್ಕಿಂತ ಹೆಚ್ಚು ವಿದ್ಯಾರ್ಥಿಗಳು ಓದುತ್ತಿರುವಂತ ಕಾಲೇಜಿಗೆ, ವಿದ್ಯಾರ್ಥಿಗಳು ಓಡಾಡಲು, ಕುಳಿತುಕೊಳ್ಳಲು, ಗಾಡಿಗಳನ್ನ ಪಾರ್ಕ್ ಮಾಡಲು, ಮುಂದೊಂದು ದಿನ ಅವರ ಕಾಲೇಜಿನ ಸ್ನಾತಕೋತ್ತರ ವಿಭಾಗವನ್ನ ವಿಸ್ತರಿಸಿಕೊಳ್ಳಲು ಮತ್ತು ವಿಜ್ಞಾನ ಕಾಲೇಜಿಗೆ ಬೇಕಾದಂತ ಪ್ರಯೋಗಾಲಯಗಳನ್ನ ವಿಸ್ತರಿಸಲು, ಗ್ರಂಥಾಲಯವನ್ನು ವಿಸ್ತರಿಸಲು, ಔಷಧ ಸಸ್ಯಗಳ

ತೋಟ ನಿರ್ಮಾಣಕ್ಕೆ ವಿಸ್ತರಿಸಿಕೊಳ್ಳಲು, ಅವರಿಗೆ ಕನಿಷ್ಠ ಪಕ್ಷ ಎರಡರಿಂದ ಮೂರು ಎಕರೆ ಜಾಗವನ್ನು ಉಳಿಸಿಕೊಳ್ಳುವುದು ಸೂಕ್ತವಾಗಿದೆ ಎಂದರು.ನೂರು ವರ್ಷ ಹಳೆಯ ಕಾಲೇಜಿನ ಆವರಣವನ್ನು ಅಭಿವೃದ್ಧಿಗೊಳಿಸಿ ಕೂಂಡಿರುವ ಕಡೆ, ನಾವು ಜೆಸಿಬಿ ತಂದು, ಮರ ಗಿಡಗಳನ್ನು ತೆಗೆದು, ಅಲ್ಲಿ ಹೊಸ ಕಟ್ಟಡ ನಿರ್ಮಾಣ ಮಾಡುವುದು ಪ್ರಕೃತಿ ವಿರೋಧವಾಗಿದೆ ಎಂದರು., ವಾತಾವರಣ ಕಲುಷಿತಗೊಳ್ಳುತ್ತಿದ್ದು, ನೂರಾರು ಮರಗಳನ್ನು ಇಟ್ಟುಕೊಂಡಂತ ಹಳೆ ಐತಿಹಾಸಿಕ ಕಟ್ಟಡಗಳ ಆವರಣಗಳನ್ನಾಗಿ ಉಳಿಸಿಕೊಳ್ಳಬೇಕಾದ್ದು ಅಧಿಕಾರಿಗಳ, ಸಾರ್ವಜನಿಕರ, ಪೋಷಕರ, ವಿದ್ಯಾರ್ಥಿಗಳ ಜಾಣತನವಾಗುತ್ತದೆ ಎಂದರು.

# ಹಳೆಯ ಗೆಳೆಯರು



ಎಲ್ಲ ಮಿತ್ರರೂ
ಮುಪ್ಪಾಗುತ್ತಿದ್ದಾರೆ
ನಿಧಾನಕ್ಕೆ
ನಡೆಯುತ್ತಿದ್ದಾರೆ
ನನ್ನ ಹಾಗೇ
ಹರೆಯದಲ್ಲಿ ಮಿಂಚುತ್ತಿದ್ದ
ಪಟ್ಟುಗಳೆಲ್ಲ ಈಗ
ಮಾಯವಾಗಿವೆ.

ಯಾರಿಗೋ ಬೊಜ್ಜು ಬಂದಿದೆ
ಇನ್ಯಾರಿಗೋ
ಕೂದಲು ಹಣ್ಣಾಗುತ್ತಿವೆ.

ಎಲ್ಲರ ತಲೆಯ ಮೇಲೆ
ಜವಾಬ್ದಾರಿ ಎಲ್ಲರಿಗೂ
ಸಣ್ಣ ಪುಟ್ಟ ಅಜಾರಿ..

ಯಾರಿಗೋ ದೇಹದ ನೋವು
ಯಾರಿಗೋ ಮನದ ಅಳಲು

ದಿನವಿಡೀ ಓಡುತ್ತಿದ್ದವರು
ಈಗ ನಡೆಯುವಾಗಲೂ ದಣಿವಾರಿಸಿಕೊಳ್ಳುತ್ತಿದ್ದಾರೆ.

ಯಾರಿಗೂ ಸಮಯವಿಲ್ಲ
ಎಲ್ಲರ ಕಣ್ಣಲ್ಲೂ ನೋವಿನ
ಛಾಯೆ ಛಾಯೆ

ಎಲ್ಲರಿಗೂ ಅನ್ನಿಸುವುದು
ಅಪ್ಪನನ್ನು ಇನ್ನಷ್ಟು ಆರೈಕೆ ಮಾಡಬೇಕಿತ್ತು.!!
ಕೊನೆಯ ದಿನಗಳಲ್ಲಿ
ಅಮ್ಮನ ಸೇವೆ ಮಾಡಬೇಕಿತ್ತು.!!

ಕಲವರಿಗೆ ಪಶ್ಚಾತ್ತಾಪ..
ಹೆಂಡತಿಯನ್ನ ಇನ್ನೂ ಪ್ರೀತಿಸಬೇಕಿತ್ತು.. ಅವಳೊಂದಿಗೆ ಹೆಚ್ಚು
ಸಮಯ ಕಳೆಯಬೇಕಿತ್ತು ?

ಮಕ್ಕಳಿಗೆ..
ಸಮಯ ಕೊಡಬೇಕಿತ್ತು
ಮಿತ್ರನೊಂದಿಗೆ ..
ಜಗಳ ಮಾಡಬಾರದಿತ್ತು
ಎಂಬ ಏನೇನೋ ಹಳೇ ನೆನಪು ಕಾಡುತ್ತವೆ.!?.

ಅಂತೂ ಇಷ್ಟಾದರೂ ಸಾಧಿಸಿದೆನಲ್ಲ
ಎಂಬ ನೆಮ್ಮದಿಯೂ ಇದೆ ..!!!

ಹಳೆಯ ಭಾವಚಿತ್ರಗಳ
ನೋಡಿ , ನೋಡಿ, ನೋಡಿ.. ಈಗಲೂ
ಮನಸ್ಸು ತುಂಬಿ
ಬ ರು ತ್ತ ದೆ .

ಈ ಸಮಯವೂ
ಎಂಥ ವಿಚಿತ್ರ ನೋಡಿ!
ಹೇಗೆ ಸವೆದು ಹೋಗುತ್ತದೆ !?!

ನಿನ್ನೆಯ
ನ. ವ. ಯು. ವ. ಕ .
ನನ್ನ ಮಿತ್ರ
ಇಂದು ವೃದ್ಧನಂತೆ ಕಾಣುತ್ತಾನೆ.

ಒಂದೊಮ್ಮೆ (ಮರೀಚಿಕೆ)
ಕನಸು ಕಾಣುತ್ತಿದ್ದವರು
ಗತಿಸಿದ ದಿನಗಳಲ್ಲಿ
ಕಳೆದು ಹೋಗಿದ್ದಾರೆ
(ಹೋಗುತ್ತಲೂ ಇದ್ದಾರೆ)..

ಆದರೆ ಇದು ಪರಮ ಸತ್ಯ ! ಸತ್ಯ.
ಎಲ್ಲಾ ಮಿತ್ರರೂ ನೋಡ ನೋಡುತ್ತಲೇ ಹಣ್ಣಾಗುತ್ತಿದ್ದಾರೆ.! ಕೆಲವ್ರು
ಹಣ್ ಹಣ್
ಕೂಡ ಆಗ್ತಾ ಇದ್ದಾರೆ..!!!

ಮಿತ್ರರೇ ,
ಮುಂದೆ ಸಮಯದ ಲಯ
ಇನ್ನೂ ತೀವ್ರವಾಗಲಿದೆ. ! ?
ಈಗ ಉಳಿದ ಬದುಕೇ ಒಂದು ದೊಡ್ಡ
' ಬ ಹು ಮಾ ನ '

ಆದ್ದರಿಂದ,
ಮಾಡುವುದನ್ನು ಮಾಡಿ ಮುಗಿಸಿ
ಕೊಡುವುದನ್ನು ಕೊಟ್ಟು ಮುಗಿಸಿ
ಮನಸಿನ ಆಸೆಗಳನ್ನು
ಬಚ್ಚಿಟ್ಟು ಕೊರಗದಿರಿ
ನಿರಾಳ ಮನಸ್ಸಿನಿಂದ ಬದುಕಿ.!!

**ಬಸವರಾಜ್ ಎಚ್ ಎಸ್**
**ಉಪನ್ಯಾಸಕರು**
**ಟೀಮ್ ಅಕಾಡೆಮಿ, ದಾವಣಗೆರೆ**

## ಜೈನ್ ವಿದ್ಯಾಲಯ ಸ್ಟೇಟ್ ಮತ್ತು ಸಿಬಿಎಸ್ಇ ಸಂಭ್ರಮ ಅಂತರ್ಶಾಲಾ ಸಾಂಸ್ಕೃತಿಕ ಸ್ಪರ್ಧೆಯಲ್ಲಿ

# ಜೈನ್ ವಿದ್ಯಾಲಯ ಸಿಬಿಎಸ್ಇ ಶಾಲಾ ಮಕ್ಕಳ ಕೀರ್ತಿ

ದಾವಣಗೆರೆ: ನವೆಂಬರ್ 8, ಶನಿವಾರದಂದು ದಾವಣಗೆರೆಯ ತೋಳಹುಣಸೆ ಪಿ.ಎಸ್.ಎಸ್.ಇ.ಎಂ.ಆರ್ ಶಾಲೆಯಲ್ಲಿ ನಡೆದ "ಸಂಭ್ರಮ" ದಾವಣಗೆರೆ ಜಿಲ್ಲಾ ಅಂತರ್ಶಾಲಾ ಸಾಂಸ್ಕೃತಿಕ ಸ್ಪರ್ಧೆಯಲ್ಲಿ ಜೈನ್ ವಿದ್ಯಾಲಯ ಸಿಬಿಎಸ್ಇ, ಕಸಬ ಹೋಬಳಿ ಶಾಮನೂರು ಶಾಲಾ ವಿದ್ಯಾರ್ಥಿಗಳು ತಮ್ಮ ಅತ್ಯುತ್ತಮ ಪ್ರತಿಭೆಯನ್ನು ಪ್ರದರ್ಶಿಸಿ ಕೀರ್ತಿಯನ್ನು ಗಳಿಸಿದ್ದಾರೆ ಎಂದು ಶಾಲೆಯ ಪ್ರಕಟಣೆಯಲ್ಲಿ ತಿಳಿಸಲಾಗಿದೆ.

ಸ್ಪರ್ಧೆಯಲ್ಲಿ ಭಾಗವಹಿಸಿ ಬಹುಮಾನ ಗಳಿಸಿದ ಎಲ್ಲ ವಿದ್ಯಾರ್ಥಿಗಳನ್ನು ಶಾಲೆಯ *ಕಾರ್ಯದರ್ಶಿಗಳಾದ ಶ್ರೀ ರಮೇಶ್ ಕುಮಾರ್ ಜೆ. ಜೈನ್, ಅಧ್ಯಕ್ಷರಾದ ಶ್ರೀ ರಮೇಶ್ ಕುಮಾರ್ ಹೆಚ್. ಜೈನ್, ಹಾಗೂ ಆಡಳಿತ ಮಂಡಳಿಯ ಇತರ ಸದಸ್ಯರುಗಳು ಮತ್ತು ಶಾಲೆಯ ಪ್ರಾಂಶುಪಾಲರಾದ. ಅನಿತಾ ರಾಜ್ಪೂತ್, ಹಾಗೂ ಎಲ್ಲಾ ಶಿಕ್ಷಕರು ಅಭಿನಂದಿಸಿದ್ದಾರೆ.



* ವೃಂದ ಕ್ಲಾಸಿಕಲ್ ನೃತ್ಯದಲ್ಲಿ ದ್ವಿತೀಯ ಬಹುಮಾನ,
* ಕುಂಬ ಚಿತ್ರಕಲೆಯಲ್ಲಿ ಪ್ರಥಮ ಬಹುಮಾನ,
* ಕ್ಲೇ ಮಾಡಲಿಂಗ್ನಲ್ಲಿ ಪ್ರಥಮ ಬಹುಮಾನ,
* ಛಾಯಾಗ್ರಹಣ ಸ್ಪರ್ಧೆಯಲ್ಲಿ ತೃತೀಯ ಬಹುಮಾನ,
* ಕಿರುಚಿತ್ರ ತಯಾರಿಕೆಯಲ್ಲಿ ದ್ವಿತೀಯ ಬಹುಮಾನ,
* ವೆಸ್ಟರ್ನ್ ಸಾಂಗ್ (ಏಕವ್ಯಕ್ತಿ) ವಿಭಾಗದಲ್ಲಿ ಪ್ರಥಮ ಬಹುಮಾನ,
* ಗುಂಪು ಗಾಯನದಲ್ಲಿ ದ್ವಿತೀಯ ಬಹುಮಾನ,
* ಬಿಸಿನೆಸ್ ಪ್ರೆಸೆಂಟೇಶನ್ ವಿಭಾಗದಲ್ಲಿ ತೃತೀಯ ಬಹುಮಾನ ಗಳಿಸಿದ್ದಾರೆ.

ಈ ಸಾಧನೆ ಶಾಲೆಗೆ ಕೀರ್ತಿಯ ತಂದಿದೆ.



ಶಿವಮೊಗ್ಗ ದಕ್ಷಿಣ ಬ್ಲಾಕ್ ಹಿಂದುಳಿದ ವರ್ಗಗಳ ವಿಭಾಗದ ಅಧ್ಯಕ್ಷರನ್ನಾಗಿ ಮೋಹನ್ ಬಾಬು.. ಪಿ ಇವರನ್ನು ನೇಮಿಸಲಾಗಿದೆ ಶಾಲಾ ಶಿಕ್ಷಣ ಹಾಗೂ ಸಾಕ್ಷರತಾ ಇಲಾಖೆ ಸಚಿವರು ಹಾಗೂ ಕೆಪಿಸಿಸಿ ಒಬಿಸಿ ವಿಭಾಗದ ರಾಜ್ಯಾಧ್ಯಕ್ಷರಾದ ಶ್ರೀ ಮಧು ಬಂಗಾರಪ್ಪನವರ ಆದೇಶದ ಮೇರೆಗೆ ಶಿವಮೊಗ್ಗ ಜಿಲ್ಲಾ ಕಾಂಗ್ರೆಸ್ ಹಿಂದುಳಿದ ವರ್ಗಗಳ ವಿಭಾಗದ ಅಧ್ಯಕ್ಷ ಎಂ ರಮೇಶ್ ಶಂಕರಘಟ್ಟ ನವರು ಆದೇಶ ಹೊರತುಪಡಿಸಿದ್ದಾರೆ

# ವಿಶ್ವ ಮಣ್ಣು ದಿನಾಚರಣೆ–2025




**ಶಿವಮೊಗ್ಗ** : ಐ.ಸಿ.ಎ.ಆರ್.–ಕೃಷಿ ವಿಜ್ಞಾನ ಕೇಂದ್ರ ಶಿವಮೊಗ್ಗ ಹಾಗೂ ಕೃಷಿ ಇಲಾಖೆ ಸಹಯೋಗದೊಂದಿಗೆ ದಿನಾಂಕ 5.12.2025 ರಂದು ವಿಶ್ವ ಮಣ್ಣು ದಿನಾಚರಣೆಯನ್ನು ಈ ವರ್ಷದ ಧ್ಯೇಯವಾಕ್ಯವಾದ "ಆರೋಗ್ಯಕರ ನಗರಗಳಿಗೆ ಆರೋಗ್ಯಕರ ಮಣ್ಣು" ಎಂಬ ಶೀರ್ಷಿಕೆಯಲ್ಲಿ ಈ ದಿನದ ಮಣ್ಣು ದಿನಾಚರಣೆಯನ್ನು ಆಚರಿಸಲಾಯಿತು. 2013ರಲ್ಲಿ ಆಹಾರ ಮತ್ತು ಕೃಷಿ ಸಂಸ್ಥೆ ವಿಶ್ವಸಂಸ್ಥೆಯ ಸಾಮಾನ್ಯ ಸಭೆಯ 68ನೇ ಸಮ್ಮೇಳನದಲ್ಲಿ ವಿಶ್ವ ಮಟ್ಟದಲ್ಲಿ ಮಣ್ಣಿನ ದಿನವನ್ನು ಆಚರಿಸಬೇಕೆನ್ನುವ ಪ್ರಸ್ತಾವವನ್ನು ಸಲ್ಲಿಸಿತು. ಇದರ ಫಲವಾಗಿ 2014 ಡಿಸೆಂಬರ್ 5 ರಂದು ಮೊದಲ ಬಾರಿಗೆ ಮಣ್ಣು ದಿನವನ್ನು ಅಂತರಾಷ್ಟೀಯ ಮಟ್ಟದಲ್ಲಿ ಆಚರಿಸಲಾಯಿತು. ಈ ವಿಶ್ವ ಮಣ್ಣು ದಿನವನ್ನು ಆಚರಿಸುವ ಉದ್ದೇಶವು ಮಣ್ಣಿನ ಸಂರಕ್ಷಣೆಯ ಬಗ್ಗೆ ಜಾಗೃತಿ ಮೂಡಿಸುವುದಾಗಿದೆ.

ಇಂದು ರಾಸಾಯನಿಕ ಗೊಬ್ಬರಗಳ ಅತಿಯಾದ ಬಳಕೆ, ಪ್ಲಾಸ್ಟಿಕ್ ಬಳಕೆ ಸೇರಿದಂತೆ ಇತ್ಯಾದಿ ಮಾಲಿನ್ಯದ ಕಾರಣದಿಂದಾಗಿ ಮಣ್ಣಿನ ಫಲವತ್ತತೆಯು ಕಡಿಮೆಯಾಗುತ್ತಿದೆ, ಅಷ್ಟು ಮಾತ್ರವಲ್ಲದೆ ಕಾಡುಗಳ ನಾಶದಿಂದಾಗಿ ಪ್ರವಾಹ ಮತ್ತು ಭಾರಿ ಮಳೆಯ ಸಂದರ್ಭದಲ್ಲಿ ಮಣ್ಣಿನ ಸವೆತ ಹೆಚ್ಚಾಗುತ್ತಿದೆ. ಹೀಗಾಗಿ ಸುಸ್ಥಿರ ಭವಿಷ್ಯಕ್ಕಾಗಿ ಮಣ್ಣಿನ ಸಂರಕ್ಷಣೆ ಎಷ್ಟು ಮುಖ್ಯ ಎಂಬ ಬಗ್ಗೆ ಜಾಗೃತಿ ಮೂಡಿಸುವುದು ಈ ಆಚರಣೆಯ ಮುಖ್ಯ ಉದ್ದೇಶವಾಗಿದೆ. ಕಾರ್ಯಕ್ರಮದ ಉದ್ಘಾಟನೆಯನ್ನು ಡಾ. ಕೆ. ಆರ್. ಲೋಕೇಶ್, ಉಪ ಕೃಷಿ ನಿರ್ದೇಶಕರು, ಕೃಷಿ ಇಲಾಖೆ, ಶಿವಮೊಗ್ಗ ಇವರು ಗಿಡಗಳಿಗೆ ಜೈವಿಕ ಗೊಬ್ಬರಗಳನ್ನು ಹಾಕುವುದರ ಮೂಲಕ ಉದ್ಘಾಟನೆಯನ್ನು ನೆರವೇರಿಸಿಕೊಟ್ಟರು. ತಮ್ಮ ಉದ್ಘಾಟನಾ ನುಡಿಗಳಲ್ಲಿ ಇವರು ಇಂದಿನ ದಿನ ಮಣ್ಣು ತುಂಬಾ ಮಾಲಿನ್ಯಗೊಳ್ಳುತ್ತಿದ್ದು, ಇದರ ಸಂರಕ್ಷಣೆಗೆ ನಾವು ಸಾವಯವ ಗೊಬ್ಬರ ಮತ್ತು ಜೈವಿಕ ಗೊಬ್ಬರಗಳನ್ನು ಬಳಕೆ ಮಾಡುವುದರಿಂದ ಮಣ್ಣಿನ ಫಲವತ್ತತೆಯನ್ನು ಕಾಪಾಡಿಕೊಳ್ಳಬಹುದೆಂದು ತಿಳಿಸಿದರು.

ಈ ಕಾರ್ಯಕ್ರಮದ ಅಧ್ಯಕ್ಷತೆಯನ್ನು ಡಾ. ಡಿ. ತಿಪ್ಪೇಶ್, ಡೀನ್ (ಕೃಷಿ), ಕೃಷಿ ಮಹಾವಿದ್ಯಾಲಯ, ಶಿವಮೊಗ್ಗ ಇವರು ವಹಿಸಿಕೊಂಡಿದ್ದರು, ತಮ್ಮ ಅಧ್ಯಕ್ಷೀಯ ನುಡಿಗಳಲ್ಲಿ ಪರಿಸರ ವ್ಯವಸ್ಥೆ ಮತ್ತು ಜೀವರಾಶಿಗಳ ಯೋಗಕ್ಷೇಮಕ್ಕೆ ಮಣ್ಣು ಪ್ರಮುಖ ಅಡಿಪಾಯವಾಗಿದೆ. ಹೀಗೆ ಮಣ್ಣಿನ ಅಮೂಲ್ಯವಾದ ಪ್ರಾಮುಖ್ಯತೆಯನ್ನು ಗಮನದಲ್ಲಿಟ್ಟುಕೊಂಡು ಮಣ್ಣಿನ ಮಾಲಿನ್ಯವನ್ನು ತಡೆಗಟ್ಟಲು, ಮಣ್ಣು ಹಾಗೂ ಮಣ್ಣಿನ ಆರೋಗ್ಯವನ್ನು ಸಂರಕ್ಷಿಸಲು ಡಿಸೆಂಬರ್ 5 ರಂದು ಮಣ್ಣು ದಿನವನ್ನು ಆಚರಿಸಲಾಗುತ್ತದೆ ಎಂದು ವಿವರಿಸಿದರು. ಈ ಕಾರ್ಯಕ್ರಮದಲ್ಲಿ ಮಣ್ಣು ವಿಜ್ಞಾನಿಯಾದ ಡಾ॥ ಜಿ. ಎನ್. ತಿಪ್ಪೇಶಪ್ಪ, ಪ್ರಾಧ್ಯಾಪಕರು, ವಲಯ ಕೃಷಿ ಮತ್ತು ತೋಟಗಾರಿಕಾ ಸಂಶೋಧನಾ ಕೇಂದ್ರ, ಶಿವಮೊಗ್ಗ ಇವರು ಮಣ್ಣಿನ ಸಂರಕ್ಷಣೆಯ ಕುರಿತು ರೈತರಿಗೆ ವಿವರವಾಗಿ ತಿಳಿಸಿದರು. ಇವರು ಮಣ್ಣಿನ ಆರೋಗ್ಯದ ಬಗ್ಗೆ ವಿವರಿಸುತ್ತಾ ಆಹಾರಭದ್ರತೆ ಮತ್ತು ನಮ್ಮ ಸುಸ್ಥಿರ ಭವಿಷ್ಯವನ್ನು ಕಾಪಾಡಿಕೊಳ್ಳಲು ಮಣ್ಣು ಮತ್ತು ಮಣ್ಣಿನ ಆರೋಗ್ಯ ಸಂರಕ್ಷಣೆ ಮಾಡುವುದು ಅತ್ಯಂತ ಅಗತ್ಯವಾಗಿದೆ ಎಂದು ರೈತರಿಗೆ ಮನವರಿಕೆ ಮಾಡಿಕೊಟ್ಟರು.

ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಡಾ. ಬಿ ಸಿ ಹನುಮಂತ ಸ್ವಾಮಿ, ಸಹ ವಿಸ್ತರಣಾ ನಿರ್ದೇಶಕರು, ಕೆ.ಶಿ.ನಾ.ಕೃ. ತೋ.ವಿ.ವಿ., ಶಿವಮೊಗ್ಗ, ಡಾ. ಸುಧಾಕರ್, ಮುಖ್ಯಸ್ಥರು, ಆಕಾಶವಾಣಿ ಭದ್ರಾವತಿ, ಶ್ರೀ ಕೆ. ರಾಘವೇಂದ್ರರವರು, ಜಿಲ್ಲಾ ರೈತ ಸಂಘದ ಅಧ್ಯಕ್ಷರು ಹಾಗೂ ಪ್ರಗತಿಪರ ಸಾವಯವ ಕೃಷಿಕರು ಈ ಕಾರ್ಯಕ್ರಮದಲ್ಲಿ ಮುಖ್ಯ ಅತಿಥಿಗಳಾಗಿ ಭಾಗವಹಿಸಿ ತಮ್ಮ ಕೃಷಿಯಲ್ಲಿನ ಅನುಭವವನ್ನು ರೈತರಲ್ಲಿ ಹಂಚಿಕೊಂಡರು.

ಈ ಮಣ್ಣು ದಿನಾಚರಣೆ ಅಂಗವಾಗಿ ಆಯೋಜಿಸಲಾದ ತಾಂತ್ರಿಕ ಸಮಾವೇಶದಲ್ಲಿ "ಹಸಿರೆಲೆ ಗೊಬ್ಬರಗಳ ಬಳಕೆಯಿಂದ ಮಣ್ಣಿನ ಆರೋಗ್ಯ ಸುಧಾರಣೆ", "ತೋಟಗಾರಿಕೆ ಬೆಳೆಗಳಲ್ಲಿ ಮಣ್ಣಿನ ಮಹತ್ವ" ಮತ್ತು "ಮಣ್ಣು ಪರೀಕ್ಷೆಯ ಪ್ರಾಮುಖ್ಯತೆ" ಕುರಿತು ಸಂಪನ್ಮೂಲ ವ್ಯಕ್ತಿಗಳು ಮಾಹಿತಿ ನೀಡಿದರು.

# ಬೇಕರಿ ಉತ್ಪನ್ನಗಳ ಕುರಿತು ಕೌಶಲ್ಯಾಭಿವೃದ್ಧಿ ತರಬೇತಿ

**ಶಿವಮೊಗ್ಗ:** ಕೆಳದಿ ಶಿವಪ್ಪ ನಾಯಕ ಕೃಷಿ ಮತ್ತು ತೋಟಗಾರಿಕೆ ವಿಶ್ವವಿದ್ಯಾಲಯವು ದಿ:15/12/2025 ರಿಂದ ದಿ:13/01/2026 ರವರೆಗೆ 1 ತಿಂಗಳು ಶಿವಮೊಗ್ಗ ಕೃಷಿ ಮಹಾವಿದ್ಯಾಲಯ ಆವರಣದ ಬೇಕರಿ ಘಟಕದಲ್ಲಿ ವಿವಿಧ ಬೇಕರಿ ಉತ್ಪನ್ನಗಳಾದ ಬೆಣ್ಣೆ ಬಿಸ್ಕತ್ತು, ಕೋಕೋನಟ್ ಕುಕಿಸ್, ಕೋಕೊನಟ್ ಬಿಸ್ಕತ್ತು, ಮಸಾಲ ಬಿಸ್ಕತ್ತು, ಮೆಲ್ಟಿಂಗ್ ಮೊಮೆಂಟ್ ಬಿಸ್ಕತ್ತು, ಪೀನಟ್ ಕುಕಿಸ್, ವೆನಿಲ್ಲಾ ಬಟನ್, ಬನಾನಾ ಕೇಕ್, ಫ್ರುಟ್ ಕೇಕ್, ಸ್ಪಾಂಜ್ಕೇಕ್, ಆರೆಂಜ್ ಇತರೆ ಬೇಕರಿ ಉತ್ಪನ್ನಗಳ ತಯಾರಿಕೆಯ ಬಗ್ಗೆ ಕೌಶಲ್ಯಾಭಿವೃದ್ಧಿ ತರಬೇತಿಯನ್ನು ಆಯೋಜಿಸಿದೆ.

ಆಕಸ್ತರು ತರಬೇತಿ ಶುಲ್ಕ ರೂ. 4500/–ಗಳನ್ನು ಪಾವತಿಸಿ, ಡಿ.13 ರೊಳಗಾಗಿ ದೂರವಾಣಿ ಮೂಲಕ ಅಥವಾ ಖುದ್ದಾಗಿ ಕೃಷಿ ಮಹಾವಿದ್ಯಾಲಯವನ್ನು ಸಂಪರ್ಕಿಸಿ ಹೆಸರನ್ನು ನೋಂದಾಯಿಸಿಕೊಳ್ಳುವಂತೆ ಕೃಷಿ ಮತ್ತು ತೋಟಗಾರಿಕೆ ಮಹಾವಿದ್ಯಾಲಯದ ಪ್ರೊಫೆಸರ್ ಪ್ರಕಟಣೆಯಲ್ಲಿ ತಿಳಿಸಿರುತ್ತಾರೆ.

# ಅರ್ಜಿ ಆಹ್ವಾನ

**ಶಿವಮೊಗ್ಗ :** 2025–26 ನೇ ಸಾಲಿಗೆ ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿ ವತಿಯಿಂದ ಕರ್ನಾಟಕ ಸಂಗೀತ, ಹಿಂದೂಸ್ತಾನಿ ಸಂಗೀತ ನೃತ್ಯ, ಸುಗಮ ಸಂಗೀತ ಕಥಾ ಕೀರ್ತನ ಮತ್ತು ಗಮಕ ಕಲಾಕ್ಷೇತ್ರದಲ್ಲಿ ಅಭ್ಯಾಸ ಮಾಡುತ್ತಿರುವ ಅಭ್ಯರ್ಥಿಗಳಿಂದ ಶಿಷ್ಯವೇತನಕ್ಕೆ ಅರ್ಜಿ ಆಹ್ವಾನಿಸಲಾಗಿದೆ. ಅರ್ಜಿ ಸಲ್ಲಿಸಲು 16 ರಿಂದ 24 ವರ್ಷದೊಳಗಿನ ಅಭ್ಯರ್ಥಿಗಳು ಅರ್ಹರಾಗಿದ್ದು, ಅರ್ಜಿಯನ್ನು ಅಕಾಡೆಮಿ ಫೇಸ್ಬುಕ್ facebook.com/karnatakasangeetanrutyaacdemy ಮೂಲಕ ಮಾಹಿತಿ ಪಡೆದು Sangeetanrityaacademy.karnataka.gov.in ವೆಬ್ಸೈಟ್‌ನಲ್ಲಿ ಡೌನ್‌ಲೋಡ್ ಮಾಡಿಕೊಳ್ಳಬಹುದಾಗಿದೆ. ಅಥವಾ ಆಯಾ ಜಿಲ್ಲೆಯ ಕನ್ನಡ ಮತ್ತು ಸಂಸ್ಕೃತಿ ಇಲಾಖೆ ಸಹಾಯಕ ನಿರ್ದೇಶಕರ ಕಚೇರಿಯಲ್ಲಿ ಪಡೆಯಬಹುದು. ಸಂದರ್ಶನದ ಬದಲಿಗೆ ಅಭ್ಯರ್ಥಿಗಳು ಅರ್ಜಿಯಲ್ಲಿ ನೀಡಿರುವ ಪಠ್ಯಕ್ರಮವನ್ನು ಮೊಬೈಲ್/ವಿಡಿಯೋ ಚಿತ್ರೀಕರಿಸಿ ಪೆನ್‌ಡ್ರೈವ್‌ನಲ್ಲಿ ಅಳವಡಿಸಿ ರಿಜಿಸ್ಟ್ರಾರ್ ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿ, ಕನ್ನಡ ಭವನ, 2ನೇ ಮಹಡಿ, ಜೆಸಿ ರಸ್ತೆ, ಬೆಂಗಳೂರು–560002 ಕಾರ್ಯಾಲಯಕ್ಕೆ ಅಂಚೆಯೊಂದಿಗೆ ಅಥವಾ ಖುದ್ದಾಗಿ ತಲುಪಿಸಬಹುದು. ಆಯಾ ಕಲಾ ಪ್ರಕಾರಕ್ಕೆ ಅನುಗುಣವಾಗಿ ತೀರ್ಪುಗಾರರು ಅಭ್ಯರ್ಥಿಗಳು ಚಿತ್ರಿಸಿ ಕಳಿಸಿಕೊಟ್ಟಿರುವ ಪೆನ್‌ಡ್ರೈವ್ ಪರಿಶೀಲಿಸಿ ಶಿಷ್ಯವೇತನಕ್ಕೆ ಅಭ್ಯರ್ಥಿಯನ್ನು ಆಯ್ಕೆ ಮಾಡಲಿದ್ದಾರೆ.ಅರ್ಜಿ ಸಲ್ಲಿಸಲು ಡಿ.20 ಕೊನೆಯ ದಿನಾಂಕವಾಗಿದ್ದು, ಹೆಚ್ಚಿನ ಮಾಹಿತಿಗಾಗಿ ದೂ.ಸಂ: 080–22215072 ಗೆ ಸಂಪರ್ಕಿಸಬಹುದೆಂದು ಕರ್ನಾಟಕ ಸಂಗೀತ ನೃತ್ಯ ಅಕಾಡೆಮಿಯ ರಿಜಿಸ್ಟ್ರಾರ್ ಎನ್. ನರೇಂದ್ರಬಾಬು ಪ್ರಕಟಣೆಯಲ್ಲಿ ತಿಳಿಸಿದ್ದಾರೆ.

## ಮಾನ್ಯ ಭೂದಾಖಲೆಗಳ ಉಪನಿರ್ದೇಶಕರ ನ್ಯಾಯಾಲಯ ದಾವಣಗೆರೆ

**ಭೂ.ಉ.ನಿ.ಆರ್: 529/2024–25**

**ಅಪೀಲುದಾರರು:** 1. ಕರಿಯಪ್ಪ ಬಿನ್ ಲೇಟ್ ಜಂಪಣ್ಣ (ವಯಸ್ಕರು) ವಾಸ ನೇರ್ಲಿಗೆ,ದಾವಣಗೆರೆ ತಾಲ್ಲೂಕು

**ವಿರುದ್ದ**

**ಎದುರುದಾರರು:** ಮಾನ್ಯ ಭೂದಾಖಲೆ ಸಹಾಯಕ ನಿರ್ದೇಶಕರು ದಾವಣಗೆರೆ ತಾಲ್ಲೂಕು ಮತ್ತು ಇತರರು
ಎದುರುದಾರರು ನಂ:3(ಎ) ತಿಪ್ಪಮ್ಮ ಕೋಂ ಲೇಟ್ ರಂಗಪ್ಪ ವಯಸ್ಕರು
ಎದುರುದಾರರು ನಂ:3(ಬಿ) ರಂಗಪ್ಪ ಬಿನ್ ಲೇಟ್ ರಂಗಪ್ಪ ವಯಸ್ಕರು
ಎದುರುದಾರರು ನಂ:3(ಸಿ) ನಾಗಪ್ಪ ಬಿನ್ ಲೇಟ್ ರಂಗಪ್ಪ ವಯಸ್ಕರು
ಎದುರುದಾರರು ನಂ:3(ಡಿ) ರತ್ನಮ್ಮ ಬಿನ್ ಲೇಟ್ ರಂಗಪ್ಪ ವಯಸ್ಕರು
ಎದುರುದಾರರು ನಂ:3(ಇ) ರಾಜಪ್ಪ ಬಿನ್ ಲೇಟ್ ರಂಗಪ್ಪ ವಯಸ್ಕರು
ಎದುರುದಾರರು ನಂ:3(ಎಫ್) ಪರಮೇಶ್ವರಪ್ಪ ಬಿನ್ ಲೇಟ್ ರಂಗಪ್ಪ ವಯಸ್ಕರು
ಎದುರುದಾರರು ನಂ:3(ಜಿ) ಮಮತಾ ಬಿನ್ ಲೇಟ್ ರಂಗಪ್ಪ ವಯಸ್ಕರು

**ಸಿ.ಪಿ.ಸಿ ಆದೇಶ 5 ನಿಯಮ 20 ರ ಅಡಿಯಲ್ಲಿ ನೀಡಲಾದ ಪ್ರಕಟಣಾ ನೋಟೀಸ್**

ಮೇಲ್ಕಂಡ ಅಪೀಲುದಾರರು ಘನ ನ್ಯಾಯಾಲಯದಲ್ಲಿ ಪೋಡುಗಳನ್ನು ರದ್ದುಪಡಿಸಿ ಹೊಸ ನೋಡುಗಳನ್ನು ಮಾಡಿಕೊಡುವಂತೆ ಸದರಿ ಮೇಲ್ಕಂಡ ಪ್ರಕರಣವನ್ನು ಸಲ್ಲಿಸಿರುತ್ತಾರೆ. ಸದರಿ ಪ್ರಕರಣದಲ್ಲಿ 3(ಎ), 3(ಬಿ), 3(ಸಿ), 3(ಡಿ), 3(ಇ), 3(ಎಫ್) ಮತ್ತು 3(ಜಿ) ನೇ ಎದುರುದಾರರು ನಿಮ್ಮ ತಕರಾರು ಏನಾದರೂ ಇದ್ದಲ್ಲಿ ಕಾರಣ ಹಾಜರಾತಿಗಾಗಿ ದಿನಾಂಕ:23–12–2025 ರಂದು ಮಧ್ಯಾಹ್ನ 3:00 ಘಂಟೆಗೆ ನೀವು ಖುದ್ದಾಗಿ ಅಥವಾ ವಕೀಲರ ಮುಖಾಂತರವಾಗಲೀ ಪ್ರಕರಣದಲ್ಲಿ ಹಾಜರಿದ್ದು ತಕರಾರು ಇದ್ದಲ್ಲಿ ಸಲ್ಲಿಸಬಹುದು ತಪ್ಪಿದ್ದಲ್ಲಿ ಸದರಿ ಪ್ರಕರಣವನ್ನು ಏಕಪಕ್ಷೀಯ ತೀರ್ಮಾನ ತೆಗೆದುಕೊಳ್ಳಲಾಗುವುದು.

**ಷೆಡ್ಯೂಲ್**

ದಾವಣಗೆರೆ ಜಿಲ್ಲೆ ದಾವಣಗೆರೆ ತಾಲ್ಲೂಕು ಆನಗೋಡು ಹೋಬಳಿ ಗಂಗನಕಟ್ಟೆ ಗ್ರಾಮದ ರಿ.ಸ.ನಂ 30/1, 2, 3, 4, 5, 6, 7, 8, 9, 10, 11, 12, 13 ಮತ್ತು 14ನೇ ಹಿಸ್ಸೆಯ ಪೋಡುಗಳನ್ನು ರದ್ದುಪಡಿಸುವ ಕುರಿತಂತೆ

ನ್ಯಾಯಾಲಯದ ಮೊಹರು ಹಾಗೂ ಸಹಿಯೊಂದಿಗೆ ದಿನಾಂಕ: 04–12–2025 ರಂದು ಕೊಡಲ್ಪಟ್ಟಿದೆ.

ನ್ಯಾಯಾಲಯದ ಆದೇಶದ ಮೇರೆಗೆ

**ಸಹಿ/–**
**ಶಿರಸ್ತೇದಾರರು/ಸೂಪರಿಡೆಂಟ್**
**ಡಿ.ಡಿ.ಎಲ್ ಆರ್ ನ್ಯಾಯಾಲಯ**

# ಪಾತ್ರಧಾರಿ' ಸಿನಿಮಾ ಶೂಟಿಂಗ್ ವೇಳೆಯೇ ಡೈರೆಕ್ಟರ್ ಸಾವು!



**ಶಿವಮೊಗ್ಗ:** ಸ್ಯಾಂಡಲ್‌ವುಡ್ ನಿರ್ದೇಶಕ ಸಂಗೀತ್ ಸಾಗರ್ ಚಿತ್ರ 'ಪಾತ್ರಧಾರಿ' ಶೂಟಿಂಗ್ ವೇಳೆ ಕೊಪ್ಪದಲ್ಲಿ ಹೃದಯಘಾತದಿಂದ ಮೃತಪಟ್ಟಿದ್ದಾರೆ.

ಚಿತ್ರೀಕರಣದ ವೇಳೆ ಸ್ಯಾಂಡಲ್ ವುಡ್ ನಿರ್ದೇಶಕನಿಗೆ ಹೃದಯಘಾತ ಸಂಭವಿಸಿದೆ. ಸಂಗೀತ್ ಸಾಗರ್ ಎಂಬ ನಿರ್ದೇಶಕ ಹೃದಯಘಾತದಿಂದ ಸಾವನ್ನಪ್ಪಿದ್ದಾರೆ. ಪಾತ್ರಧಾರಿ ಎಂಬ ಸಿನಿಮಾ ಮಾಡುತ್ತಿದ್ದ ಸಂಗೀತ್ ಸಾಗರ್ ಶೂಟಿಂಗ್ ಮಾಡುತ್ತಿದ್ದ ವೇಳೆಯೇ ಹೃದಯಾಘಾತ ಸಂಭವಿಸಿದೆ.

ಕೊಪ್ಪ ತಾಲೂಕಿನಲ್ಲಿ ಚಿತ್ರದ ಚಿತ್ರೀಕರಣ ನಡೆಯುತ್ತಿತ್ತು. ಆಕ್ಷನ್ ಹೇಳುವ ವೇಳೆಯೇ ಸಂಗೀತ್ ಸಾಗರ್ ಗೆ ಹೃದಯಘಾತ ಸಂಭವಿಸಿದ್ದು, ತಕ್ಷಣ ಕೊಪ್ಪ ಆಸ್ಪತ್ರೆಗೆ ದಾಖಲಿಸಲಾಗಿದೆ. ಕೊಪ್ಪ ಆಸ್ಪತ್ರೆಯಿಂದ ಹೆಚ್ಚಿನ ಚಿಕಿತ್ಸೆಗೆ ಶಿವಮೊಗ್ಗಕ್ಕೆ ಕರೆತರಲಾಗಿತ್ತು. ಚಿಕಿತ್ಸೆ ಫಲಿಸದೆ ನಿರ್ದೇಶಕ ಸಂಗೀತ್ ಸಾಗರ್ ನಿಧನರಾಗಿದ್ದಾರೆ.

ಹಾಸ್ಯ ಕಲಾವಿದ ಸಂಜು ಬಸಯ್ಯ ಅವರಿಗೆ ಆಕ್ಷನ್ ಹೇಳಿದ್ದರು. ಆ ವೇಳೆಗಾಗಲೇ ಸುಸ್ತಾಗಿ ಸಂಗೀತ್ ಸಾಗರ್ ಕುಸಿದಿದ್ದರು. ಎಂಟಕ್ಕೂ ಹೆಚ್ಚು ಕನ್ನಡ ಚಿತ್ರಗಳನ್ನು ಇವರು ನಿರ್ದೇಶಿಸಿದ್ದರು. ಇವರು ಸಕಲೇಶಪುರದ ದೊಡ್ಡನಾಗರ ಮೂಲದವರು. 20 ದಿನಗಳಿಂದ ಹರಿಹರಪುರ, ತೀರ್ಥಹಳ್ಳಿ ತಾಲೂಕು ಸುತ್ತಮುತ್ತ ಸಿನಿಮಾ ಚಿತ್ರೀಕರಣ ನಡೆಯುತ್ತಿತ್ತು. ನಾಳೆ ಕುಂಬಳಕಾಯಿ ಶಾಸ್ತ್ರ ಮಾಡಿ ಕೊನೆಯ ಚಿತ್ರೀಕರಣ ಮಾಡಬೇಕಿತ್ತು.

# ಯಾವುದೇ ಕಾರಣಕ್ಕೂ ಅಂತಹವರನ್ನು ಬಿಡಬಾರದು

## 2 ಸಿನಿಮಾಗಳ ಹೀನಾಯ ಸೋಲು ಬೆನ್ನಲ್ಲೇ ರಶ್ಮಿಕಾ ಮಂದಣ್ಣ ಆಕ್ರೋಶ

**ಬೆಂಗಳೂರು:** ಕೃತಕ ಬುದ್ಧಿಮತ್ತೆ (AI) ಹೆಚ್ಚುತ್ತಿರುವ ಬಳಕೆಯ ಬಗ್ಗೆ ಬಾಲಿವುಡ್ ಮಂದಿ ತೀವ್ರ ಕಳವಳ ವ್ಯಕ್ತಪಡಿಸುತ್ತಿದ್ದಾರೆ. ಕಾರಣವೆಂದರೆ, ಸೆಲೆಬ್ರಿಟಿಗಳ ನಕಲಿ ಮತ್ತು ಅಶ್ಲೀಲ ಫೋಟೋಗಳು ಮತ್ತು ವೀಡಿಯೊಗಳನ್ನು ರಚಿಸಲು AI ಅನ್ನು ದುರುಪಯೋಗಪಡಿಸಿಕೊಳ್ಳಲಾಗುತ್ತಿದೆ. ಇದು ಸಾಮಾಜಿಕ ಮಾಧ್ಯಮದಲ್ಲಿ ಬೇಗನೆ ವೈರಲ್ ಆಗುತ್ತದೆ. ನಟಿ ರಶ್ಮಿಕಾ ಮಂದಣ್ಣ ಈಗ ಈ ಬಗ್ಗೆ ತಮ್ಮ ಅಸಮಾಧಾನ ವ್ಯಕ್ತಪಡಿಸಿದ್ದಾರೆ.

ಜಾಗೃತಿ ಮತ್ತು ನೈತಿಕ ಬಳಕೆಯ ಅಗತ್ಯತೆಯ ಬಗ್ಗೆ ರಶ್ಮಿಕಾ ಮಾತನಾಡಿದ್ದಾರೆ. ಇದನ್ನು ಪರಿಹರಿಸಬೇಕಾದ ನೈತಿಕ ಅವನತಿ ಎಂದು ಅವರು ವಿವರಿಸಿದ್ದಾರೆ. ಇಂಟರ್ನೆಟ್ ಕೃತ್ರಿಮ ದೃಶ್ಯಗಳನ್ನು ಸುಲಭವಾಗಿ ನೈಜವಾಗಿ ಪ್ರಸ್ತುತಪಡಿಸಬಹುದಾದ ಸ್ಥಳವಾಗಿದೆ ಎಂದು ಅವರು ಹೇಳಿದರು.

೦ಐ ಬಳಸುವ ಮಹಿಳೆಯರ ಅಶ್ಲೀಲ ಚಿತ್ರಗಳ ದುರುಪಯೋಗ ಮತ್ತು ದುರುಪಯೋಗದ ಬಗ್ಗೆ ರಶ್ಮಿಕಾ ಅಸಮಾಧಾನ ವ್ಯಕ್ತಪಡಿಸಿದರು. ಸತ್ಯವನ್ನು ಕೃತ್ರಿಮಗೊಳಿಸಿದಾಗ ನಮ್ಮ ಆತ್ಮಸಾಕ್ಷಿಯು ನಮ್ಮ ದೊಡ್ಡ ಶಕ್ತಿಯಾಗುತ್ತದೆ ಎಂದು ನಟಿ ಹೇಳಿದರು.

೦ಐ ಪ್ರಗತಿಯತ್ತ ಒಂದು ಹೆಜ್ಜೆಯಾಗಿದೆ. ಆದರೆ ಅಶ್ಲೀಲತೆಯನ್ನು ಹರಡಲು ಮತ್ತು ಮಹಿಳೆಯರನ್ನು ಗುರಿಯಾಗಿಸಲು ಅದರ ದುರುಪಯೋಗವು ಕೆಲವು ಜನರಲ್ಲಿ ಆಳವಾದ ನೈತಿಕ ಅವನತಿಯನ್ನು ಸೂಚಿಸುತ್ತದೆ. ಇಂಟರ್ನೆಟ್ ಇನ್ನು ಮುಂದೆ ಸತ್ಯದ ಕನ್ನಡಿಯಲ್ಲ ಎಂಬುದನ್ನು ನೆನಪಿಡಿ. ಅದು ಯಾವುದನ್ನಾದರೂ ಸೃಷ್ಟಿಸಬಹುದಾದ ಕ್ಯಾನ್ವಾಸ್. ದುರುಪಯೋಗವನ್ನು ಮೀರಿ ಹೆಚ್ಚು ಗೌರವಾನ್ವಿತ ಮತ್ತು ಪ್ರಗತಿಪರ ಸಮಾಜವನ್ನು ನಿರ್ಮಿಸಲು ೦ಐ ಅನ್ನು ಬಳಸೋಣ. ನಿರ್ಲಕ್ಷ್ಯಕ್ಕಿಂತ ಜವಾಬ್ದಾರಿಯನ್ನು ಆರಿಸಿಕೊಳ್ಳಿ. ಜನರು ಮನುಷ್ಯರಂತೆ ವರ್ತಿಸಲು ಸಾಧ್ಯವಾಗದಿದ್ದರೆ, ಅವರು ಕಠಿಣ ಮತ್ತು ಕಠಿಣ ಶಿಕ್ಷೆಯನ್ನು ಎದುರಿಸಬೇಕಾಗುತ್ತದೆ.



ಕೆಲಸದ ಮುಂಭಾಗದಲ್ಲಿ, ರಶ್ಮಿಕಾ ಮಂದಣ್ಣ ಕೊನೆಯ ಬಾರಿಗೆ "ದಿ ಗರ್ಲ್‌ಫ್ರೆಂಡ್" ನಲ್ಲಿ ಕಾಣಿಸಿಕೊಂಡರು. ಪ್ರಸ್ತುತ, ಅವರು ಹೋಮಿ ಅಜಾನಿಯಾ ನಿರ್ದೇಶನದ "ಕಾಕ್‌ಟೇಲ್ 2" ಚಿತ್ರೀಕರಣದಲ್ಲಿ ನಿರತರಾಗಿದ್ದಾರೆ. ಈ ಚಿತ್ರದಲ್ಲಿ ಶಾಹಿದ್ ಕಪೂರ್ ಮತ್ತು ಕೃತಿ ಸನೋನ್ ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದಾರೆ.

# ಸಾಲು ಸಾಲು ಚಿತ್ರಗಳಲ್ಲಿ ಉಪೇಂದ್ರ ಬ್ಯುಸಿ;

ನಟ ಉಪೇಂದ್ರ ಸದ್ಯ ಹಲವು ರೋಮಾಂಚಕಾರಿ ಚಿತ್ರಗಳಲ್ಲಿ ಬ್ಯುಸಿಯಾಗಿದ್ದಾರೆ. ಸೂಪರ್‌ಸ್ಟಾರ್ ರಜನಿಕಾಂತ್ ಅವರೊಂದಿಗೆ ತಮಿಳು ಚಿತ್ರ ಕೂಲಿ ಮತ್ತು ರಾಮ್ ಪೋತಿನೇನಿ ಅವರ ಮುಂಬರುವ ಚಿತ್ರ #ಖಂಕಔ22 ಸೇರಿದಂತೆ ಬಹು ಭಾಷೆಗಳಲ್ಲಿ ನಟಿಸಲಿದ್ದಾರೆ. ಇತ್ತ ಕನ್ನಡ ಚಿತ್ರರಂಗದಲ್ಲೂ ಹಲವಾರು ಯೋಜನೆಗಳಲ್ಲಿ ಕೆಲಸ ಮಾಡುತ್ತಿದ್ದಾರೆ.

ಉಪೇಂದ್ರ ಅವರು ತಮ್ಮ ಬಹುನಿರೀಕ್ಷಿತ 45 ಸಿನಿಮಾ ಬಿಡುಗಡೆಗೆ ಸಜ್ಜಾಗುತ್ತಿದ್ದಾರೆ. ಈ ಚಿತ್ರವನ್ನು ಸಂಗೀತ ನಿರ್ದೇಶಕ ಅರ್ಜುನ್ ಜನ್ಯಾ ನಿರ್ದೇಶಿಸಿದ್ದು, ಸೂರಜ್ ಪ್ರೊಡಕ್ಷನ್ಸ್ ಅಡಿಯಲ್ಲಿ ನಿರ್ಮಿಸಲಾಗಿದೆ. ಈ ಸಿನಿಮಾ ಈಗಾಗಲೇ ಅಭಿಮಾನಿಗಳಲ್ಲಿ ತೀವ್ರ ಕುತೂಹಲ ಮೂಡಿಸಿದ್ದು, ಆಗಸ್ಟ್ 15 ರಂದು ಬಿಡುಗಡೆಯಾಗಲಿದೆ. ಅವರ ಬಳಿ ಬುದ್ಧಿವಂತ 2 ಸಿನಿಮಾ ಕೂಡ ಇದೆ. ಈ ಸಿನಿಮಾ ನಿರ್ಮಾಣ ಹಂತದಲ್ಲಿದೆ. ಇದರ ಜೊತೆಗೆ, ಶೀಘ್ರದಲ್ಲೇ ನಾಗಣ್ಣ ನಿರ್ದೇಶನದ, ನಿರ್ಮಾಪಕ ಸೂರಪ್ಪ ಬಾಬು ಅವರ ಬೆಂಬಲದೊಂದಿಗೆ ಭಾರ್ಗವ ಸಿನಿಮಾದ ಕೆಲಸ ಆರಂಭಿಸಲಿದ್ದಾರೆ.

ಇದರೊಂದಿಗೆ, ಉಪೇಂದ್ರ ಅವರು ಇನ್ನೂ ಎರಡು ಕನ್ನಡ ಚಿತ್ರಗಳಿಗೆ ಸಹಿ ಹಾಕುವ ಹಂತದಲ್ಲಿದ್ದಾರೆ. 'ನಾನು ಕರ್ವ ಮತ್ತು ಭೂಮಂತರ್ ನಿರ್ದೇಶಕ ನವನೀತ್ ಅವರೊಂದಿಗೆ ರಘು ನಿರ್ಮಿಸುವ ಹೊಸ ಚಿತ್ರದಲ್ಲಿ ಕೆಲಸ ಮಾಡುತ್ತೇನೆ. ಇದು ತುಂಬಾ ಆಸಕ್ತಿದಾಯಕ ವಿಷಯವಾಗಿದೆ ಮತ್ತು ಸದ್ಯ ನಿರ್ಮಾಣ ಹಂತದಲ್ಲಿದೆ' ಎಂದು ಅವರು ಹಂಚಿಕೊಳ್ಳುತ್ತಾರೆ.

ಭೂಮಂತರ್ ನಿರ್ಮಾಪಕ ತರುಣ್ ಶಿವಪ್ಪ ಅವರೊಂದಿಗೆ ಚರ್ಚೆಯಲ್ಲಿದ್ದು, ಶೀಘ್ರದಲ್ಲೇ ಚಿತ್ರವೊಂದರಲ್ಲಿ ಒಟ್ಟಿಗೆ ಕೆಲಸ ಮಾಡಲು ಯೋಜಿಸಿದ್ದೇವೆ' ಎಂದು ಉಪೇಂದ್ರ ಹೇಳುತ್ತಾರೆ.

# ಫೌಜಿ'ಯಲ್ಲಿ ಪ್ರಭಾಸ್ ಜೊತೆ ಕೆಲಸ ಮಾಡುವುದು ವೃತ್ತಿಜೀವನದ ಪ್ರಮುಖ ಘಟ್ಟ: ಚೈತ್ರಾ ಜೆ ಆಚಾರ್

ತಲೆದಂಡ, ಟೋಬಿ, ಸಪ್ತ ಸಾಗರದಾಚೆ ಎಲ್ಲೋ: ಸೈಡ್ ಬಿ ಮತ್ತು ಬ್ಲಿಂಕ್ ಚಿತ್ರಗಳಲ್ಲಿ ನಟಿಸಿ ಸೈ ಎನಿಸಿಕೊಂಡ ಚೈತ್ರ ಆಚಾರ್ ಇದೀಗ ಕನ್ನಡ ಚಿತ್ರರಂಗದಲ್ಲಿ ಮಾತ್ರವಲ್ಲದೆ ಇತರ ಭಾಷೆಗಳಲ್ಲಿಯೂ ಕೆಲಸ ಮಾಡುತ್ತಿದ್ದಾರೆ. ಸಿದ್ಧಾರ್ಥ್ ಜೊತೆಗೆ 3ಃಊಎ ಮೂಲಕ ತಮಿಳು ಚಿತ್ರಕ್ಕೆ ಪದಾರ್ಪಣೆ ಮಾಡಿದ ನಂತರ, ನಟಿ ಇದೀಗ ತೆಲುಗು ಉದ್ಯಮಕ್ಕೂ ಬಹುದೊಡ್ಡ ಚಿತ್ರದ ಮೂಲಕ ಎಂಟ್ರಿ ಕೊಡುತ್ತಿದ್ದಾರೆ.

ಪ್ರಭಾಸ್ ನಟಿಸಿ, ಹನು ರಾಘವಪುಡಿ ನಿರ್ದೇಶಿಸಿದ 'ಫೌಜಿ' ಎಂಬ ಪೀರಿಯಡ್ ವಾರ್ ಆಕ್ಷನ್ ಎಂಟರ್‌ಟೈನರ್ ಮೂಲಕ ಚಿತ್ರಾ ತೆಲುಗು ಚಿತ್ರರಂಗಕ್ಕೆ ಪದಾರ್ಪಣೆ ಮಾಡುತ್ತಿದ್ದಾರೆ. ಈ ಚಿತ್ರದಲ್ಲಿ ಹೊಸಬರಾದ ಇಮಾನ್ವಿ ಮತ್ತು ಮಿಥುನ್ ಚಕ್ರವರ್ತಿ, ಜಯಪ್ರದಾ ಮತ್ತು ಅನುಪಮ್ ಖೇರ್ ಅವರಂತಹ ಅನುಭವಿಗಳು ಕೂಡ ಇದ್ದಾರೆ. ಚೈತ್ರಾ ಇತ್ತೀಚೆಗಷ್ಟೇ ಚಿತ್ರದ ಸೆಟ್‌ಗೆ ಸೇರಿಕೊಂಡಿದ್ದು, 'ಚಿತ್ರೀಕರಣವು ಬಹಳ ಆಸಕ್ತಿದಾಯಕವಾಗಿ ಪ್ರಾರಂಭವಾಗಿದೆ' ಎಂದು ಹೇಳುತ್ತಾರೆ.



ಫೌಜಿ ತಮ್ಮ ನಟನಾ ವೃತ್ತಿಜೀವನದ ಒಂದು ಪ್ರಮುಖ ಘಟ್ಟದಲ್ಲಿ ಬಂದಿತು ಮತ್ತು ಈ ಪ್ರಮಾಣದ ಯೋಜನೆಯು ಒಂದು ಹೊಸ ಅನುಭವವಾಗಿದೆ. 'ಫೌಜಿಯ ಭಾಗವಾಗಿರುವುದು ಮುಖ್ಯವಾಗಿದೆ. ನನಗೆ ದೊಡ್ಡ ಚಿತ್ರದಲ್ಲಿ ಕೆಲಸ ಮಾಡಲು ಅವಕಾಶ ಸಿಗುತ್ತದೆ ಮತ್ತು ಪ್ರಭಾಸ್ ಅವರೊಂದಿಗೆ ಕೆಲಸ ಮಾಡುವುದು ಒಂದು ಉತ್ತಮ ಕಲಿಕೆಯ ಅನುಭವವಾಗಿದೆ. ಬೃಹತ್ ಪ್ರೊಡಕ್ಷನ್‌ಗಳು ಹೇಗೆ ಕಾರ್ಯನಿರ್ವಹಿಸುತ್ತವೆ, ಸೆಟ್‌ನ ಲಯ, ಕರಕುಶಲತೆ ಮತ್ತು ದೊಡ್ಡ ಮಟ್ಟದ ಚಿತ್ರವನ್ನು ನಿರ್ಮಿಸುವ ಕುರಿತು ನಾನು ಅರ್ಥಮಾಡಿಕೊಳ್ಳಲು ಬಯಸುತ್ತೇನೆ. ಕಥೆಗೆ ಇದು ಪ್ರಮುಖವಾದ ಪಾತ್ರವಾಗಿರುವುದರಿಂದ ಈ ಬಗ್ಗೆ ಉತ್ಸುಕಳಾಗಿದ್ದೇನೆ. ದೊಡ್ಡದೋ ಅಥವಾ ಚಿಕ್ಕದೋ ನನಗೆ ಮುಖ್ಯವಲ್ಲ. ಚಿತ್ರವು ನಿರ್ಮಿಸುವ ಪ್ರಪಂಚವು ಮುಖ್ಯವಾದುದು ಮತ್ತು ಆ ಅರ್ಥದಲ್ಲಿ, ಫೌಜಿ ಬೇರೆ ಲೆವೆಲ್‌ನಲ್ಲಿದೆ' ಎಂದು ಹೇಳುತ್ತಾರೆ ಚೈತ್ರಾ.

ಕನ್ನಡ ಚಿತ್ರರಂಗದಲ್ಲಿಯೂ ಚೈತ್ರಾ ಅವರು 'ಮಾರ್ನಮಿ' ಚಿತ್ರದ ಬಿಡುಗಡೆಗೆ ಎದುರು ನೋಡುತ್ತಿದ್ದು, ಇದು ಬಹು ಭಾಷೆಗಳಲ್ಲಿ ಬಿಡುಗಡೆಯಾಗುವ ನಿರೀಕ್ಷೆಯಿದೆ. ಚೈತ್ರಾ ಮತ್ತೊಂದು ತೆಲುಗು ಚಿತ್ರಕ್ಕೂ ಸಹಿ ಹಾಕಿದ್ದು, ಚಿತ್ರತಂಡದ ಅಧಿಕೃತ ಘೋಷಣೆ ಬಾಕಿ ಇದೆ.

# ದಿ. ನಟ 'ಕಲಾತಪಸ್ವಿ' ರಾಜೇಶ್ ಮೊಮ್ಮಗ ಚಿತ್ರರಂಗಕ್ಕೆ ಎಂಟ್ರಿ: 'ಮುಜುಗರ' ಸಿನಿಮಾಗೆ ಚಾಲನೆ

**ಕನ್ನಡ ಚಿತ್ರರಂಗವು ಪ್ರಸಿದ್ಧ ಕುಟುಂಬದಿಂದ ಬಂದ ಹೊಸ ಪ್ರತಿಭೆಯನ್ನು ಸ್ವಾಗತಿಸಲು ಸಜ್ಜಾಗಿದೆ. ನಟ ಅರ್ಜುನ್ ಸರ್ಜಾ ಅವರ ಮಾವ ರಾಜೇಶ್ ಅವರ ಮೊಮ್ಮಗ ಸಾಯಿನಂದ್ ಸಿನಿಮಾ ರಂಗಕ್ಕೆ ಎಂಟ್ರಿ ಕೊಡುತ್ತಿದ್ದಾರೆ.**

**ರಾಜೇಶ್ ಅವರ ಮೊಮ್ಮಗ ಸಾಯಿನಂದ್ ಅಭಿನಯದ 'ಮುಜುಗರ' ಚಿತ್ರವು ಇತ್ತೀಚೆಗೆ ಪ್ರಾರಂಭವಾಯಿತು, ಶಾಂತ ಶ್ರೀನಿವಾಸ್ ನಿರ್ಮಿಸುತ್ತಿರುವ ಈ ಚಿತ್ರವನ್ನು ತರುಣ್ ಎನ್ (ಜ್ಯೋತಿಪ್ರಿಯ) ನಿರ್ದೇಶಿಸುತ್ತಿದ್ದಾರೆ. ಚಿತ್ರದ ಮೊದಲ ಸನ್ನಿವೇಶಕ್ಕೆ ಪ್ರಮೋದ್ ಶೆಟ್ಟಿ ಆರಂಭ ಫಲಕ ತೋರಿದರು. ನಿರ್ಮಾಪಕಿ ಶಾಂತ ಶ್ರೀನಿವಾಸ್ ಕ್ಯಾಮೆರಾ ಚಾಲನೆ ಮಾಡಿದರು.**



ನನ್ನ ತಾತ ರಾಜೇಶ್ ಯಾವಾಗಲೂ ನನಗೆ ಸ್ಫೂರ್ತಿ. ಅವರು ಇಂದು ಬದುಕಿದ್ದಿದ್ದರೇ ತುಂಬಾ ಹೆಮ್ಮೆಪಡುತ್ತಿದ್ದರು. ನಾನು ನಾಗತಿಹಳ್ಳಿ ಚಂದ್ರಶೇಖರ್ ಅವರ ಟೆಂಟ್ ಶಾಲೆಯಲ್ಲಿ ನಟನಾ ಕೋರ್ಸ್ ಪೂರ್ಣಗೊಳಿಸಿದ್ದೇನೆ, ನಾಯಕನಾಗಿ ಇದು ನನ್ನ ಮೊದಲ ಚಿತ್ರ. ಈ ಅವಕಾಶಕ್ಕಾಗಿ ನಿರ್ಮಾಪಕ ಮತ್ತು ನಿರ್ದೇಶಕರಿಗೆ ನಾನು ಕೃತಜ್ಞನಾಗಿದ್ದೇನೆ ಎಂದು ಸಾಯಿ ನಂದ್ ಹೇಳಿದ್ದಾರೆ.

ನನಗೆ ಚಲನಚಿತ್ರೋದ್ಯಮದೊಂದಿಗೆ 20 ವರ್ಷಗಳ ಒಡನಾಟವಿದೆ, ನಾಗಾಭರಣ, ಅನಂತರಾಜು, ಅಮರ್ ಮತ್ತು 'ಕಾಂತಿ' ಭರತ್ ಅವರಂತಹ ದಿಗ್ಗಜರ ನಿರ್ದೇಶನದಲ್ಲಿ ಕೆಲಸ ಮಾಡಿದ್ದೇನೆ. ಮುಜುಗುರ ನನ್ನ ಮೊದಲ ಸ್ವತಂತ್ರ ನಿರ್ದೇಶನದ ಪ್ರಾಜೆಕ್ಟ್ ಆಗಿದೆ. ಈ ಕಥೆ ಕಾಫಿ ಎಸ್ಟೇಟ್ ಸುತ್ತ ನಡೆಯುವ ಪ್ರೇಮಕಥೆಯಾಗಿದೆ" ಎಂದು ನಿರ್ದೇಶಕ ತರುಣ್ ಎನ್ ತಿಳಿಸಿದ್ದಾರೆ.

# ಮರ್ಡರ್ ಮಿಸ್ಟ್ರಿ 'ಕೌಂತೇಯ' ಸಿನಿಮಾದಲ್ಲಿ ನೆಗೆಟಿವ್ ಪಾತ್ರದಲ್ಲಿ ಮನೋರಂಜನ್ ರವಿಚಂದ್ರನ್!



ಕೌಂತೇಯ ಚಿತ್ರದಲ್ಲಿ ಮನೋರಂಜನ್ ರವಿಚಂದ್ರನ್ ಖಳನಾಯಕನಾಗಿ ಕಾಣಿಸಿಕೊಳ್ಳುತ್ತಿದ್ದಾರೆ. ಬಿ.ಕೆ.ಚಂದ್ರಹಾಸ ಕಥೆ, ಚಿತ್ರಕಥೆ ಬರೆದುಆಕ್ಷನ್ ಕಟ್ ಹೇಳುತ್ತಿರುವ ಚಿತ್ರದ ಶೇಕಡ 70ರಷ್ಟು ಚಿತ್ರೀಕರಣ ಮುಕ್ತಾಯಗೊಂಡಿದೆ ಎಂದು ಚಿತ್ರತಂಡ ಹೇಳಿದೆ.

ಅಚ್ಯುತ್ ಕುಮಾರ್ ಪ್ರಮುಖ ಪಾತ್ರದಲ್ಲಿರುವ ಚಿತ್ರ ಮೈಸೂರಿನ ಸುತ್ತಮುತ್ತ ಚಿತ್ರೀಕರಣಗೊಳ್ಳುತ್ತಿದೆ. ಈ ಸಿನಿಮಾದಲ್ಲಿ ಅಚ್ಯುತ್ ಕುಮಾರ್ ಸಕಾರಾತ್ಮಕ ಪಾತ್ರದಲ್ಲಿ ಕಾಣಿಸಿಕೊಂಡರೆ, ಇದೇ ಮೊದಲ ಬಾರಿಗೆ ಮನೋರಂಜನ್ ಖಳನಾಯಕನ ಪಾತ್ರಕ್ಕೆ ಬಣ್ಣ ಹಚ್ಚಿದ್ದಾರೆ.

ಶರಣ್ಯ ಶೆಟ್ಟಿ ಚಿತ್ರದ ನಾಯಕಿ. ಅಚ್ಯುತ್ ಕುಮಾರ್ ಮಗಳ ಪಾತ್ರದಲ್ಲಿ ಶರಣ್ಯ ಕಾಣಿಸಿಕೊಂಡಿದ್ದಾರೆ. ಮನೋರಂಜನ್‌ಗೆ ಜೋಡಿಯಾಗಿ ಅನನ್ಯ ರಾಜಶೇಖರ್ ನಟಿಸುತ್ತಿದ್ದಾರೆ. ಎಸಿಪಿಯಾಗಿ ಪ್ರಿಯಾಂಕಾ ತಿಮ್ಮೇಶ್ ಕಾಣಿಸಿಕೊಂಡಿದ್ದಾರೆ.

ಸುರೇಶ್ ಕುಮಾರ್ ಬಂಡವಾಳ ಹೂಡಿದ್ದಾರೆ. ಹರಿ. ಪಿ.ಎಲ್.ರವಿ ಛಾಯಾಚಿತ್ರಗ್ರಹಣ ಈ ಚಿತ್ರಕ್ಕಿದೆ. ಕೌಂತೇಯ ಅಂದರೆ ಕುಂತಿಪುತ್ರ ಎಂದರ್ಥ. ಈ ಚಿತ್ರದಲ್ಲಿ ಕೌಂತೇಯ ಯಾರು ಎಂಬುದೇ ಕುತೂಹಲದ ಸಂಗತಿ. ಮರ್ಡರ್ ಮಿಸ್ಟ್ರಿ ಕಥೆಯನ್ನು ಕೌತುಕವಾಗಿ ತೆಗೆದುಕೊಂಡು ಹೋಗಿದ್ದೇವೆ. ನಿರೂಪಣೆಯಲ್ಲೂ ಭಿನ್ನತೆ ಇದೆ ಎಂದಿದೆ ಚಿತ್ರತಂಡ. ಮನೋರಂಜನ್ ಅವರ ಅಭಿನಯವು ಚಿತ್ರದ ಅತ್ಯಂತ ಚರ್ಚೆಯ ಅಂಶವಾಗಲಿದೆ ಎಂದು ಅವರು ಭರವಸೆ ನೀಡುತ್ತಾರೆ.

# 'ಆಜಾದ್ ಭಾರತ್' ಚಿತ್ರ ಬಿಡುಗಡೆ

**ನಟಿ, ಬರಹಗಾರ್ತಿ, ನಿರ್ದೇಶಕಿ ಮತ್ತು ನಿರ್ಮಾಪಕಿ ರೂಪಾ ಅಯ್ಯರ್ ಅವರ ಮುಂಬರುವ ಹಿಂದಿ ಚಿತ್ರ 'ಆಜಾದ್ ಭಾರತ್' ಜನವರಿ 2 ರಂದು ಸುಭಾಷ್ ಚಂದ್ರ ಬೋಸ್ ಅವರ ಜನ್ಮ ತಿಂಗಳಿನಂದು ಬಿಡುಗಡೆಯಾಗಲು ಸಜ್ಜಾಗಿದೆ. ಈ ಚಿತ್ರ ಭಾರತದಾದ್ಯಂತ 1,000ಕ್ಕೂ ಹೆಚ್ಚು ಪರದೆಗಳಲ್ಲಿ ಪ್ರಥಮ ಪ್ರದರ್ಶನಗೊಳ್ಳಲಿದೆ.**

**ಆಜಾದ್ ಭಾರತ್ ಚಿತ್ರವು ಧೈರ್ಯಶಾಲಿ ಸ್ವಾತಂತ್ರ್ಯ ಹೋರಾಟಗಾರ್ತಿ ನೀರಾ ಆರ್ಯ ಅವರ ಕಥೆಯನ್ನು ಹೇಳುತ್ತದೆ ಮತ್ತು ಬೋಸ್ ಸ್ಥಾಪಿಸಿದ ಮೊದಲ ಮಹಿಳಾ ಸೈನ್ಯದ ಬಗೆಗಿನ ಆಸಕ್ತಿದಾಯಕ ವಿಚಾರಗಳನ್ನು ತೆರೆಮೇಲೆ ತರಲಿದೆ. ರೂಪಾ ಅಯ್ಯರ್ ಅವರು ನೀರಾ ಆರ್ಯ ಪಾತ್ರದಲ್ಲಿ, ಹಿತಾ ಚಂದ್ರಶೇಖರ್ ದುರ್ಗಾ ಪಾತ್ರದಲ್ಲಿ ಮತ್ತು ಶ್ರೇಯಸ್ ತಲ್ಪಡೆ ನೇತಾಜಿ ಪಾತ್ರದಲ್ಲಿ ನಟಿಸಿದ್ದಾರೆ.**

**ಅಲ್ಲದೆ, ಸುರೇಶ್ ಒಬೆರಾಯ್, ವೈಜನಾಥ್ ಬಿರಾದಾರ್, ಸುಚೇಂದ್ರ ಪ್ರಸಾದ್ ಮತ್ತು ಜೀ ಚಾನೆಲ್ ಮುಖ್ಯಸ್ಥ ಸುಭಾಷ್ ಚಂದ್ರ ಅವರು ಪ್ರಮುಖ ಪಾತ್ರಗಳಲ್ಲಿ ನಟಿಸಿದ್ದಾರೆ.**



ಮೊದಲಿಗೆ 'ನೀರಾ ಆರ್ಯ' ಎಂದು ಹೆಸರಿಡಲಾಗಿದ್ದ ಈ ಚಿತ್ರದ ಶೀರ್ಷಿಕೆಯನ್ನು ಚಿತ್ರತಂಡ 'ಆಜಾದ್ ಭಾರತ್' ಎಂದು ಬದಲಿಸಿದೆ.

ಈ ಚಿತ್ರವು ಪ್ರೊಡಕ್ಷನ್ ಕೆಲಸಗಳನ್ನು ಪೂರ್ಣಗೊಳಿಸಲು ಸುಮಾರು ಮೂರು ವರ್ಷಗಳನ್ನು ತೆಗೆದುಕೊಂಡಿದೆ. ಇದು ಭಾರತದ ಸ್ವಾತಂತ್ರ್ಯ ಹೋರಾಟದ ಹೇಳಿಲ್ಲದ ಘಟನೆಗಳನ್ನು ಚಿತ್ರಿಸುತ್ತದೆ. ಇದರಲ್ಲಿ ಧೈರ್ಯ ಮತ್ತು ದೇಶಭಕ್ತಿಯನ್ನು ಒತ್ತಿಹೇಳುವ ನೀರ ಆರ್ಯ ಅನುಭವಿಸಿದ ಕಠಿಣ ಶಿಕ್ಷೆಯೂ ಸೇರಿದೆ.ಈ ಚಿತ್ರವು ಪ್ರೊಡಕ್ಷನ್ ಕೆಲಸಗಳನ್ನು ಪೂರ್ಣಗೊಳಿಸಲು ಸುಮಾರು ಮೂರು ವರ್ಷಗಳನ್ನು

ತೆಗೆದುಕೊಂಡಿದೆ.

ಇದು ಭಾರತದ ಸ್ವಾತಂತ್ರ್ಯ ಹೋರಾಟದ ಹೇಳಿಲ್ಲದ ಘಟನೆಗಳನ್ನು ಚಿತ್ರಿಸುತ್ತದೆ. ಇದರಲ್ಲಿ ಧೈರ್ಯ ಮತ್ತು ದೇಶಭಕ್ತಿಯನ್ನು ಒತ್ತಿಹೇಳುವ ನೀರ ಆರ್ಯ ಅನುಭವಿಸಿದ ಕಠಿಣ ಶಿಕ್ಷೆಯೂ ಸೇರಿದೆ.

ಚಿತ್ರಕ್ಕೆ ರೂಪಾ ಅಯ್ಯರ್ ಅವರ ಪತಿ ಗೌತಮ್ ಶ್ರೀವತ್ಸ ಸಂಗೀತ ಸಂಯೋಜಿಸಿದ್ದು, ಮಹಾರಾಷ್ಟ್ರದ ಮುಖ್ಯಮಂತ್ರಿ ದೇವೇಂದ್ರ ಫಡ್ನವಿಸ್ ಅವರ ಪತ್ನಿ ಅಮೃತ ಫಡ್ನವಿಸ್ ಹಾಡಿರುವ ಒಂದು ಹಾಡು ಸೇರಿದಂತೆ ಒಟ್ಟು ಏಳು ಹಾಡುಗಳಿವೆ. ಯಶ್ ರಾಜ್ ಸ್ಟುಡಿಯೋದಲ್ಲಿ 11.1 ಧ್ವನಿ ತಂತ್ರಜ್ಞಾನದೊಂದಿಗೆ ರೀ–ರೆಕಾರ್ಡಿಂಗ್ ಪೂರ್ಣಗೊಂಡಿದೆ.

ಶ್ರೀ ಕ್ರೇಜಿ ಮೈಂಡ್ಸ್ ಸಂಕಲನ ಮಾಡಿರುವ ಈ ಚಿತ್ರವನ್ನು ರೂಪಾ ಅಯ್ಯರ್, ಜಯಗೋಪಾಲ್ ಮತ್ತು ರಾಜೇಂದ್ರ ರಾಜನ್ ನಿರ್ಮಿಸಿದ್ದಾರೆ.

ಚಿತ್ರದ ಸತ್ಯಾಸತ್ಯತೆಯನ್ನು ಖಚಿತಪಡಿಸಿಕೊಳ್ಳಲು ರೂಪಾ ಅಯ್ಯರ್ ಅವರು ಸುಭಾಷ್ ಚಂದ್ರ ಬೋಸ್ ಅವರ ಕುಟುಂಬದೊಂದಿಗೆ ಸಮಾಲೋಚಿಸಿದರು ಮತ್ತು ಸಂಸತ್ ಭವನ ಸೇರಿದಂತೆ ಗಣ್ಯರಿಗೆ ಚಿತ್ರವನ್ನು ಪ್ರದರ್ಶಿಸಲು ಯೋಜಿಸಿದ್ದಾರೆ.

'ಪ್ರತಿಯೊಂದು ದೃಶ್ಯವೂ ಭಾರತದ ಸ್ವಾತಂತ್ರ್ಯ ಹೋರಾಟದ ಹೇಳಿಲ್ಲದ ಕಥೆಗಳನ್ನು ಪ್ರತಿಬಿಂಬಿಸುತ್ತದೆ.

ಇದನ್ನು ಎಚ್ಚರಿಕೆಯಿಂದ ಮತ್ತು ದೃಢನಿಶ್ಚಯದಿಂದ ರಚಿಸಲಾಗಿದೆ' ಎಂದು ಅವರು ಹೇಳಿದರು.ಹಿರಿಯ ನಟ ಸುಚೇಂದ್ರ ಪ್ರಸಾದ್ ಚಿತ್ರದ ಮಹತ್ವವನ್ನು ಎತ್ತಿ ತೋರಿಸಿದರೆ, ಹಿತಾ ಚಂದ್ರಶೇಖರ್ ದೇಶಭಕ್ತಿಯ ಪಾತ್ರದಲ್ಲಿ ನಟಿಸಲು ಹೆಮ್ಮೆ ವ್ಯಕ್ತಪಡಿಸಿದರು. ನಿರ್ಮಾಪಕರ ಪ್ರಕಾರ, ಆಜಾದ್ ಭಾರತ್ ಭಾರತದ ಸ್ವಾತಂತ್ರ್ಯ ಹೋರಾಟಗಾರರಿಗೆ ಗೌರವ ಸಲ್ಲಿಸಲಿದೆ.

# ಆರ್ಯನ್ ಖಾನ್ ಜೊತೆ ಧನ್ಯಾ ರಾಮ್ ಕುಮಾರ್

ಬಾಲಿವುಡ್ ನಟ ಶಾರುಖ್ ಖಾನ್ ಪುತ್ರ ಆರ್ಯನ್ ಖಾನ್ ಜೊತೆಗೆ ದೊಡ್ಮನೆ ಕುಟುಂಬದ ಕುಡಿ ಧನ್ಯಾ ರಾಮ್‌ಕುಮಾರ್ ಅವರು ಕಾಣಿಸಿಕೊಂಡಿದ್ದು, ಈ ಕುರಿತ ಫೋಟೋಗಳು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗುತ್ತಿವೆ.

ವೈರಲ್ ಆಗಿರುವ ಫೋಟೋದಲ್ಲಿ ಧನ್ಯಾ ರಾಮ್‌ಕುಮಾರ್ ಅವರು ಆರ್ಯನ್ ಖಾನ್ ಪಕ್ಕದಲ್ಲಿ ನಿಂತು ಫೋಟೋಗೆ ಪೋಸ್ ಕೊಟ್ಟಿರುವುದು ಕಂಡು ಬಂದಿದೆ.

ಈ ಫೋಟೋವನ್ನ ಥಟ್ ಅಂತ ನೋಡಿದ್ರೆ ಆರ್ಯನ್ ಖಾನ್ ಜೊತೆ ಧನ್ಯಾ ಸಿನಿಮಾ ಮಾಡ್ತಿದ್ದಾರಾ ಎನ್ನುವ ಪ್ರಶ್ನೆ ಮೂಡುತ್ತಿದೆ. ಆದರೆ. ಬೆಂಗಳೂರಿಗೆ ಕಾರ್ಯಕ್ರಮದಲ್ಲಿ ಬಂದಿದ್ದ ವೇಳೆ ಧನ್ಯಾ, ಆರ್ಯನ್ ಖಾನ್‌ರನ್ನ ಭೇಟಿಯಾಗಿದ್ದು ಈ ವೇಳೆ ಫೋಟೋ ತೆಗೆಸಿಕೊಂಡಿದ್ದಾರೆಂದು ತಿಳಿದುಬಂದಿದೆ.

ವೆಬ್ ಸಿರೀಸ್ ನಿರ್ದೇಶಕ ಆಗಿರುವ ಆರ್ಯನ್ ಖಾನ್ ಇತ್ತೀಚೆಗೆ ಬೆಂಗಳೂರಿನಲ್ಲಿ ನಡೆದ ಕಾರ್ಯಕ್ರಮವೊಂದಕ್ಕೆ ಅತಿಥಿಯಾಗಿ ಬಂದಿದ್ದರು.



ಈ ವೇಳೆ ನಟಿ ಧನ್ಯಾ ರಾಮ್‌ಕುಮಾರ್ ಅವರು ಆರ್ಯನ್ ಜೊತೆ ಫೋಟೋ ತೆಗೆಸಿಕೊಂಡಿದ್ದಾರೆ. ಕನ್ನಡ ಸಿನಿಮಾ ನಟಿಯಾಗಿರುವ ಡಾ.ರಾಜ್‌ಕುಮಾರ್ ಮೊಮ್ಮಗಳು ಧನ್ಯಾ ಅವರು ಆರ್ಯನ್ ಖಾನ್ ಜೊತೆ ಕಾಣಿಸಿಕೊಂಡಿರುವ ಫೋಟೋಗಳು ಇದೀಗ ಸೋಷಿಯಲ್ ಮೀಡಿಯಾದಲ್ಲಿ ವೈರಲ್ ಆಗಿದೆ.

# ಮಗಳ ಕೆನ್ನೆಗೆ ಅರಿಶಿನ ಹಚ್ಚಿದ ಕಿಚ್ಚ ಸುದೀಪ್

ಸ್ಯಾಂಡಲ್‌ವುಡ್ ಬಾದ್ ಷಾ ಕಿಚ್ಚ ಸುದೀಪ್ ಮನೆಯಲ್ಲಿ ಮದುವೆ ಸಂಭ್ರಮ ಶುರುವಾಗಿದ್ದು, ಮದುವೆಯ ಅರಿಶಿನ ಶಾಸ್ತ್ರದ ಫೋಟೋಗಳು ಸಾಮಾಜಿಕ ಜಾಲತಾಣಗಳಲ್ಲಿ ವೈರಲ್ ಆಗಿದೆ.

ಸುದೀಪ್ ಅವರ ಅಕ್ಕನ ಮಗನ ಮದುವೆ ಶ್ರೀಲಂಕಾದಲ್ಲಿ ಆಪ್ತರು ಹಾಗೂ ಕುಟುಂಬಸ್ಥರ ಸಮ್ಮುಖದಲ್ಲಿ ಅದ್ದೂರಿಯಾಗಿ ನಡೆದಿದೆ.

ಸುದೀಪ್ ಅಕ್ಕನ ಮಗನ (ಸೋದರಳಿಯ) ಮದುವೆ ಶಾಸ್ತ್ರದಲ್ಲಿ ಸುದೀಪ್ ಕುಟುಂಬ ಭಾಗಿಯಾಗಿದೆ. ಅರಿಶಿನ ಶಾಸ್ತ್ರದಲ್ಲಿ ನವಜೋಡಿ ಜೊತೆ ತಮ್ಮ ಪ್ರೀತಿಯ ಮಗಳಿಗೂ ಸುದೀಪ್ ಮತ್ತು ಪ್ರಿಯಾ ಸುದೀಪ್ ಅರಿಶಿಣ ಹಚ್ಚಿದ್ದಾರೆ. ಅರಿಶಿನ ಶಾಸ್ತ್ರದ ಫೋಟೋಗಳನ್ನು ಸಾನ್ವಿ ಇನ್‌ಸ್ಟಾಗ್ರಾಂನಲ್ಲಿ ಹಂಚಿಕೊಂಡಿದ್ದು, ಈ ಫೋಟೋಗಳು ವೈರಲ್ ಆಗಿದೆ.





**"ವಿದ್ಯಾವಂತರಾಗಿ, ಸಂಘಟಿತರಾಗಿ ಮತ್ತು ಉತ್ತೇಜಿತರಾಗಿರಿ"**

-ಡಾ. ಬಿ.ಆರ್. ಅಂಬೇಡ್ಕರ್

## ಸಂವಿಧಾನ ಶಿಲ್ಪಿ, ಭಾರತ ರತ್ನ, ಬಾಬಾ ಸಾಹೇಬ ಡಾ. ಬಿ.ಆರ್. ಅಂಬೇಡ್ಕರ್ ರವರ

# 69ನೇ ಮಹಾಪರಿನಿರ್ವಾಣ ದಿನ

**ಡಿಸೆಂಬರ್ 6, 2025, ಶನಿವಾರ ಬೆಳಿಗ್ಗೆ 10.00 ಗಂಟೆಗೆ**

**ಸ್ಥಳ: ವಿಧಾನಸೌಧದ ಮುಂಭಾಗ [ ಪೂರ್ವ ದ್ವಾರ ], ಬೆಂಗಳೂರು**

## ಡಾ. ಬಿ.ಆರ್. ಅಂಬೇಡ್ಕರ್ ರವರ

## ಪ್ರತಿಮೆಗೆ ಮಾಲಾರ್ಪಣೆ ಮತ್ತು ಗೌರವ ಸಮರ್ಪಣೆ

| ಶ್ರೀ ಸಿದ್ದರಾಮಯ್ಯ | ಶ್ರೀ ಡಿ.ಕೆ. ಶಿವಕುಮಾರ್ | ಡಾ. ಹೆಚ್.ಸಿ. ಮಹದೇವಪ್ಪ |
|---|---|---|
| ಸನ್ಮಾನ್ಯ ಮುಖ್ಯಮಂತ್ರಿಗಳು | ಮಾನ್ಯ ಉಪ ಮುಖ್ಯಮಂತ್ರಿಗಳು | ಮಾನ್ಯ ಸಮಾಜ ಕಲ್ಯಾಣ ಸಚಿವರು |





ಡಾ. ಹೆಚ್.ಸಿ. ಮಹದೇವಪ್ಪ
ಮಾನ್ಯ ಸಮಾಜ ಕಲ್ಯಾಣ ಸಚಿವರು,
ಇಲಾಖೆಯ ಕಾರ್ಯಕ್ರಮಗಳ
ಪ್ರಗತಿ ಪರಿಶೀಲನೆ ನಡೆಸುತ್ತಿರುವುದು.

**ಸರ್ವರಿಗೂ ಆದರದ ಸುಸ್ವಾಗತ**

ವೈಜ್ಞಾನಿಕ ಮನೋಧರ್ಮ ಬೆಳೆಸಿಕೊಳ್ಳುವುದು; ಪ್ರಶ್ನೆ ಮಾಡುವ ಮತ್ತು ಬದಲಾವಣೆಗೆ ಒಡ್ಡಿಕೊಳ್ಳುವ ಮನಃಸ್ಥಿತಿ ಬೆಳೆಸಿಕೊಳ್ಳುವುದು.- ಪ್ರತಿಯೊಬ್ಬ ಭಾರತೀಯನ ಸಂವಿಧಾನಬದ್ಧ ಮೂಲಭೂತ ಕರ್ತವ್ಯ

CMofKarnataka https://dipr.karnataka.gov.in/ ಕರ್ನಾಟಕ ವಾರ್ತೆ

ಬ್ರಾಹ್ಮಣ ಸಮುದಾಯ / ಹಿಂದುಳಿದ ವರ್ಗಗಳ ಮಾಲೀಕತ್ವದ ಮತ್ತು ಸಂಪಾದಕತ್ವದ ಪತ್ರಿಕೆಗಳಿಗೆ ಪ್ರೋತ್ಸಾಹ ರೂಪದ ಜಾಹೀರಾತು

Published and Owned by : **PRATHIBHA M.S.,** Published at : No. 900/A2, Opp-Banashankri Temple Arch, Main Road, Shakti Nagara, Davanagere, Karnataka-577004. Printed by : **MALLIKARJUNAPPA H.G.** Printed at : SHIVA MEDIA HOUSE, No.900/A2, Opp-Banashankari Temple Arch, Main Road, Davanagere, Karnataka-577004. Editor: **MALLIKARJUNAPPA H.G.**